**ಸಂಪುಟ:** 05 **ಸಂಚಿಕೆ:** 242 **ಪುಟಗಳು:** 08 ಭಾನುವಾರ 16 ನವೆಂಬರ್ 2025

www.udayavahini.in · epaper.udayavahini.in · Udaya vahini news · Udaya vahini news · Udayavahini news youtube · udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 · +91 8035841833 · ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ನಮಗೆಲ್ಲರಿಗೂ ಸಮಾನ ಪ್ರತಿಭೆ ಇಲ್ಲ. ಆದರೆ, ನಮ್ಮ ಪ್ರತಿಭೆಯನ್ನು ಬೆಳೆಸಿಕೊಳ್ಳಲು ನಮಗೆಲ್ಲರಿಗೂ ಸಮಾನ ಅವಕಾಶವಿದೆ.

# ಏಕಸದಸ್ಯ ಪೀಠದ ಆದೇಶ ಪ್ರಶ್ನಿಸಿ ಎಕ್ಸ್ ಕಾರ್ಪ್‌ನಿಂದ ಮೇಲ್ಮನವಿ

• ಉದಯವಾಹಿನಿ, ಬೆಂಗಳೂರು

ಕಾನೂನುಬಾಹಿರ ಆನ್‌ಲೈನ್ ಮಾಹಿತಿಗಳನ್ನು ನಿರ್ಬಂಧಿಸುವ ಸಂಬಂಧ ಸಾಮಾಜಿಕ ಜಾಲತಾಣ ಸಂಸ್ಥೆಗಳಿಗೆ ಆದೇಶಿಸಲು 'ಸಹಯೋಗ' ಪೋರ್ಟಲ್ ಆರಂಭಿಸಿರುವ ಕೇಂದ್ರ ಸರಕಾರದ ಕ್ರಮ ಎತ್ತಿಹಿಡಿದಿದ್ದ ಹೈಕೋರ್ಟ್ ಏಕಸದಸ್ಯ ನ್ಯಾಯಪೀಠದ ತೀರ್ಪು ಪ್ರಶ್ನಿಸಿ ಎಕ್ಸ್ ಕಾರ್ಪ್ (ಟ್ವಿಟರ್) ಸಂಸ್ಥೆ ವಿಭಾಗೀಯ ನ್ಯಾಯಪೀಠಕ್ಕೆ ಮೇಲ್ಮನವಿ ಸಲ್ಲಿಸಿದೆ.




ಮಾಹಿತಿ ತಂತ್ರಜ್ಞಾನ ಕಾಯ್ದೆಯ ಸೆಕ್ಷನ್ 79(3)(ಬಿ) ವ್ಯಾಪ್ತಿಯನ್ನು ಪ್ರಶ್ನಿಸಿದ್ದ ಅರ್ಜಿ ವಜಾಗೊಳಿಸಿ ಸೆಪ್ಟೆಂಬರ್ 24ರಂದು ಏಕಸದಸ್ಯ ನ್ಯಾಯಪೀಠ ನೀಡಿದ್ದ ತೀರ್ಪು ರದ್ದುಕೋರಿ ಎಕ್ಸ್ ಕಾರ್ಪ್ ಮೇಲ್ಮನವಿ ಸಲ್ಲಿಸಿದೆ. ಅರ್ಜಿಯಲ್ಲಿ ಕಾನೂನು ಮತ್ತು ನ್ಯಾಯ ಸಚಿವಾಲಯ, ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ, ಗೃಹ ವ್ಯವಹಾರಗಳ ಸಚಿವಾಲಯ, ಹಣಕಾಸು ಸಚಿವಾಲಯ, ರಕ್ಷಣಾ ಸಚಿವಾಲಯ, ರೈಲ್ವೆ ಸಚಿವಾಲಯ, ಭಾರಿ ಕೈಗಾರಿಕಾ ಸಚಿವಾಲಯ, ಗ್ರಾಮೀಣಾಭಿವೃದ್ಧಿ ಸಚಿವಾಲಯಗಳ ಕಾರ್ಯದರ್ಶಿಗಳನ್ನು ಪ್ರತಿವಾದಿಯನ್ನಾಗಿಸಲಾಗಿದ್ದು, ಮೇಲ್ಮನವಿಯು ಇನ್ನಷ್ಟೇ ವಿಭಾಗೀಯ ನ್ಯಾಯಪೀಠದ ಮುಂದೆ ವಿಚಾರಣೆಗೆ ನಿಗದಿಯಾಗಬೇಕಿದೆ.

**ಏಕಸದಸ್ಯ ನ್ಯಾಯಪೀಠದ ಆದೇಶವೇನು:** ಸಾಮಾಜಿಕ ಮಾಧ್ಯಮದ ನಿಯಂತ್ರಣ ಅತ್ಯಗತ್ಯವಾಗಿದೆ ಎಂದು ಅಭಿಪ್ರಾಯಪಟ್ಟಿದ್ದ ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರಿದ್ದ ಏಕಸದಸ್ಯ ನ್ಯಾಯಪೀಠ ಎಕ್ಸ್ ಕಾರ್ಪ್ ಸಲ್ಲಿಸಿದ್ದ ರಿಟ್ ಅರ್ಜಿ ವಜಾಗೊಳಿಸಿತ್ತು. ಭಾರತೀಯ ನಾಗರಿಕನಲ್ಲದ ಅರ್ಜಿದಾರ ಎಕ್ಸ್ ಕಾರ್ಪ್ ಸಂಸ್ಥೆಯು ಸಂವಿಧಾನದ 19ನೇ ವಿಧಿ ಅಡಿಯಲ್ಲಿ ಆಶ್ರಯ ಪಡೆಯಲು ಸಾಧ್ಯವಿಲ್ಲ ಎಂದು ಹೇಳಿತ್ತು.

### ಎಕ್ಸ್ ಕಾರ್ಪ್ ಆಕ್ಷೇಪವೇನು

**ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯವು ಪೊಲೀಸರನ್ನೂ ಒಳಗೊಂಡಂತೆ ಕೇಂದ್ರ ಮತ್ತು ರಾಜ್ಯ ಸರಕಾರಿ ಸಂಸ್ಥೆಗಳಿಗೆ ಸೆಕ್ಷನ್ 69ಎ ಮೀರಿ ಸೆಕ್ಷನ್ 79(3)(ಬಿ) ಅಡಿ ಮಾಹಿತಿ ನಿರ್ಬಂಧಿಸಲು ನಿರ್ದೇಶಿಸಿದೆ ಎಂದು ಆರೋಪಿಸಿದ್ದ ಎಕ್ಸ್ ಕಾರ್ಪ್, ನಿರ್ಬಂಧ ಆದೇಶ ಮಾಡಲು ಸಿದ್ಧ ಮಾದರಿಯನ್ನೂ ನೀಡಿದೆ. ಇದು ಸುಪ್ರೀಂಕೋರ್ಟ್ ಆದೇಶ ಉಲ್ಲಂಘನೆಯಾಗಿದೆ. ಸೆಕ್ಷನ್ 79(3)(ಬಿ) ಅಡಿ ಕೇಂದ್ರ ಮತ್ತು ರಾಜ್ಯ ಸರಕಾರದ ಸಂಸ್ಥೆಗಳು ನಿರ್ಬಂಧ ಆದೇಶ ಮಾಡಲು ಅನುಮತಿಸುವ ಕೇಂದ್ರ ಗೃಹ ಇಲಾಖೆ ರೂಪಿಸಿರುವ ಸಹಯೋಗ್ ಪೋರ್ಟಲ್ ಅನ್ನೂ ಎಕ್ಸ್ ಪ್ರಶ್ನಿಸಿತ್ತು. ಸೆಕ್ಷನ್ 69ಎಗೆ ಪರ್ಯಾಯವಾಗಿ ಸಹಯೋಗ್ ಪೋರ್ಟಲ್ ವ್ಯವಸ್ಥೆ ರೂಪಿಸುವುದಕ್ಕೆ ಕಾನೂನಿನಲ್ಲಿ ಅವಕಾಶವಿಲ್ಲ ಎಂದು ರಿಟ್ ಅರ್ಜಿಯಲ್ಲಿ ಆಕ್ಷೇಪಿಸಿತ್ತು.**

ಅರ್ಜಿದಾರ ಸಂಸ್ಥೆಯು ತನ್ನ ಮೂಲಸ್ಥಾನವಾದ ಅಮೆರಿಕದಲ್ಲಿ ನಿಯಂತ್ರಣ ವ್ಯವಸ್ಥೆಗೆ ಒಳಪಟ್ಟಿದೆ. ಅಲ್ಲಿನ ವ್ಯಾಪ್ತಿಯಲ್ಲಿರುವ ಟ್ವಿಟ್ ತೆಗೆಯುವ ಕಾನೂನಿನ ಅಡಿ ಉಲ್ಲಂಘನೆಯನ್ನು ಕ್ರಿಮಿನಲ್ ಚಟುವಟಿಕೆ ಎಂದು ನಿರ್ಧರಿಸಲಾಗುತ್ತದೆ ಎಂದು ಅಲ್ಲಿ ಆದೇಶ ಪಾಲಿಸುತ್ತಿದೆ. ಆದರೆ, ಭಾರತದಲ್ಲಿ ಆ ದೇಶವನ್ನು ಪಾಲಿಸಲು ಎಕ್ಸ್ ಕಾರ್ಪ್ ನಿರಾಕರಿಸುತ್ತಿದೆ. ಇದು ಮುಖಗೇಡಿತನ ಎಂದು ಅಭಿಪ್ರಾಯಪಟ್ಟಿತ್ತು. ನಮ್ಮ ರಾಷ್ಟ್ರದ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸಲು ಬಯಸುವ ಪ್ರತಿಯೊಂದು ವೇದಿಕೆಯೂ ಸ್ವಾತಂತ್ರ್ಯವನ್ನು ಜವಾಬ್ದಾರಿ ತೆಗೆದುಕೊಳ್ಳಬೇಕು ಮತ್ತು ಪ್ರವೇಶದ ಸವಲತ್ತು ಅದರೊಂದಿಗೆ ಹೊಣೆಗಾರಿಕೆಯ ಗಂಭೀರ ಕರ್ತವ್ಯವನ್ನು ಹೊಂದಿದೆ ಎಂಬುದನ್ನು ಒಪ್ಪಿಕೊಳ್ಳಬೇಕು. ಆಧುನಿಕ ವಿಚಾರಗಳ ದುಂಡುಕಲೆಮನೆಯಾಗಿರುವ ಸಾಮಾಜಿಕ ಮಾಧ್ಯಮವನ್ನು ಅರಾಜಕ ಸ್ವಾತಂತ್ರ್ಯದ ಸ್ಥಿತಿಯಲ್ಲಿ ಬಿಡಲಾಗುವುದಿಲ್ಲ. ವಿಷಯದ ನಿಯಂತ್ರಣವು ಘನತೆಯನ್ನು ರಕ್ಷಿಸಲು ಮತ್ತು ಮಹಿಳೆಯರ ವಿರುದ್ಧದ ಅಪರಾಧ ನಿರ್ಬಂಧಿಸಲು ಅಗತ್ಯವಾಗಿದೆ. ಅನಾದಿ ಕಾಲದಿಂದಲೂ ಮಾಹಿತಿ ಮತ್ತು ಸಂಹವನವು ನಿಯಂತ್ರಣಕ್ಕೆ ಒಳಪಟ್ಟಿದ್ದು, ಮಾಹಿತಿದಾರರಿಂದ ಅಂಚೆ ಕಾಲದವರೆಗೆ, ಈಗ ವಾಟ್ಸಾಪ್, ಇನ್‌ಸ್ಟಾಗ್ರಾಂ ಮತ್ತು ಸ್ನಾಪ್‌ಚಾಟ್ ಎಲ್ಲವೂ ಸ್ಥಳೀಯ ಮತ್ತು ಜಾಗತಿಕವಾಗಿ ನಿಯಂತ್ರಣಕ್ಕೆ ಒಳಪಟ್ಟಿವೆ ಎಂದು ಹೈಕೋರ್ಟ್ ಆದೇಶದಲ್ಲಿ ಹೇಳಿತ್ತು.

## ಹೈಕಮಾಂಡ್ ನನ್ನನ್ನು ಕೇಳಿದರೆ ನನಗೇನೂ ಬೇಕೋ ಅದನ್ನು ಹೇಳುತ್ತೇನೆ

• ಉದಯವಾಹಿನಿ, ಬೆಂಗಳೂರು

ನನಗೆ ಏನೂ ತಿಳಿದಿಲ್ಲ. ಏನಾದರೂ ಮಾಹಿತಿ ಬೇಕೆಂದರೆ ಮುಖ್ಯಮಂತ್ರಿಗಳ ಬಳಿ ಮಾತನಾಡಿ' ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಹೇಳಿದರು. ಸಿಎಂ ಯಾರನ್ನು ಭೇಟಿ ಮಾಡಿದ್ದಾರೋ, ಏನನ್ನು ಮಾತನಾಡಿದ್ದಾರೋ ನನಗೆ ತಿಳಿದಿಲ್ಲ. ಮುಖ್ಯಮಂತ್ರಿಯೊಬ್ಬರು ಭೇಟಿಗೆ ಬಂದಾಗ ಸಮಯ ನೀಡುವ ವಾಡಿಕೆ ಇದೆ' ಎಂದರು. ಪಕ್ಷ ಹೇಗೆ ಹೇಳುತ್ತದೆಯೋ ಆ ರೀತಿ ಕೇಳಿಕೊಂಡು ಹೋಗಬೇಕು ನಾವೆಲ್ಲ. ಅಷ್ಟೇ ನಮ್ಮ ಕೆಲಸ' ಎಂದರು. ಮುಖ್ಯಮಂತ್ರಿಯವರು ಪ್ರಧಾನಿಯವರನ್ನು ಹಾಗೂ ಹೈಕಮಾಂಡ್ ಅನ್ನು ಭೇಟಿ ಮಾಡುತ್ತಿರುವ ಬಗ್ಗೆ ಕೇಳಿದಾಗ, 'ಭೇಟಿಯಾಗುವುದು ತಪ್ಪೇ? ನೀವುಗಳು ಬೇರೆ ಪಕ್ಷದವರ ಬಳಿ ಮಾತನಾಡಿದಂತೆ ಮಾತನಾಡುತ್ತಿದ್ದೀರಿ. ಅವರು ಎಲ್ಲರನ್ನೂ ಭೇಟಿ ಮಾಡುವ ಹಕ್ಕು ಹೊಂದಿದ್ದಾರೆ ಎಂದು ತಿಳಿಸಿದರು.

## ದೇಶದ ಸಂಸ್ಕೃತಿ ಉಳಿಸುವ ಅಗತ್ಯ: ಎಂ.ವೀರಪ್ಪ ಮೊಯಿಲಿ

• ಉದಯವಾಹಿನಿ, ಬೆಂಗಳೂರು

ಹೃದಯವನ್ನು ಬೆಸೆಯುವ ಅಮೂಲ್ಯವಾದ ಸಾಧನವೆಂದರೆ ಸಂಸ್ಕೃತಿ. ಆದರೆ, ಕಾಲ ಬದಲಾದಂತೆ ದೇಶದಲ್ಲಿ ಸಂಸ್ಕೃತಿ ಕಡಿಮೆಯಾಗುತ್ತಿದ್ದು, ಇದನ್ನು ಉಳಿಸಿಕೊಳ್ಳುವ ಅಗತ್ಯವಿದೆ ಎಂದು ಮಾಜಿ ಮುಖ್ಯಮಂತ್ರಿ ಎಂ.ವೀರಪ್ಪ ಮೊಯಿಲಿ ಅಭಿಪ್ರಾಯಪಟ್ಟರು.

ಭಾರತೀಯ ವಿದ್ಯಾಭವನದಲ್ಲಿ ಶನಿವಾರ ಆಯೋಜಿಸಿದ್ದ ಸಂತವಾಣಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, 'ಸಂಸ್ಕೃತಿಯ ಬಂಧ ಇಲ್ಲವಾದರೆ ಸಾಧನೆ ಕಷ್ಟ. ಪ್ರಸ್ತುತ ಸಂಸ್ಕೃತಿ ವಿಚಾರದ ಬಗ್ಗೆ ಹೆಚ್ಚು ಚರ್ಚಿಸಬೇಕಿದೆ. ಮೂರು ಮಹಾಕಾವ್ಯ ಮತ್ತು ಅನೇಕ ಕಾದಂಬರಿಗಳನ್ನು ಬರೆದ ಬಳಿಕ ಸಂಸ್ಕೃತಿ ವಿಚಾರ ಕುರಿತು ಬರೆದೆ. ವಿಶ್ವಸಂಸ್ಕೃತಿಯ ಮಹಾಯಾನದ ಮೂರು ಸಂಪುಟಗಳು ಬಿಡುಗಡೆಯಾಗಿದ್ದು, ಏಳು ತಿಂಗಳಲ್ಲಿ ನಾಲ್ಕನೇ ಸಂಪುಟ ಹೊರ ಬರಲಿದೆ. ನಂತರ ಐದನೇ ಸಂಪುಟ ತರಲಾಗುವುದು. ಅದರಲ್ಲಿ ಕಾಲ ಕಾಲಕ್ಕೆ ಸರಿಯಾಗಿ ಸಂಸ್ಕೃತಿ ಹೇಗೆ ಬೆಳೆಸಲು ಸಾಧ್ಯ ಎಂಬುದನ್ನು ವಿವರಿಸಲಾಗುತ್ತದೆ' ಎಂದು ತಿಳಿಸಿದರು.

## ಲಕ್ಷ ಲಕ್ಷ ಸಂಬಳ ತೆಗೆದುಕೊಳ್ಳೋ ಹೆಣ್ಣುಮಕ್ಕಳು ಪುಕಸಟ್ಟೆ ಬಸ್ಸಲ್ಲಿ ಓಡಾಡ್ತಾರೆ

• ಉದಯವಾಹಿನಿ, ಬೆಂಗಳೂರು

ಬಿಹಾರ ಚುನಾವಣೆ ಫಲಿತಾಂಶ ಬೆನ್ನಲ್ಲೇ ಮಾಜಿ ಸಚಿವ ರಾಜಣ್ಣ ಗ್ಯಾರಂಟಿ ಫಲಾನುಭವಿಗಳ ಬಗ್ಗೆ ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ. ಮಧುಗಿರಿಯಲ್ಲಿ ಸ್ವಯಂ ಚಾಲಿತ ವಾಹನ ಚಾಲನ ಪಥ, ರೇಷ್ಮೆ ಸಹಾಯಕ ನಿರ್ದೇಶಕರ ಕಚೇರಿ ಶಂಕು ಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು. ಈ ವೇಳೆ, ಕಳೆದ ಲೋಕಸಭೆ ಚುನಾವಣೆಯಲ್ಲಿ ರಾಜ್ಯದಲ್ಲಿ ಮಹಿಳೆಯರು ಕಾಂಗ್ರೆಸ್‌ಗೆ ಮತ ಹಾಕಿಲ್ಲ. ಬಸ್ ಫ್ರೀ ತಗೊಂಡ ಮಹಿಳೆಯರು ಮತ ಹಾಕಿದ್ರೆ ನಾವು ಹೆಚ್ಚಿಗೆ ಸ್ಥಾನ ಗೆಲ್ಲುತ್ತಿದ್ದೆವು. 1-2 ಲಕ್ಷ ರೂ ಸಂಬಳ ತಗೋ ಹೆಣ್ಣು ಮಕ್ಕಳು ಪುಕಸಟ್ಟೆ ಬಸ್ಸಿನಲ್ಲಿ ಓಡಾಡ್ತಾರೆ. ಆದರೆ ಮತ ಹಾಕೋದಿಲ್ಲ ಎಂದಿದ್ದಾರೆ. ಈ ಹಿಂದೆ ಬಿಜೆಪಿ ಹಿಂದು ಮುಸ್ಲಿಂ ಎಂದು ಚುನಾವಣೆ ಮಾಡ್ತಿತ್ತು. ಬಿಹಾರದಲ್ಲಿ ಅದರ ಪ್ಯಾಟರ್ನ್ ಬದಲಾಗಿದೆ. ಮಹಿಳೆಯರು ಮತ್ತು ಯುವಕರು ಅಂತಾಗಿದೆ. ಹಾಗಾಗಿ ಮಹಿಳೆಯರಿಗೆ ಚುನಾವಣೆ ಮುಂಚೆನೆ 10 ಸಾವಿರ ರೂ. ಕೊಟ್ಟು ಹೆಚ್ಚಿನ ಸ್ಥಾನ ಗೆದ್ದಿದ್ದಾರೆ ಎಂದು ಟೀಕಿಸಿದ್ದಾರೆ.

ನಮ್ಮ ಸರ್ಕಾರದಲ್ಲಿ ಮಹಿಳೆಯರಿಗೆ ಕೊಡುವಷ್ಟು ಸೌಲಭ್ಯ ಯಾರಿಗೂ ಕೊಟ್ಟಿಲ್ಲ. ಎಲ್ಲಿ ಬೇಕಾದರೂ ಪುಕ್ಸಟೆ ಹೋಗಬಹುದು. ವಿಧಾನಸೌಧದಲ್ಲಿ ಒಂದು-ಒಂದೂವರೆ ಲಕ್ಷ ಸಂಬಂಳ ತಗೆದುಕೊಳ್ಳುತ್ತಾರೆ. ಓಕೆ..ಇರಲ್ಲಿ ಅವರೆಲ್ಲಾ.ನಮ್ಮವರೇ ಎಂದಿದ್ದಾರೆ.

# ಸಿಎಂ, ಡಿಸಿಎಂ ದಂಗಲ್ ಸಂಪುಟಕ್ಕೆ ಗ್ರೀನ್ ಸಿಗ್ನಲ್



**ಸಿದ್ದರಾಮಯ್ಯ ಸಂಪುಟ ಪುನಾರಚನೆ**

**ಬಿಹಾರ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಹೀನಾಯ ಸೋಲು ಅನುಭವಿಸಿದ್ದು, ಪಕ್ಷದ ಸೋಲಿನ ಕುರಿತಂತೆ ಹಿರಿಯ ನಾಯಕರು ಪರಾಮರ್ಶೆ ನಡೆಸುತ್ತಿದ್ದಾರೆ. ಇನ್ನು ಬಿಹಾರ ಚುನಾವಣೆಯ ನಂತರ ರಾಜ್ಯದಲ್ಲಿ ನವೆಂಬರ್ ಕ್ರಾಂತಿ ನಡೆಯಲಿದೆ ಎಂದು ಕಾಂಗ್ರೆಸ್ ಶಾಸಕರೇ ಹೇಳುತ್ತಿದ್ದರು. ಆದರೆ ನವೆಂಬರ್ ಕ್ರಾಂತಿ ನಡೆಯುವ ಯಾವುದೇ ಸೂಚನೆಗಳು ಕಾಣುತ್ತಿಲ್ಲ. ಬದಲಿಗೆ ಸಚಿವ ಸಂಪುಟ ಪುನಾರಚನೆಗೆ ಹೈಕಮಾಂಡ್ ಸೂಚನೆ ನೀಡಿದೆ.**

**ಮಹತ್ವ ಪಡೆದುಕೊಂಡ ಸಿದ್ದರಾಮಯ್ಯ ದೆಹಲಿ ಪ್ರವಾಸ**



**ಸಂಪುಟದಲ್ಲಿ ಯುವ ಶಾಸಕರಿಗೆ ಪ್ರಾಶಸ್ತ್ಯ**

**ಬಿಹಾರ ಫಲಿತಾಂಶಕ್ಕೆ ಬೆದರಿದ 'ಕೈ' ಹೈಕಮಾಂಡ್**

**ಸಿಎಂ ನಿರ್ಧರಿಸಿದ ದಿನಾಂಕದಂದೇ ಸಂಪುಟ ಪುನಾರಚನೆ**

1. ಸಚಿವ ಸಂಪುಟ ಪುನಾರಚನೆಗೆ ಸಿಗ್ತಾ ಗ್ರೀನ್ ಸಿಗ್ನಲ್
2. ಮಹತ್ವ ಪಡೆದುಕೊಂಡ ಸಿದ್ದರಾಮಯ್ಯ ದೆಹಲಿ ಪ್ರವಾಸ
3. 12 ಸಚಿವರಿಗೆ ಕೊಕ್ ನೀಡಿ ಹೊಸಬರಿಗೆ ಅವಕಾಶ

### ಸಚಿವಾಕಾಂಕ್ಷಿಗಳಲ್ಲಿ ನಿರೀಕ್ಷೆ

**ರಾಜ್ಯ ಸರ್ಕಾರಕ್ಕೆ ಎರಡುವರೆ ವರ್ಷ ತುಂಬುತ್ತಿರುವ ಹಿನ್ನೆಲೆಯಲ್ಲಿ ನಾಯಕತ್ವ ಬದಲಾವಣೆ ಅಥವಾ ಸಂಪುಟ ಪುನಾರಚನೆ ಆಗುವ ಸಾಧ್ಯತೆ ಇದೆ ಎಂಬ ನಿರೀಕ್ಷೆ ಇತ್ತು. ಅದರಂತೆ ಇದೀಗ ಸಂಪುಟ ಪುನಾರಚನೆ ಆಗುವ ಸಾಧ್ಯತೆಗಳು ದಟ್ಟವಾಗಿದೆ. ಈ ಹಿನ್ನೆಲೆಯಲ್ಲಿ ಸಂಪುಟಕ್ಕೆ ಸೇರ್ಪಡೆ ಆಗುವ ಆಕಾಂಕ್ಷಿಗಳಲ್ಲಿ ನಿರೀಕ್ಷೆ ಗರಿಗೆದರಿದೆ. ಈಗಾಗಲೇ ಸಾಕಷ್ಟು ಆಕಾಂಕ್ಷಿಗಳು ಸಂಪುಟಕ್ಕೆ ಸೇರ್ಪಡೆ ಆಗಲು ಪ್ರಯತ್ನ ನಡೆಸುತ್ತಿದ್ದಾರೆ. ಆದರೆ ಹೈಕಮಾಂಡ್ ಒಪ್ಪಿಗೆ ಸಿಗುತ್ತಾ ಎಂಬ ಗೊಂದಲ ಅವರಲ್ಲಿ ಇತ್ತು. ಈ ಹಿನ್ನೆಲೆಯಲ್ಲಿ ಸಿಎಂ ಸಿದ್ದರಾಮಯ್ಯ ದೆಹಲಿ ಪ್ರವಾಸ ಸಾಕಷ್ಟು ಕುತೂಹಲಕ್ಕೆ ಕಾರಣವಾಗಿತ್ತು.**

### ಡಿಕೆಶಿ ಸಹ ದೆಹಲಿ ಭೇಟಿ



**ಸಿದ್ದರಾಮಯ್ಯ ಅವರು ಕಾಂಗ್ರೆಸ್ ಹೈಕಮಾಂಡ್ ನಾಯಕರನ್ನು ಭೇಟಿಯಾದ ಬೆನ್ನಲ್ಲೇ ಡಿಸಿಎಂ ಡಿಕೆ ಶಿವಕುಮಾರ್ ದೆಹಲಿಗೆ ತೆರಳಿದ್ದಾರೆ. ರಾತ್ರಿ ಹೈಕಮಾಂಡ್ ನಾಯಕರನ್ನು ಅವರು ಭೇಟಿಯಾಗಲಿದ್ದಾರೆ ಎಂದು ತಿಳಿದುಬಂದಿದೆ.**

• ಉದಯವಾಹಿನಿ, ನವದೆಹಲಿ

ಬಿಹಾರ ಚುನಾವಣೆ ಹಿನ್ನೆಲೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್, ರಾಹುಲ್ ಗಾಂಧಿಯನ್ನು ಭೇಟಿಯಾಗಲು ಅವಕಾಶ ಸಿಕ್ಕಿರಲಿಲ್ಲ. ಆದರೆ ಶುಕ್ರವಾರ ದೆಹಲಿ ಪ್ರವಾಸದಲ್ಲಿರುವ ಸಿಎಂ ಸಿದ್ದರಾಮಯ್ಯ, ರಾಹುಲ್ ಗಾಂಧಿಯನ್ನು ಭೇಟಿ ಮಾಡಿ ಚರ್ಚಿಸಿದ್ದಾರೆ. ಸಚಿವ ಸಂಪುಟ ಪುನಾರಚನೆಗೆ ರಾಹುಲ್ ಗಾಂಧಿ ಗ್ರೀನ್ ಸಿಗ್ನಲ್ ಕೊಟ್ಟಿದ್ದಾರೆ. ಅಲ್ಲದೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯನ್ನು ಭೇಟಿಯಾಗಿ ಚರ್ಚಿಸಿ ಸಂಪುಟ ಪುನಾರಚನೆ ಮಾಡಿ ಎಂದು ಸಲಹೆ ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ ಸಿಎಂ ಸಿದ್ದರಾಮಯ್ಯ ಸೋಮವಾರ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ಪ್ರಧಾನ ಕಾರ್ಯದರ್ಶಿ ವೇಣುಗೋಪಾಲ್ ಅವರನ್ನು ಭೇಟಿಯಾಗಿ ಚರ್ಚೆ ನಡೆಸಲಿದ್ದಾರೆ.

ರಾಜ್ಯದಲ್ಲಿ 8ರಿಂದ 12 ಸಚಿವರಿಗೆ ಕೊಕ್ ನೀಡುವ ಸಾಧ್ಯತೆ ಇದೆ. ಯಾರನ್ನು ಸಚಿವ ಸ್ಥಾನದಿಂದ ಕೆಳಗಿಳಿಸುತ್ತಾರೆ ಎಂಬುದು ಕುತೂಹಲ ಕೆರಳಿಸಿದೆ. ಮತ್ತೊಂದೆಡೆ ಕಾಂಗ್ರೆಸ್ ನಲ್ಲಿ ಸಚಿವಾಕಾಂಕ್ಷಿಗಳ ಪಟ್ಟಿಯೂ ದೊಡ್ಡದಿದೆ. ಬೇಳೂರು ಗೋಪಾಲಕೃಷ್ಣ, ಬಿಕೆ ಹರಿಪ್ರಸಾದ್, ಎನ್‌ಎ ಹ್ಯಾರಿಸ್, ಸಲೀಂ ಅಹಮದ್, ಆರ್ ವಿ ದೇಶಪಾಂಡೆ, ನಾಗೇಂದ್ರ, ಬಿಕೆ ಸಂಗಮೇಶ್, ನರೇಂದ್ರ ಸ್ವಾಮಿ, ಶರತ್ ಬಚ್ಚೆಗೌಡ, ಎಂ. ಕೃಷ್ಣಪ್ಪ, ಮಾಗಡಿ ಬಾಲಕೃಷ್ಣ, ಲಕ್ಷ್ಮಣ್ ಸವದಿ, ಎಸ್ ಪೊನ್ನಣ್ಣ, ರಿಜ್ವಾನ್ ಅರ್ಷದ್, ಶಿವಲಿಂಗೇಗೌಡ, ರೂಪಕಲಾ ಶಶಿಧರ್, ಮಾಲೂರು ನಂಜೇಗೌಡ ಸೇರಿ ಹಲವು ನಾಯಕರು ಸಚಿವ ಸಂಪುಟದ ಮೇಲೆ ಕಣ್ಣಿಟ್ಟಿದ್ದಾರೆ.



**ಖರ್ಗೆ ಜೊತೆ ಚರ್ಚಿಸಲು ಸೂಚನೆ:** ಸಂಪುಟ ರಚನೆಗೂ ಮುನ್ನ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರ ಜೊತೆಗೆ ಚರ್ಚಿಸುವಂತೆ ರಾಹುಲ್ ಗಾಂಧಿಯವರು ಸಿದ್ದರಾಮಯ್ಯನವರಿಗೆ ಸೂಚಿಸಿದ್ದಾರೆ. ಖರ್ಗೆಯವರಿಗೆ ರಾಜ್ಯ ರಾಜಕಾರಣದ ಬಗ್ಗೆ ಚೆನ್ನಾಗಿ ಗೊತ್ತಿರುವುದು ಹಾಗೂ ಅಖಿಲ ಭಾರತ ಕಾಂಗ್ರೆಸ್ ಅಧ್ಯಕ್ಷರೂ ಆಗಿರುವ ಕಾರಣದಿಂದಾಗಿ ಅವರ ಜೊತೆಯಲ್ಲಿ ಚರ್ಚಿಸಿ ಸಂಪುಟದಿಂದ ಯಾರನ್ನು ತೆಗೆಯಬೇಕು.

ಯಾರನ್ನು ಹೊಸದಾಗಿ ಸೇರಿಸಿಕೊಳ್ಳಬೇಕು ಎಂಬುದರ ಬಗ್ಗೆ ನಿರ್ಧರಿಸುವಂತೆ ಸೂಚಿಸಿದ್ದಾರೆ ಎನ್ನಲಾಗಿದೆ. ಹಾಗಾಗಿ, ನ. 16ರಂದು ಸಿದ್ದರಾಮಯ್ಯ ಹಾಗೂ ಕರ್ನಾಟಕದಲ್ಲಿ ಕಾಂಗ್ರೆಸ್ ಉಸ್ತುವಾರಿ ಹೊಂದಿರುವ ಕೆ.ಸಿ. ವೇಣುಗೋಪಾಲ್ ಅವರು ಖರ್ಗೆಯವರನ್ನು ಭೇಟಿ ಮಾಡಲಿದ್ದಾರೆ ಎಂದು ಮೂಲಗಳು ತಿಳಿಸಿವೆ.

**10 - 12 ಸಚಿವರಿಗೆ ಕೊಕ್ ಸಿಗುವ ಸಾಧ್ಯತೆ:** ಈಗಾಗಲೇ ಸಿದ್ದರಾಮಯ್ಯನವರ ಸಂಪುಟದಲ್ಲಿರುವ 32 ಸಚಿವರಲ್ಲಿ ಕಳಪೆ ಸಾಧನೆ ತೋರಿರುವ ಅಥವಾ ನಿರೀಕ್ಷಿತ ಮಟ್ಟದಲ್ಲಿ ಕೆಲಸ ಮಾಡದ 8ರಿಂದ 12 ಸಚಿವರನ್ನು ಸಂಪುಟದಿಂದ ಕಿತ್ತು ಹಾಕುವಂತೆ ಹೈಕಮಾಂಡ್ ಸೂಚಿಸಿತ್ತು. ಈಗಲೂ ಅದೇ ಲೆಕ್ಕಾಚಾರವನ್ನಿಟ್ಟುಕೊಂಡೇ ಸಂಪುಟ ಪುನಾರಚನೆ ನಡೆಸಲಾಗುತ್ತದೆ ಎಂದು ಹೇಳಲಾಗಿದೆ. ಕಳಪೆ ಸಾಧನೆಯ ಸಚಿವರನ್ನು ಕಿತ್ತೊಗೆಯುವುದು ಎಂಬುದಕ್ಕಿಂತ ಇತರರಿಗೆ ಅವಕಾಶ ಕೊಡುವುದೇ ಇದರ ಮೂಲ ಉದ್ದೇಶ. ಸಂಪುಟ ಪುನಾರಾಚನೆಯಾದರೆ ಸಿದ್ದರಾಮಯ್ಯ ಅವರ ಸಂಪುಟ ಸೇರಲು ಸಿದ್ಧರಿರುವವರ ಪಟ್ಟಿ ದೊಡ್ಡದಾಗಿದೆ. ಅವರಲ್ಲಿ ಆದ್ಯತೆಯ ಮೇರೆಗೆ, ಅಂದರೆ, ಜಾತಿ ಲೆಕ್ಕಾಚಾರ, ಸಮುದಾಯಗಳ ಲೆಕ್ಕಾಚಾರ, ಮುಂದಿನ ಚುನಾವಣೆಯಲ್ಲಿ ಪಕ್ಷಕ್ಕೆ ಅಭ್ಯರ್ಥಿಗಳನ್ನು ಗೆಲ್ಲಿಸಿಕೊಡುವ ಲೆಕ್ಕಾಚಾರಗಳನ್ನು ಇಟ್ಟುಕೊಂಡು ಸಚಿವರನ್ನಾಗಿ ಸೇರಿಸಿಕೊಳ್ಳಲು ತೀರ್ಮಾನ ಕೈಗೊಳ್ಳಲಾಗುತ್ತದೆ.

### ಬಿಹಾರ ಫಲಿತಾಂಶ ರಾಹುಲ್‌ಗೆ ತೀವ್ರ ಬೇಸರ!

**ಬಿಹಾರ ಚುನಾವಣೆಯಲ್ಲಿ ಕಾಂಗ್ರೆಸ್ ಹಾಗೂ ಮಹಾಘಟಬಂಧನ್ ಹೀನಾಯವಾಗಿ ಸೋತಿದ್ದಕ್ಕೆ ರಾಹುಲ್ ಗಾಂಧಿ ಬೇಸರಿಸಿಕೊಂಡಿದ್ದಾರಂತೆ. ಈ ವಿಚಾರವಾಗಿ ರಾಹುಲ್ ಗಾಂಧಿಗೆ ಸಿದ್ದರಾಮಯ್ಯ ಧೈರ್ಯ ಹೇಳಿ, "ಸೋಲಿನ ಬಗ್ಗೆ ಅತಿಯಾಗಿ ಬೇಸರ ಮಾಡಿಕೊಳ್ಳಬೇಡಿ. ಈ ವೇಳೆ ನಿಮ್ಮ ಜತೆ ನಾವಿದ್ದೇವೆ" ಎಂದು ಧೈರ್ಯ ತುಂಬಿದ್ದಾರಂತೆ.ಬಿಹಾರದ ಚುನಾವಣೆ ಸೋಲಿನ ಬಳಿಕ ಕರ್ನಾಟಕ ಮಾತ್ರವಲ್ಲದೇ ತೆಲಂಗಾಣದ ಸಿಎಂ ಜೊತೆಗೂ ರಾಹುಲ್ ಗಾಂಧಿ ಚರ್ಚಿಸಿದ್ದಾರೆ. ಮುಂದಿನ ದಿನಗಳಲ್ಲಿ ರಾಜ್ಯದಲ್ಲಿ ಮತ್ತಷ್ಟು ಅಭಿವೃದ್ಧಿ ಕೆಲಸ ಮಾಡಿ ಸಂದೇಶ ನೀಡಿದ್ದಾರೆ ಎನ್ನಲಾಗಿದೆ.**

### ಬಿಜೆಪಿಗೆ ಕೊಂಚ ನಿರಾಸೆ



**ವಿಪಕ್ಷ ನಾಯಕ ಅಶೋಕ್ ವ್ಯಾಖ್ಯಾನವೊಂದನ್ನ ಮಾಡಿದ್ದಾರೆ. ಹೈಕಮಾಂಡ್ ವೀಕ್ ಆಗಿರುವುದಕ್ಕೆ ಸಿದ್ದರಾಮಯ್ಯ ಸ್ಟ್ರಾಂಗ್ ಆಗುತ್ತಿದ್ದಾರೆ ಎನ್ನುವ ಮೂಲಕ ಕ್ರಾಂತಿ ಕಿಚ್ಚಿಗೆ ಶಾಂತಿ ತಣ್ಣೀರು ಎರಚಿದ್ದಾರೆ. ಇನ್ನು ಬಿಹಾರ ಫಲಿತಾಂಶವನ್ನು ಕರ್ನಾಟಕ ಬಿಜೆಪಿ ಸಂಭ್ರಮಿಸಬಹುದು. ಆದ್ರೆ, ಕೊಂಚ ನಿರಾಸೆಯಾದಂತೂ ಸತ್ಯ. ಯಾಕಂದ್ರ, ನವೆಂಬರ್ ಕ್ರಾಂತಿಯಲ್ಲಿ ಏನಾದರೂ ಹೆಚ್ಚು ಕಮ್ಮಿಯಾದರೆ ಅದರ ಲಾಭವನ್ನು ಪಡೆದು ಅಧಿಕಾರಕ್ಕೆ ಏರಬೇಕೆನ್ನುವ ಆಸೆಯಲ್ಲಿ ಬಿಜೆಪಿ ಇತ್ತು. ಆದ್ರೆ, ಬಿಹಾರ ರಿಸಲ್ಟ್ ಹೈಕಮಾಂಡ್‌ಗೆ ದಿಕ್ಕುತೋಚದಂತಾಗಿದ್ದು, ಈ ಪರಿಸ್ಥಿತಿಯಲ್ಲಿ ಕರ್ನಾಟಕದಲ್ಲಿ ಯಾವುದೇ ಹೊಸ ಬದಲಾವಣೆಗೆ ಕೈ ಹಾಕುವುದು ಅನುಮಾನ. ಬಿಹಾರದ ರಿಸಲ್ಟ್ ಕರ್ನಾಟಕದ ಮೇಲೆ ನೇರವಾದ ಪರಿಣಾಮ ಬೀರುತ್ತದೆ ಎಂದು ಹೇಳಲು ಸಾಧ್ಯವಿಲ್ಲ.**

# ಬಿಜೆಪಿ ಮನೆಯೊಂದು ಐದು ಬಾಗಿಲು ಬಿಹಾರದ ಚುನಾವಣಾ ಫಲಿತಾಂಶದ ಪಾಠ ಏನು

## ಕರ್ನಾಟಕ ರಾಜ್ಯದಲ್ಲಿ ದಳ ಹಾಗೂ ಕಮಲದ ನಡುವಿನ ಮೈತ್ರಿಯಿಂದ ಉಂಟಾದ ಲಾಭ

• ಉದಯವಾಹಿನಿ, ಬೆಂಗಳೂರು

ರಾಜ್ಯ ಕಾಂಗ್ರೆಸ್ ಸರ್ಕಾರಕ್ಕೆ ಎರಡುವರೆ ವರ್ಷ ತುಂಬುತ್ತಿದೆ. ಗ್ಯಾರಂಟಿ ಹೊರತಾಗಿ ಸರ್ಕಾರ ಅಭಿವೃದ್ಧಿ ವಿಚಾರದಲ್ಲಿ ಮಾಡಿರುವ ಸಾಧನೆ ಏನು ಎಂಬ ಪ್ರಶ್ನೆಗೆ ನಿಖರವಾದ ಉತ್ತರ ಸಿಗಲು ಸಾಧ್ಯವಿಲ್ಲ.



ಆದರೆ ಇದನ್ನು ಜನಸಾಮಾನ್ಯರ ಮುಂದೆ ತೆರೆದಿರುವ ಕೆಲಸ ಮಾಡಬೇಕಾದ ವಿಪಕ್ಷಗಳ ಸಾಧನೆಯೂ ಶೂನ್ಯ.

ರಾಜ್ಯದಲ್ಲಿ ಬಿಜೆಪಿ ಜೆಡಿಎಸ್ ಮೈತ್ರಿಯಾಗಿ ವಿಪಕ್ಷಗಳ ಸ್ಥಾನದಲ್ಲಿ ಭದ್ರವಾಗಿ ಕುಳಿತುಕೊಂಡಿವೆ ಅಷ್ಟೇ.


ಆದರೆ ತಮ್ಮ ಜವಾಬ್ದಾರಿಯನ್ನು ನಿರ್ವಹಿಸಿದೆಯಾ ಈ ನಡುವೆ ಬಿಹಾರದ ಚುನಾವಣೆಯಲ್ಲಿ ಎನ್‌ಡಿಎ ಮೈತ್ರಿಕೂಟ ಭರ್ಜರಿ ಗೆಲುವು ಸಾಧಿಸಿದೆ. ಈ ಗೆಲುವು ಕರ್ನಾಟಕ ಬಿಜೆಪಿಗೆ ಏನು ಪಾಠ ಕಲಿಸಲಿದೆ.

**ಯಡಿಯೂರಪ್ಪ ಗುಡುಗಿದರೆ ವಿಧಾನಸೌಧ ನಡುಗುವುದು:** ಒಂದು ಕಾಲದಲ್ಲಿ ಯಡಿಯೂರಪ್ಪ ಗುಡುಗಿದರೆ ವಿಧಾನಸೌಧ ನಡುಗುವುದು ಎಂಬ ಮಾತಿತ್ತು.ಆದರೆ ರಾಜ್ಯ ಬಿಜೆಪಿಗೆ ಈಗ ಯಡಿಯೂರಪ್ಪ ನಾಯಕತ್ವ ಇಲ್ಲ.

**ಹೊಂದಾಣಿಕೆ ರಾಜಕಾರಣದ ಆರೋಪ**

ವಿಪಕ್ಷದ ನಾಯಕರಾಗಿ ಆರ್ ಅಶೋಕ್, ಬಿಜೆಪಿ ರಾಜ್ಯಾಧ್ಯಕ್ಷರಾಗಿ ಬಿವೈ ವಿಜಯೇಂದ್ರ ಇದ್ದಾರೆ. ಹೀಗಿದ್ದರೂ ವಿಪಕ್ಷ ಸದ್ದು ಮಾಡುತ್ತಿಲ್ಲ. ಸರ್ಕಾರದ ವೈಫಲ್ಯಗಳನ್ನು ಎತ್ತಿ ತೋರಿಸುವಲ್ಲಿಯೂ ಬಿಜೆಪಿ ವಿಫಲವಾಗುತ್ತಿದೆ.

ಈ ಹಿಂದೆ ಸಿಎಂ ಸಿದ್ದರಾಮಯ್ಯ ಅವರ ವಿರುದ್ಧ ಮೂಡಾ ಹಗರಣದ ಆರೋಪ ಬಂದಿತ್ತು. ಆ ಸಂದರ್ಭದಲ್ಲಿ ಬಿವೈ ವಿಜಯೇಂದ್ರ ಅವರ ನೇತೃತ್ವದಲ್ಲಿ ಬೆಂಗಳೂರು ಟು ಮೈಸೂರು ಪಾದಯಾತ್ರೆ ನಡೆದಿತ್ತು. ಸಹಜವಾಗಿ ಈ ಪಾದಯಾತ್ರೆ ಗಮನ ಸೆಳೆದಿತ್ತು. ಒಂದಿಷ್ಟು ಗೊಂದಲಗಳ ಹೊರತಾಗಿಯೂ ಬಿಜೆಪಿ ನಾಯಕರು ಒಗ್ಗಟ್ಟು ಪ್ರದರ್ಶನ ಮಾಡಿದ್ದರು. ಸರ್ಕಾರಕ್ಕೂ ಬಿಸಿ ಮುಟ್ಟಿಸುವಲ್ಲಿ ಯಶಸ್ವಿಯಾಗಿದ್ದರು.



ಮುಡಾ ಹೋರಾಟದ ನಂತರದಲ್ಲಿ ಸದ್ದು ಮಾಡಿದ್ದು ವಕ್ಫ್ ವಿರೋಧಿ ಹೋರಾಟ. ಆದರೆ ಇಲ್ಲಿ ವಕ್ಫ್‌ಗಿಂತ ಬಿಜೆಪಿಯಲ್ಲಿರುವ ಬಣ ಗುದ್ದಾಟ ಚರ್ಚೆಗೆ ಬಂದಿತ್ತು. ವಕ್ಫ್ ವಿಚಾರವಾಗಿ ಎರಡು ಗುಂಪುಗಳು ತಮ್ಮ ಶಕ್ತಿ ಪ್ರದರ್ಶನಕ್ಕೆ ಇದನ್ನು ವೇದಿಕೆಯಾಗಿ ಬಳಕೆ ಮಾಡಿದವು. ಹಾಗಾಗಿ ಇದು ಬಿಸಿ ಮುಟ್ಟಿಸುವಲ್ಲಿ ಯಶಸ್ವಿಯಾಗಿಲ್ಲ. ಅಥವಾ ಬಿಜೆಪಿಗೆ ಶಕ್ತಿ ತುಂಬುವಲ್ಲಿ ನೆರವಾಗಿಲ್ಲ ಎಂಬವುದು ವಾಸ್ತವ. ಯತ್ನಾಳ್ ಹಾಗೂ ವಿಜಯೇಂದ್ರ ಬಣದ ನಡುವಿನ ಕಚ್ಚಾಟಕ್ಕೆ ಈ ಹೋರಾಟ ಸಾಕ್ಷಿಯಾಗಿತ್ತು. ನಂತರದ ದಿನಗಳಲ್ಲಿ ಯತ್ನಾಳ್ ಅವರನ್ನು ಪಕ್ಷದಿಂದ ಉಚ್ಚಾಟನೆ ಮಾಡಲಾಯಿತು. ಹೀಗಿದ್ದರೂ ಬಿಜೆಪಿಯಲ್ಲಿನ ಗೊಂದಲ ಬಗೆಹರಿದಿಲ್ಲ.

ಯತ್ನಾಳ್ ಬಿಜೆಪಿ ಪಕ್ಷದಲ್ಲಿದ್ದಾಗ ಪಕ್ಷದ ನಾಯಕತ್ವದ ಬಗ್ಗೆ ನಿರಂತರವಾಗಿ ಹೇಳಿಕೆ ನೀಡುತ್ತಿದ್ದರು. ಬಿಎಸ್ ಯಡಿಯೂರಪ್ಪ ಅವರ ಕುಟುಂಬವನ್ನು ಟಾರ್ಗೆಟ್ ಮಾಡುತ್ತಿದ್ದರು. ವಿಜಯೇಂದ್ರ ನಾಯಕತ್ವವನ್ನು ನಿರಾಕರಿಸುತ್ತಿದ್ದರು. ಇದೀಗ ಯತ್ನಾಳ್ ಉಚ್ಚಾಟನೆ ಆಗಿದೆ. ಹಾಗಿದ್ದರೂ ಬಿಜೆಪಿಯಲ್ಲಿನ ಗೊಂದಲ ಬಗೆಹರಿದಿಲ್ಲ. ಬಣ ರಾಜಕಾರಣ ಇನ್ನೂ ಬಿಜೆಪಿಯಲ್ಲಿ ಕಾಣಿಸುತ್ತಿದೆ. ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಹಾಗೂ ವಿಪಕ್ಷ ನಾಯಕ ಅಶೋಕ್ ನಡುವೆ ಹೊಂದಾಣಿಕೆ ಇಲ್ಲ. ಇದರ ಪರಿಣಾಮಗಳು ರಾಜ್ಯ ಬಿಜೆಪಿಯಲ್ಲಿ ಎದ್ದು ಕಾಣಿಸುತ್ತಿದೆ.

**ಮೈತ್ರಿಯಿಂದಲೂ ಪ್ರಯೋಜನ ಇಲ್ಲ:** ರಾಜ್ಯದಲ್ಲಿ ಆಡಳಿತ ಪಕ್ಷ ಕಾಂಗ್ರೆಸ್‌ನ್ನು ಎದುರಿಸುವ ನಿಟ್ಟಿನಲ್ಲಿ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿ ಮಾಡಿಕೊಂಡಿದೆ. ಆದರೆ ಈ ಮೈತ್ರಿಯಿಂದಲೂ ದೊಡ್ಡ ಮಟ್ಟದಲ್ಲಿ ಲಾಭ ಅಗುತ್ತಿಲ್ಲ. ಮೈತ್ರಿ ನಡುವೆ ಸಮನ್ವಯದ ಕೊರತೆ ಇದೆ. ಇದನ್ನು ನೀಗಿಸಲು ಪ್ರಯತ್ನ ನಡೆಸಿದರೂ ಅದು ಯಶಸ್ವಿ ಆಗಿಲ್ಲ. ಮೈತ್ರಿ ಕೇವಲ ಚುನಾವಣೆಗಷ್ಟೇ ಸೀಮಿತವಾದಂತಿದೆ. ಬಿಜೆಪಿ ಮತ್ತು ಜೆಡಿಎಸ್ ಒಗ್ಗಟ್ಟಿನ ಹೋರಾಟ ಕಾಣಿಸುತ್ತಿಲ್ಲ. ಮೈತ್ರಿ ಕುರಿತಾಗಿ ಎರಡು ಪಕ್ಷಗಳಲ್ಲಿ ಭಿನ್ನ ಅಭಿಪ್ರಾಯ ಇದೆ ಎಂಬುವುದು ವಾಸ್ತವ.

### ಬಿಹಾರ ಚುನಾವಣೆಯಲ್ಲಿ ಬಿಜೆಪಿ ಕಲಿಯಬೇಕಾದ ಪಾಠ ಏನು

**ಬಿಹಾರ ಚುನಾವಣೆಯಲ್ಲಿ ರಾಜ್ಯ ಬಿಜೆಪಿಗೆ ಸಾಕಷ್ಟು ಪಾಠ ಕಲಿಯಬೇಕಾದ ಅಂಶಗಳಿವೆ. ರಾಜ್ಯದಲ್ಲಿ ಬಿಜೆಪಿ ನಾಯಕರು ಒಗ್ಗಟ್ಟಿನ ಪ್ರದರ್ಶನ ಮಾಡಬೇಕಾದ ಅಗತ್ಯತೆಯನ್ನು ಈ ಚುನಾವಣೆ ಕಲಿಸಿಕೊಟ್ಟಿದೆ. ಪಕ್ಷದ ನಾಯಕರ ನಡುವಿನ ಮುಸುಕಿನ ಗುದ್ದಾಟಕ್ಕೆ ಬ್ರೇಕ್ ನೀಡಬೇಕಾಗಿದೆ. ಸಕರಾತ್ಮಕ ರಾಜಕಾರಣ ಹಾಗೂ ರಚನಾತ್ಮಕ ಹೋರಾಟದ ಮೂಲಕ ಜನರ ಗಮನವನ್ನು ಸೆಳೆಯುವ ಅವಕಾಶ ರಾಜ್ಯದಲ್ಲಿದೆ. ಇನ್ನು ಬಿಜೆಪಿ ಮತ್ತು ಜೆಡಿಎಸ್ ಮೈತ್ರಿಯಲ್ಲೂ ಚುನಾವಣೆಗೆ ಮುಂಚಿತವಾಗಿಯೇ ಕಾರ್ಯತಂತ್ರ ರೂಪಿಸಬೇಕಾಗಿದೆ. ಜೊತೆಗೆ ಮೈತ್ರಿ ಪಕ್ಷಗಳು ಒಗ್ಗಟ್ಟಿನಲ್ಲಿ ಜನರ ಪರವಾದ ಇಶ್ಯೂಗಳನ್ನು ಮುಂದಿಟ್ಟುಕೊಂಡು ಹೋರಾಟ ನಡೆಸಬೇಕಾದ ಅಗತ್ಯ ಹಾಗೂ ಅನಿವಾರ್ಯತೆ ಇದೆ. ರಾಜ್ಯದಲ್ಲಿ ಕಾಂಗ್ರೆಸ್ ಕಳೆದ ಚುನಾವಣೆಯಲ್ಲಿ 136 ಸ್ಥಾನ ಗಳಿಸಿತ್ತು. ಈ ಮೂಲಕ ಬಿಜೆಪಿ ಮತ್ತು ಜೆಡಿಎಸ್ ಧೂಳಿಪಟವಾಗಿತ್ತು. ಆದರೆ ಇದೀಗ ಚುನಾವಣಾಪೂರ್ವ ಮೈತ್ರಿ ರಾಜ್ಯದಲ್ಲಿ ಬಿಜೆಪಿ ಮತ್ತು ಜೆಡಿಎಸ್ ಮಾಡಿಕೊಂಡಿದೆ. ಈ ಮೈತ್ರಿಯಲ್ಲಿ ಒಂದಿಷ್ಟು ಗೊಂದಲಗಳು ಇವೆ. ಆದರೆ ಇದನ್ನು ಸರಿಪಡಿಸಿಕೊಂಡರೆ ಬಿಜೆಪಿಗೆ ಅನುಕೂಲಕರ ವಾತಾವರಣ ಸೃಷ್ಟಿಯಾಗಬಹುದು.**

**ಈ ದಿನದ ದರ** | ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹12,508/Gram24ct ₹11,465/Gram22ct | ಬೆಳ್ಳಿ: ₹169.00/Gram

ಅಂತರಾಳದಿಂದ... EDITORIAL

# ಎನ್‌ಡಿಎಯನ್ನು ಗೆಲ್ಲಿಸಿತೇ ಚುನಾವಣಾ ಆಯೋಗ?

ನಿತೀಶ್ಶೈ ಪರ್ಯಾಯವಾಗಿ ಬಿಹಾರದಲ್ಲಿ ಬೆಳೆಯುವ ಸಾಧ್ಯತೆಗಳನ್ನು ಪ್ರಕಟ ಪಡಿಸಿದ್ದಾರೆ. ಇದೇ ಸಂದರ್ಭದಲ್ಲಿ ಉವೈಸಿ ನಾಯಕತ್ವದ ಪಕ್ಷ ತನ್ನ ಅಸ್ತಿತ್ವವನ್ನು ಉಳಿಸಿಕೊಳ್ಳಲು ಯಶಸ್ವಿಯಾಗಿದೆ ಮಾತ್ರವಲ್ಲ, ಕಾಂಗ್ರೆಸ್ನ ಮತಗಳನ್ನು ದೊಡ್ಡ ಮಟ್ಟದಲ್ಲಿ ಸೆಳೆದು ಬಿಜೆಪಿಗೆ ಮುನ್ನಡೆಯಾಗುವಂತೆ ನೋಡಿಕೊಂಡಿದೆ. ಮುಸ್ಲಿಮ್ ಮತದಾರರ ಪ್ರಾಬಲ್ಯವಿರುವ ಕ್ಷೇತ್ರಗಳಲ್ಲೂ ಎನ್‌ಡಿಎ ವಿಜಯ ಸಾಧಿಸಿರುವುದು ಬಿಹಾರದ ರಾಜಕೀಯದಲ್ಲಾಗಿರುವ ಪಲ್ಲಟಗಳನ್ನು ಹೇಳುತ್ತದೆ. ಮುಸ್ಲಿಮರು ಎನ್‌ಡಿಎಯನ್ನು ಬೆಂಬಲಿಸಿದ್ದಾರೆ ಎನ್ನುವುದಕ್ಕಿಂತಲೂ, ಮುಸ್ಲಿಮರ ಮತಗಳನ್ನು ಒಡೆಯುವಲ್ಲಿ ಎನ್‌ಡಿಎ ಯಶಸ್ವಿಯಾಗಿದೆ ಎಂದು ಹೇಳಬಹುದು. ಇದೇ ಹೊತ್ತಿಗೆ, ಚುನಾವಣಾ ಆಯೋಗದ ಶತ ಪ್ರಯತ್ನದಿಂದ ಅಳಿಸಲ್ಪಟ್ಟ ಲಕ್ಷಾಂತರ ಮತದಾರರ ಹೆಸರುಗಳಲ್ಲಿ ಮುಸ್ಲಿಮರ ಹೆಸರುಗಳು ಎಷ್ಟು ಎನ್ನುವುದು ಕೂಡ ಫಲಿತಾಂಶದ ಮೇಲೆ ಪರಿಣಾಮ ಬೀರಿದೆ. 2 ಬಹುಮುಖ್ಯ ಅಂಶಗಳು ಎನ್‌ಡಿಎ ಭರ್ಜರಿ ಗೆಲುವಿಗೆ ಕಾರಣವಾಗಿದೆ ಎಂದು ಅಂದಾಜಿಸಲಾಗಿದೆ. ಅವೆರಡರಲ್ಲಿ ಮುಖ್ಯವಾಗಿ, ಪ್ರಧಾನಿ ನರೇಂದ್ರ ಮೋದಿಯವರು ಚುನಾವಣೆ ಹೊತ್ತಿಗೇ 15 ಕೋಟಿಗೂ ಅಧಿಕ ಮಹಿಳೆಯರ ಬ್ಯಾಂಕ್ ಖಾತೆಗಳಿಗೆ 10,000 ರೂ.ಗಳನ್ನು ಜಮೆ ಮಾಡಿರುವುದು. ಮುಖ್ಯಮಂತ್ರಿ ಮಹಿಳಾ ರೋಜ್ಗಾರ್ ಯೋಜನೆಯ ಹೆಸರಿನಲ್ಲಿ ಈ ಹಣವನ್ನು ತಲುಪಿಸಲಾಗಿದೆಯಾದರೂ ಉದ್ದೇಶ ಚುನಾವಣೆಯೇ ಆಗಿತ್ತು. ಈ ಹಿಂದೆಲ್ಲ ಒಂದು ಮತಗಳಿಗೆ ನೂರೋ ಇನ್ನೂರೋ ಪಡೆಯುತ್ತಿದ್ದ ಬಿಹಾರದ ಬಡ ವರ್ಗಕ್ಕೆ ಇದು ಭಾರೀ ದೊಡ್ಡ ಉಡುಗೊರೆಯಾಗಿ ಕಂಡಿತ್ತು ಎಲ್ಲಕ್ಕಿಂತ ಮುಖ್ಯವಾಗಿ ಬಿಹಾರದ ಮಹಿಳೆಯರ ಕೈಗೇ ಈ ಹಣ ತಲುಪಿರುವುದು ಮತದಾನದ ಮೇಲೆ ಸಾಕಷ್ಟು ಪರಿಣಾಮವನ್ನು ಬೀರಿತ್ತು. ಇದಕ್ಕೆ ಪೂರಕವಾಗಿ ಈ ಬಾರಿ ಚುನಾವಣೆಯಲ್ಲಿ ಮಹಿಳೆಯರು ದಾಖಲೆ ಪ್ರಮಾಣದಲ್ಲಿ ಮತದಾನ ಮಾಡಿದ್ದಾರೆ. ಶೇ.71.78ರಷ್ಟು ಮಹಿಳೆಯರು ಮತದಾನ ಮಾಡಿದ್ದರೆ ಶೇ.62.98ರಷ್ಟು ಪುರುಷರು ಮತ ಚಲಾಯಿಸಿದ್ದಾರೆ. ಏಳು ಜಿಲ್ಲೆಗಳಲ್ಲಿ ಪುರುಷರಿಗಿಂತ ಶೇ.14ಕ್ಕೂ ಅಧಿಕ ಮಹಿಳೆಯರು ಮತಗಳನ್ನು ಚಲಾಯಿಸಿದ್ದರೆ ಇತರ 10 ಜಿಲ್ಲೆಗಳಲ್ಲಿ ಇದು ಶೇ.10ರಷ್ಟಿದೆ.ಇತರ ಪಕ್ಷಗಳೂ ಮಹಿಳೆಯರಿಗೆ ಆರ್ಥಿಕ ನೆರವಿನ ಭರವಸೆಗಳನ್ನು ಚುನಾವಣಾ ಪ್ರಣಾಳಿಕೆಗಳಲ್ಲಿ ನೀಡಿದ್ದವು. ಈ ಹಿಂದೆ ಕರ್ನಾಟಕದಲ್ಲಿ ಮಹಿಳೆಯರಿಗಾಗಿ ಘೋಷಿಸಿದ ಗ್ಯಾರಂಟಿ ಯೋಜನೆಗಳ ಕಾರಣದಿಂದ ಕಾಂಗ್ರೆಸ್ ಪಕ್ಷ ಭರ್ಜರಿ ಬಹುಮತದಿಂದ ಅಧಿಕಾರವನ್ನು ಹಿಡಿಯಿತು. ಆದರೆ ಪ್ರಧಾನಿ ಮೋದಿಯವರು ಚುನಾವಣೆಯ ಹೊತ್ತಿಗೆ ಅವರ ಖಾತೆಗಳಿಗೆ ನೇರವಾಗಿ ಹಣವನ್ನೇ ಹಾಕಿ ಬಿಟ್ಟರು. ಇದು ಚುನಾವಣೆಯ ಮೇಲೆ ನೇರ ಪರಿಣಾಮವನ್ನು ಬೀರುತ್ತದೆ ಎನ್ನುವುದು ಗೊತ್ತಿದ್ದೂ ಚುನಾವಣಾ ಆಯೋಗ ಕಣ್ಣು ಕಿವಿ ಮುಚ್ಚಿ ಕೂತಿತ್ತು. ರಾಜಸ್ಥಾನದಲ್ಲಿ ಚುನಾವಣಾ ನೀತಿ ಸಂಹಿತೆಯ ಬಳಿಕ ಪಿಂಚಣಿ ವಿತರಣೆ ಮಾಡುವುದನ್ನೂ ತಡೆದಿದ್ದ ಚುನಾವಣಾ ಆಯೋಗ, ಚುನಾವಣಾ ನೀತಿ ಸಂಹಿತೆಯ ಬಳಿಕವೂ ಮಹಿಳೆಯರ ಖಾತೆಯಲ್ಲಿ 10,000 ರೂಪಾಯಿ ಬೀಳುವುದನ್ನು ನೋಡಿಯೂ ನೋಡದಂತೆ ವರ್ತಿಸಿತು. ಪ್ರತಿ ಕುಟುಂಬಕ್ಕೆ 10,000 ರೂಪಾಯಿಗಳನ್ನು ನೀಡಿ ಈ ಬಾರಿಯ ಚುನಾವಣಾ ಫಲಿತಾಂಶವನ್ನು ನರೇಂದ್ರ ಮೋದಿಯವರು ಕೊಂಡುಕೊಂಡರು ಎನ್ನುವ ಆರೋಪ ಈ ಕಾರಣಕ್ಕೆ ಮಹತ್ವವನ್ನು ಪಡೆಯುತ್ತದೆ. ಅಷ್ಟು ದೊಡ್ಡ ಮೊತ್ತವನ್ನು ಅದೇ ಮೊದಲ ಬಾರಿ ಕಂಡ ಬಿಹಾರದ ಬಡ ಮಹಿಳಾ ವರ್ಗ ಬಿಜೆಪಿಗೆ ಮತ ಹಾಕದೇ ಇರುವುದಕ್ಕೆ ಕಾರಣವೇ ಇರಲಿಲ್ಲ. ಒಟ್ಟಿನಲ್ಲಿ ಮಹಿಳಾ ಮತದಾರರು ಚುನಾವಣೆಯಲ್ಲಿ ಪ್ರಾಮುಖ್ಯತೆಯನ್ನು ಪಡೆಯುತ್ತಿದ್ದಾರೆ ಮತ್ತು ಅವರನ್ನು ಕೇಂದ್ರವಾಗಿಟ್ಟುಕೊಂಡು ಚುನಾವಣಾ ಪ್ರಣಾಳಿಕೆಗಳು ಸಿದ್ಧಗೊಳ್ಳುತ್ತಿವೆ. ಇದಕ್ಕೆ ಕರ್ನಾಟಕದ ಕಳೆದ ವಿಧಾನಸಭಾ ಚುನಾವಣೆ ಸ್ಫೂರ್ತಿಯಾಗಿದೆ ಎನ್ನುವುದರಲ್ಲಿ ಎರಡು ಮಾತಿಲ್ಲ.ಇದೇ ಸಂದರ್ಭದಲ್ಲಿ ಚುನಾವಣಾ ಆಯೋಗವು ನಡೆಸಿದ ಮತದಾರರ ಪಟ್ಟಿಯ ತೀವ್ರ ಪರಿಷ್ಕರಣೆಯೂ ಚುನಾವಣೆಯ ಮೇಲೆ ಪರಿಣಾಮವನ್ನು ಬೀರಿದೆ. ಲಕ್ಷಾಂತರ ಮತದಾರರನ್ನು ಚುನಾವಣಾ ಆಯೋಗವು ಪರಿಷ್ಕರಣೆಯ ಹೆಸರಿನಲ್ಲಿ ಮತದಾನದಿಂದ ಹೊರಗಿಟ್ಟಿತು. ಚುನಾವಣೆ ಹತ್ತಿರ ಬರುತ್ತಿರುವಂತೆಯೇ ಚುನಾವಣಾ ಆಯೋಗ ಚುನಾವಣೆಯಲ್ಲಿ ಭಾಗವಹಿಸಲು ಮತದಾರರನ್ನು ಉತ್ತೇಜಿಸಬೇಕು.

> **ಚುನಾವಣೋತ್ತರ ಸಮೀಕ್ಷೆಯನ್ನು ನಡೆಸಿದ ಸಂಸ್ಥೆಗಳನ್ನೂ ಅಘಾತಕ್ಕೆ ತಳ್ಳುವಂತೆ ಫಲಿತಾಂಶ ಹೊರಬಿದ್ದಿದೆ. ಬಿಹಾರ ವಿಧಾನಸಭೆಯಲ್ಲಿ ಎನ್‌ಡಿಎ ಬಹುಮತವನ್ನು ಪಡೆಯುತ್ತದೆ ಎಂದು ಸಮೀಕ್ಷೆಗಳು ಹೇಳಿತ್ತಾದರೂ, ನಾನು ಹೇಳಿದ್ದು ಇದಲ್ಲ ಎಂದು ಸಮೀಕ್ಷೆಗಳು ಸ್ಪಷ್ಟೀಕರಣ ನೀಡುವಂತಿದೆ ಫಲಿತಾಂಶ. 243 ವಿಧಾನಸಭಾ ಕ್ಷೇತ್ರಗಳಲ್ಲಿ ಎನ್‌ಡಿಎ 205ಕ್ಕೂ ಅಧಿಕ ಕ್ಷೇತ್ರಗಳನ್ನು ಗೆದ್ದು ದೇಶದ ಹುಬ್ಬೇರುವಂತೆ ಮಾಡಿದೆ. ಇದೇ ಸಂದರ್ಭದಲ್ಲಿ ಚಿರಾಗ್ ಪಾಸ್ವಾನ್ ಅವರ ಎಲ್ಜೆಪಿಯು ಒಂದು ಸ್ಥಾನದಿಂದ 21 ಸ್ಥಾನಕ್ಕೆ ನೆಗೆಯುವ ಮೂಲಕ ಉತ್ತರ ಭಾರತದ ದಲಿತ ರಾಜಕಾರಣದ ಚುಕ್ಕಾಣಿಯನ್ನು ಹೊಸ ದಿಕ್ಕಿಗೆ ತಿರುಗಿಸುವ ಸೂಚನೆ ನೀಡಿದೆ.**

ಆದರೆ ಅದಕ್ಕೆ ವಿರುದ್ಧವಾಗಿ, ಎಸ್‌ಐಆರ್ ಹೆಸರಿನಲ್ಲಿ ಮತದಾರರನ್ನು ಹೇಗೆ ಚುನಾವಣೆಯಿಂದ ದೂರವಿರಬಹುದು ಎನ್ನುವುದರ ಬಗ್ಗೆ ತಲೆಕೆಡಿಸಿಕೊಂಡಿತು. ಚುನಾವಣೆ ಹತ್ತಿರವಾಗುತ್ತಿರುವ ಹೊತ್ತಿಗೆ ಅತುರಾತುರವಾಗಿ ಪರಿಷ್ಕರಣೆ ನಡೆಸಲು ಮುಂದಾಗಿರುವುದು ಒಟ್ಟು ಗೊಂದಲಗಳಿಗೆ ಕಾರಣವಾಯಿತು. ಮತದಾರರ ಪಟ್ಟಿಯಿಂದ ಹೊರಬಿದ್ದ ಜನರು ಅದರ ವಿರುದ್ಧ ಹೋರಾಟ ನಡೆಸುವ ಶಕ್ತಿಯನ್ನೂ ಹೊಂದಿರಲಿಲ್ಲ. ಯಾಕೆಂದರೆ ಅವರಲ್ಲಿ ಬಹುತೇಕರು ಬಡವರ್ಗ ಮತ್ತು ದುರ್ಬಲ ಜಾತಿಗಳಿಗೆ ಸೇರಿದವರಾಗಿದ್ದರು. ಸೂಕ್ತ ದಾಖಲೆಗಳನ್ನು ಒದಗಿಸಲು ವಿಫಲರಾಗುವ ಬಹುತೇಕರು ಇದೇ ವರ್ಗಕ್ಕೆ ಸೇರಿರುತ್ತಾರೆ ಎನ್ನುವುದು ಚುನಾವಣಾ ಆಯೋಗಕ್ಕೆ ಗೊತ್ತಿಲ್ಲದೇ ಇಲ್ಲ. ಆದುದರಿಂದಲೇ ಈ ಬಾರಿಯ ಚುನಾವಣೆಯಲ್ಲಿ ಎನ್‌ಡಿಎ ಜೊತೆಗೆ ಚುನಾವಣಾ ಆಯೋಗವೂ ಕೈ ಜೋಡಿಸಿತ್ತು ಎಂದು ವಿರೋಧ ಪಕ್ಷಗಳು ಆರೋಪಿಸುತ್ತಿವೆ ಮತ್ತು ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ಎನ್‌ಡಿಎಯ ಗೆಲುವಿನ ಹೆಗ್ಗಳಿಕೆ ಚುನಾವಣಾ ಮುಖ್ಯ ಆಯುಕ್ತರಿಗೆ ಸೇರಬೇಕು ಎಂದು ವ್ಯಂಗ್ಯವಾಡುತ್ತಿವೆ.

# 200ಕ್ಕೂ ಹೆಚ್ಚು ಶಾಲೆಗಳ ಮಕ್ಕಳಿಂದ ಕವಿಗೋಷ್ಠಿ ಯುವ ಬೆಂಗಳೂರು ಟ್ರಸ್ಟ್

• ಉದಯವಾಹಿನಿ, ಬೆಂಗಳೂರು

ಯುವ ಬೆಂಗಳೂರು ಟ್ರಸ್ಟ್‌ವತಿಯಿಂದ ಕನ್ನಡ ಸಾಹಿತ್ಯ ಪರಿಷತ್ ಸಭಾಂಗಣದಲ್ಲಿ 70ನೇ ಕನ್ನಡ ರಾಜ್ಯೋತ್ಸವದ ಅಂಗವಾಗಿ ಮಕ್ಕಳ ಕನ್ನಡ ಕವಿಗೋಷ್ಠಿ ವೈಭವದಿಂದ ಜರುಗಿತು.

ಕಾರ್ಯಕ್ರಮವನ್ನು ಟ್ರಸ್ಟ್ ಸಂಸ್ಥಾಪಕ ಅಧ್ಯಕ್ಷರಾದ ಜಿ. ಕಿರಣ್ ಸಾಗರ್ ರವರು, ಪ್ರಧಾನ ಕಾರ್ಯದರ್ಶಿ ಶ್ವೇತಾ ಎಸ್. ರಾವ್ ರವರು, ಉಪಾಧ್ಯಕ್ಷ ಬಿ.ವಿ. ಸುನೀಲ್ ರವರು ಮಕ್ಕಳೊಂದಿಗೆ ದೀಪ ಬೆಳಗಿಸಿ ಉದ್ಘಾಟಿಸಿದರು. ಮಾತನಾಡಿದ ಸಂಸ್ಥಾಪಕ ಅಧ್ಯಕ್ಷ ಜಿ.ಕಿರಣ್ ಸಾಗರ್ ರವರು, ಮಾಜಿ ರಾಷ್ಟ್ರಪತಿ ಡಾ. ಎ.ಪಿ.ಜೆ ಅಬ್ದುಲ್ ಕಲಾಂ ಅವರ ಪ್ರೇರಣೆ ಮತ್ತು ಸ್ಫೂರ್ತಿಯಿಂದಾಗಿ 2018ರಲ್ಲಿ ಯುವ ಬೆಂಗಳೂರು ಟ್ರಸ್ಟ್ ಸ್ಥಾಪನೆಯಾಗಿದೆ. ದೇವರ ಸಮಾನ ಮಕ್ಕಳಿಗೆ ಶ್ರೀಮಂತ-ಬಡ ಎಂಬ ಭೇದವಿಲ್ಲದೆ ಸಮಾನ ಸೌಲಭ್ಯ ಸಿಗಬೇಕು ಎಂಬ ನಿಟ್ಟಿನಲ್ಲಿ ನಾವು ಕಾರ್ಯನಿರ್ವಹಿಸುತ್ತಿದ್ದೇವೆ.

ಕನ್ನಡ ಶಾಲೆಗಳು ಮುಚ್ಚಬಾರದು. ಶಿಕ್ಷಣ ವ್ಯವಹಾರವಾಗಬಾರದು, ಪ್ರತಿಯೊಬ್ಬ ಮಕ್ಕಳಿಗೂ ಗುಣಮಟ್ಟದ ಶಿಕ್ಷಣ ಸಿಗಬೇಕು, ಎಂದು ಹೇಳಿದರು. ಟ್ರಸ್ಟ್ ಮೂಲಕ ರಾಜ್ಯದಾದ್ಯಂತ 356 ಸರ್ಕಾರಿ ಶಾಲೆಗಳನ್ನು ದತ್ತು ಪಡೆದು ಅಭಿವೃದ್ಧಿ ಮತ್ತು ಗುಣಮಟ್ಟ ಹೆಚ್ಚಿಸುವ ಕಾರ್ಯ ನಡೆಯುತ್ತಿದೆ.




ಪ್ರತಿವರ್ಷ ಗ್ರಾಮೀಣ ಭಾಗದ ಸರ್ಕಾರಿ ಶಾಲಾ ಮಕ್ಕಳಿಗೆ ಉಚಿತ ನೋಟ್‌ಬುಕ್ ವಿತರಣೆ, ಉಚಿತ ಕಂಪ್ಯೂಟರ್‌ಗಳು, ಬೆಂಚುಗಳು, ಶೈಕ್ಷಣಿಕ ಸಲಕರಣೆಗಳು ಒದಗಿಸಲಾಗುತ್ತಿದೆ. ಕ್ರೀಡಾ, ಸಾಂಸ್ಕೃತಿಕ ಕಾರ್ಯಕ್ರಮಗಳನ್ನೂ ಆಯೋಜಿಸಲಾಗುತ್ತಿದೆ. ಬಾಲಕಿಯರಿಗೆ ಸ್ಯಾನಿಟರಿ ಕಿಟ್‌ಗಳ ವಿತರಣೆ ಕೂಡ ನಡೆಯುತ್ತಿದೆ.

> **ಕವಿಗೋಷ್ಠಿಯಲ್ಲಿ ಬೆಂಗಳೂರಿನ 200ಕ್ಕೂ ಹೆಚ್ಚು ಶಾಲೆಗಳ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಅದಿರನ್ನ, ಪಂಪ, ಪೊನ್ನ ಎಂಬ ಮೂರು ವಿಭಾಗಗಳಲ್ಲಿ ಪ್ರಶಸ್ತಿಗಳನ್ನು ನೀಡಲಾಗಿದ್ದು ಪ್ರಥಮ ಬಹುಮಾನ: ರೂ.10,000 ದ್ವಿತೀಯ ಬಹುಮಾನ: ರೂ.5,000 ತೃತೀಯ ಬಹುಮಾನ: ರೂ.3,000 ಜೊತೆಗೆ ಫಲಕ ನೀಡಿ ಸನ್ಮಾನಿಸಲಾಯಿತು. ವಿದ್ಯಾವಂತ ಸಮಾಜದಿಂದ ದೇಶದ ಅಭಿವೃದ್ಧಿ ಸಾಧ್ಯ. ಮಕ್ಕಳ ಶಿಕ್ಷಣ, ಸೌಕರ್ಯ ಮತ್ತು ಬೆಳವಣಿಗೆಗಾಗಿ ಯುವ ಬೆಂಗಳೂರು ಟ್ರಸ್ಟ್ ನಿರಂತರ ಶ್ರಮಿಸುತ್ತಿದೆ, ಎಂದು ಕಿರಣ್ ಸಾಗರ್ ಅವರು ಹೇಳಿದರು.**

# ದೈನಂದಿನ ಬದುಕಿನಲ್ಲಿ ಕನ್ನಡ



☛ ವಿಶ್ವಾಸ್.ಡಿ.ಗೌಡ



**ಮುಂದುವರೆದ ಭಾಗ**

7)ವ್ಯಾಪಾರ-ವಹಿವಾಟು ನಡೆಸುವಾಗ, ಪದಾರ್ಥಗಳನ್ನು ಖರೀದಿಸುವಾಗ ಕನ್ನಡಿಗರ ಅಂಗಡಿಗಳಿಗೆ ಹೋಗಿ, ಕರ್ನಾಟಕದಲ್ಲಿ ತಯಾರಾದ, ಕನ್ನಡಿಗರು ತಯಾರಿಸಿದ ಪದಾರ್ಥಗಳನ್ನು ಕೊಂಡು ಪ್ರೋತ್ಸಾಹಿಸಿ.

8)ಹಣ್ಣು-ತರಕಾರಿ ಮಾರುವವರು, ಮನೆಗೆ ಬಂದು ವ್ಯಾಪಾರ ಮಾಡುವ ಜನರೊಂದಿಗೆ ಕನ್ನಡದಲ್ಲೇ ಮಾತನಾಡಿ.

9) ಮಕ್ಕಳನ್ನು ಕನ್ನಡ ಶಾಲೆಗೆ ಕಳಿಸಿ, ಅವರಿಗೆ ಮನೆಯಲ್ಲಿ ಕನ್ನಡ ಚಿತ್ರ ಪುಸ್ತಕ, ಕಥೆ ಪುಸ್ತಕ ಓದಲು ಪ್ರೋತ್ಸಾಹಿಸಿ.

10)ಮಕ್ಕಳಿಗೆ ಕರ್ನಾಟಕದ ಬಗ್ಗೆ ಪ್ರೀತಿ ಅಭಿಮಾನ ಮೂಡಿ ಬರುವಂತೆ ವಿಷಯ ತಿಳಿಸಿ; ಕತೆ ಹೇಳಿ; ನಾಡು, ನುಡಿ, ಸಾಹಿತ್ಯ, ಸಂಸ್ಕೃತಿಗಳ ಪುಸ್ತಕಗಳನ್ನು ಓದಿ ಹೇಳಿ.

11)ಕನ್ನಡ ಪುಸ್ತಕಗಳನ್ನು ಕೊಂಡು ಮನೆಯಲ್ಲಿ ಒಂದು ಚಿಕ್ಕ ಗ್ರಂಥಾಲಯವನ್ನು ರೂಪಿಸಿ. ಅಲ್ಲಿ ಕನ್ನಡ ನಿಘಂಟುಗಳು, ವಿಶ್ವಕೋಶಗಳು ಇರಲಿ.

12) ನಿಮ್ಮ ಮಕ್ಕಳನ್ನು, ನಿಮಗೆ ಗೊತ್ತಿರುವ ಮಕ್ಕಳನ್ನು ಐ.ಎ.ಎಸ್, ಐ.ಪಿ.ಎಸ್ ಮೊದಲಾದ ಅಖಿಲ ಭಾರತ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸ್ಪರ್ಧಿಸಲು ಪ್ರೋತ್ಸಾಹಿಸಿ,

13)ಆಕಾಶವಾಣಿ, ದೂರದರ್ಶನಗಳಲ್ಲಿ ಕನ್ನಡ ಕಾರ್‍ಯಕ್ರಮಗಳನ್ನು ಕೇಳುವುದಕ್ಕೆ ನೋಡುವುದಕ್ಕೆ ಆದ್ಯತೆ ಇರಲಿ. ಡಿ ಅಲ್ಲಿನ ಕಾರ್‍ಯಕ್ರಮಗಳು ಕಳಪೆಯಾಗಿದ್ದರೆ ಅವುಗಳ ನಿರ್ದೇಶಕರಿಗೆ ಪತ್ರ ಬರೆದು ತಿಳಿಸಿ.

14) ಕನ್ನಡ ಚಲನಚಿತ್ರಗಳನ್ನು ನೋಡಿ, ಕನ್ನಡ ಧ್ವನಿ ಮುದ್ರಿಕೆ ಗಳನ್ನು ಕೊಂಡುಕೊಳ್ಳಿ, ಕನ್ನಡ ವಾಹಿನಿಗಳನ್ನೇ ನೋಡಿ. ರೀಮೇಕ್ ಚಿತ್ರ, ಕನ್ನಡ ಸಂಸ್ಕೃತಿಗೆ ಹೊಂದದ, ಸಭ್ಯತೆಯ ಎಲ್ಲೆ ಮೀರಿದ ಚಿತ್ರಗಳನ್ನು ತಿರಸ್ಕರಿಸಿ.

15)ನಿಮ್ಮ ಅರ್ಜಿಗಳೆಲ್ಲ ಕನ್ನಡದಲ್ಲಿರಲಿ, ಬ್ಯಾಂಕ್ ವಹಿವಾಟು ಕನ್ನಡದಲ್ಲಿರಲಿ, ಎಲ್ಲಾ ಕಡೆಗೂ ಕನ್ನಡದಲ್ಲೇ ರುಜುಮಾಡಿರಿ. ನಿಮ್ಮ ವ್ಯವಹಾರ ಇರುವಲ್ಲೆಲ್ಲ ಸಂಬಂಧಪಟ್ಟವರಿಗೆ ಅಧಿಕೃತ ಅರ್ಜಿ ಸಲ್ಲಿಸಿ ನಿಮ್ಮ ಸಹಿಯನ್ನು ಕನ್ನಡಕ್ಕೆ ಬದಲಿಸಿಕೊಳ್ಳಿರಿ ಇದಕ್ಕೆ ಕಾನೂನಿನ ಯಾವ ತೊಡಕೂ ಇಲ್ಲ

16)ಮದುವೆ, ಗೃಹಪ್ರವೇಶಗಳ ಕರೆಯೋಲೆಗಳು, ಸಭೆ ಸಮಾರಂಭಗಳ ಆಹ್ವಾನ ಪತ್ರಗಳು ಸಂಪೂರ್ಣವಾಗಿ ಕನ್ನಡದಲ್ಲಿರಲಿ.

17)ಮನೆಯ ಹೆಸರುಹಲಗೆ ಕನ್ನಡದಲ್ಲಿರಲಿ. ಈಗಾಗಲೇ ಇಂಗ್ಲಿಷ್‌ನಲ್ಲಿದ್ದರೆ ಕನ್ನಡಕ್ಕೆ ಬದಲಾಯಿಸಿ,


18) ನಿಮ್ಮ ಬಡಾವಣೆ, ಕಚೇರಿ, ಕಾರ್ಖಾನೆಗಳಲ್ಲಿನ ಕನ್ನಡ ಪರ ಸಂಘಟನೆಗಳ ಕಾರ್‍ಯಕ್ರಮಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ.

**-ಮುಂದುವರೆಯುತ್ತದೆ**

# ಕೊಲೆಸ್ಟ್ರಾಲ್ ನೋವಿಗೆ ಕಾರಣ?

ದೇಹದಲ್ಲಿ ಕೊಲೆಸ್ಟ್ರಾಲ್ ಹೆಚ್ಚಾದಾಗ, ರಕ್ತ ಸಂಚಾರದಲ್ಲಿ ತಡೆ ಉಂಟಾಗುತ್ತದೆ ಇದರಿಂದ ಹೃದಯದ ರಕ್ತನಾಳಗಳಿಗೆ ಸರಿಯಾಗಿ ರಕ್ತ ಸಂಚಾರವಾಗದೆ, ಹೃದಯದಲ್ಲಿ ಸಮಸ್ಯೆಗಳು ಕಾಣಿಸಿಕೊಳ್ಳುತ್ತದೆ. ಸಾಮಾನ್ಯವಾಗಿ ದೇಹದಲ್ಲಿ ಕೊಲೆಸ್ಟ್ರಾಲ್ ಮಟ್ಟ ಹೆಚ್ಚಾದಾಗ ಹಲವು ರೀತಿಯ ಲಕ್ಷಣಗಳು ಕಂಡುಬರುತ್ತವೆ. ಈ ಲಕ್ಷಣಗಳ ಬಗ್ಗೆ ತಿಳಿದುಕೊಳ್ಳೋಣ... ಶುಗರ್ ಬಿಪಿ ಕಾಯಿಲೆಯ ನಂತರ ತುಂಬಾನೇ ಸದ್ದು ಮಾಡುತ್ತಿರುವ ಕಾಯಿಲೆ ಎಂದರೆ ಅದು ಅಧಿಕ ಕೊಲೆಸ್ಟ್ರಾಲ್ ಒಂದು ವೇಳೆ ಕೆಟ್ಟ ಪ್ರಮಾಣದಲ್ಲಿ ಕೊಲೆಸ್ಟ್ರಾಲ್ ನಮ್ಮ ರಕ್ತದಲ್ಲಿ ಏರಿಕೆ ಆಗುತ್ತಾ ಹೋದರೆ ಅದರಿಂದ ನಮ್ಮ ಹೃದಯಕ್ಕೆ ತೊಂದರೆ ಹಾಗಂತ ಈ ಮಾತನ್ನು ನಾವು ಹೇಳುತ್ತಿಲ್ಲ, ಸ್ವತಃ ವೈದ್ಯರೇ ಹೇಳುತ್ತಾರೆ. ನಮ್ಮ ದೇಹದಲ್ಲಿ ಎರಡು ಬಗೆಯ ಕೊಲೆಸ್ಟ್ರಾಲ್ ಅಂಶಗಳಿವೆ. ಅದರಲ್ಲಿ ಒಳ್ಳೆಯ ಕೊಲೆಸ್ಟ್ರಾಲ್ ನಮ್ಮ ಜೀವಕೋಶಗಳ ಕಾರ್ಯ ನಿರ್ವಹಣೆಗೆ ಬಂದರೆ, ಕೆಟ್ಟ ಕೊಲೆಸ್ಟ್ರಾಲ್ ನಮ್ಮ ಹೃದಯ ಬಡಿತವನ್ನೇ ನಿಲ್ಲಿಸಿ ಬಿಡುವ ಸಾಮರ್ಥ್ಯ ಹೊಂದಿದೆ ಹೀಗಾಗಿ ಕೊಲೆಸ್ಟ್ರಾಲ್ ನಿರ್ವಹಣೆಗೆ ಅನುಕೂಲಕರವಾದ ಆಹಾರ ಪದ್ಧತಿ ಹಾಗೂ ಜೀವನಶೈಲಿಯಲ್ಲಿ ಬದಲಾವಣೆ ತಂದುಕೊಳ್ಳುವುದು ಬಹಳ ಅಗತ್ಯ

**ಆರೋಗ್ಯ ತಜ್ಞರು ಹೇಳುವ ಪ್ರಕಾರ :** ಈ ಬಗ್ಗೆ ಆರೋಗ್ಯ ತಜ್ಞರು ಹೇಳುವ ಪ್ರಕಾರ ಒಂದು ವೇಳೆ, ದೇಹದಲ್ಲಿ ಕೊಲೆಸ್ಟ್ರಾಲ್ ಮಟ್ಟ ಮಿತಿಮೀರಿ ಹೆಚ್ಚಾದರೆ ದೇಹದ ಮೂರು ಪ್ರಮುಖ ಜಾಗದಲ್ಲಿ ವಿಪರೀತ ನೋವು ಕಾಣಿಸಿಕೊಳ್ಳಲು ಶುರುವಾಗುತ್ತದೆಯಂತೆ ಈ ರೀತಿ ಕಂಡುಬಂದ ತಕ್ಷಣ ಎಚ್ಚೆತ್ತುಕೊಂಡು ವೈದ್ಯರ ಬಳಿ ಪರೀಕ್ಷೆಗೆ ಒಳಗಾದರೆ ಆದಷ್ಟು ಬೇಗ ಈ ಸಮಸ್ಯೆಯಿಂದ ಹೊರಬರಬಹುದು ಹಾಗೂ ಆರೋಗ್ಯ ಕಾಪಾಡಿಕೊಳ್ಳಬಹುದು!ಹಾಗಾದ್ರೆ ಕೊಲೆಸ್ಟ್ರಾಲ್ ಹೆಚ್ಚಾದರೆ ದೇಹದಲ್ಲಿ ಏನೆಲ್ಲಾ ಬದಲಾವಣೆಗಳು ಕಾಣಿಸಿಕೊಳ್ಳುತ್ತದೆ ಎನ್ನುವುದರ ಬಗ್ಗೆ ನೋಡುತ್ತಾ ಹೋಗೋಣ



**ಬೆನ್ನು ಅಥವಾ ಭುಜಗಳ ಭಾಗದಲ್ಲಿ ನೋವು ಕಾಣಿಸಿಕೊಳ್ಳುವುದು :** ಬೆನ್ನು ಅಥವಾ ಭುಜಗಳ ಭಾಗದಲ್ಲಿ ಅಪರೂಪಕ್ಕೆ ಒಂದೆರಡು ಬಾರಿ ಕಾಣಿಸಿಕೊಂಡರೆ ಪರವಾಗಿಲ್ಲ, ಆದರೆ ಪ್ರತಿದಿನ ನಿರಂತರವಾಗಿ ತೀವ್ರ ರೀತಿಯಲ್ಲಿ ನೋವು ಕಾಣಿಸಿಕೊಳ್ಳುತ್ತಿದ್ದರೆ ಅದು ದೇಹದಲ್ಲಿನ ಹೆಚ್ಚಿನ ಕೊಲೆಸ್ಟ್ರಾಲ್ ನಿಂದಾಗಿರಬಹುದು ಎನ್ನುವುದನ್ನು ಅರ್ಥ ಮಾಡಿಕೊಳ್ಳಬೇಕು. ದೇಹದಲ್ಲಿ ಕೆಟ್ಟ ಕೊಲೆಸ್ಟ್ರಾಲ್ ಮಟ್ಟ ಹೆಚ್ಚಾಗುವುದರಿಂದ ಕೆಳಬೆನ್ನು ನೋವು ಉಂಟಾಗುತ್ತದೆ ಎಂದು ಆರೋಗ್ಯ ತಜ್ಞರು ಹೇಳುತ್ತಾರೆ. ಹಾಗಾಗಿ ಈ ಆರೋಗ್ಯ ಸಮಸ್ಯೆಯನ್ನು ನಿರ್ಲಕ್ಷ್ಯ ಮಾಡದೆ ಕೂಡಲೇ ವೈದ್ಯರ ಬಳಿ ಪರೀಕ್ಷೆ ಮಾಡಿಸಬೇಕು.

**ಎದೆನೋವು ಕಾಣಿಸಿಕೊಳ್ಳುವುದು:** ದೇಹದ ರಕ್ತನಾಳಗಳಲ್ಲಿ ಕೊಲೆಸ್ಟ್ರಾಲ್ ಪ್ರಮಾಣ ಹೆಚ್ಚಾದಾಗ ಕೂಡ ಎದೆನೋವು ಸಮಸ್ಯೆ ಕಾಣಿಸಿಕೊಳ್ಳುವ ಸಾಧ್ಯತೆ ಇರುತ್ತದೆ ಎನ್ನುತ್ತಾರೆ ಆರೋಗ್ಯ ತಜ್ಞರು.

# ಪಿಜಿ ವೈದ್ಯಕೀಯ: ನ.18ರಿಂದ ಆಪ್ಷನ್ ದಾಖಲು ಆರಂಭ: ಕೆಇಎ

• ಉದಯವಾಹಿನಿ, ಬೆಂಗಳೂರು

ಸ್ನಾತಕೋತ್ತರ ವೈದ್ಯಕೀಯ ಕೋರ್ಸ್‌ಗಳ ಪ್ರವೇಶಕ್ಕೆ ಮೊದಲ ಸುತ್ತಿನ ಆನ್‌ಲೈನ್ ಸೀಟು ಹಂಚಿಕೆಗೆ ಚಾಲನೆ ನೀಡಿದ್ದು ನ.18ರಿಂದ 20ರವರೆಗೆ ಇಚ್ಛೆ/ಆಯ್ಕೆಗಳನ್ನು ದಾಖಲಿಸಲು ಅವಕಾಶ ನೀಡಲಾಗಿದೆ ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಹೆಚ್.ಪ್ರಸನ್ನ ತಿಳಿಸಿದ್ದಾರೆ. ಇದು ಸೇವಾ ನಿರತರಲ್ಲದ ಅರ್ಹರಿಗೆ ಅನ್ವಯವಾಗಲಿದೆ. ನ.21ರಂದು ಸಂಜೆ 4ಗಂಟೆಗೆ ಅಣಕು ಸೀಟು ಹಂಚಿಕೆಯ ಫಲಿತಾಂಶ ಪ್ರಕಟಿಸಲಾಗುತ್ತದೆ. ನ.24ರಂದು ಬೆಳಿಗ್ಗೆ 10ಗಂಟೆವರೆಗೆ ಇಚ್ಛೆ/ಆಯ್ಕೆಗಳನ್ನು ಅದಲು-ಬದಲು ಮಾಡಿಕೊಳ್ಳಲು ಅವಕಾಶ ನೀಡಲಾಗಿದೆ. ನ.25ರಂದು ತಾತ್ಕಾಲಿಕ ಸೀಟು ಹಂಚಿಕೆ ಫಲಿತಾಂಶ ಹಾಗೂ ನ.26ರಂದು ಬೆಳಿಗ್ಗೆ 11 ಗಂಟೆ ನಂತರ ಅಂತಿಮ ಫಲಿತಾಂಶ ಪ್ರಕಟಿಸಲಾಗುತ್ತದೆ ಎಂದು ಅವರು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ. ಶುಲ್ಕ ಪಾವತಿ, ಕಾಲೇಜಿಗೆ ವರದಿ ಮಾಡಿಕೊಳ್ಳುವ ವೇಳಾಪಟ್ಟಿಯನ್ನು ನಂತರದ ದಿನಗಳಲ್ಲಿ ಪ್ರಕಟಿಸಲಾಗುತ್ತದೆ. ವೆರಿಫಿಕೇಷನ್ ಸ್ಲಿಪ್ ಡೌನ್‌ಲೋಡ್ ಮಾಡಿಕೊಳ್ಳಲು ನ.17ರವರೆಗೆ ಅವಕಾಶ ನೀಡಲಾಗಿದೆ ಎಂದು ಅವರು ವಿವರಿಸಿದ್ದಾರೆ. ಮೊದಲ ಸುತ್ತಿನಲ್ಲಿ ದಾಖಲಿಸುವ ಇಚ್ಛೆ/ಆಯ್ಕೆಗಳು ಎರಡನೇ ಸುತ್ತಿನವರೆಗೂ ಅವೇ ಇರುತ್ತವೆ. ಹೀಗಾಗಿ ಎಚ್ಚರವಹಿಸಿ, ದಾಖಲಿಸಲು ಅವರು ಮನವಿ ಮಾಡಿದ್ದಾರೆ. ಹೆಚ್ಚಿನ ವಿವರಗಳಿಗೆ ಪಿಜಿನೀಟ್ ಮಾಹಿತಿ ಪುಸಕ್ತ ನೋಡಲು ಅವರು ಕೋರಿದ್ದಾರೆ.

# ವಂದೇ ಮಾತರಂ ಸ್ವಾತಂತ್ರ್ಯ ಸಂಗ್ರಾಮದ ಜ್ವಾಲೆ

• ಉದಯವಾಹಿನಿ, ಬೆಂಗಳೂರು

ಭಾರತದ ಸ್ವಾತಂತ್ರ್ಯ ಸಂಗ್ರಾಮದ ಚೈತನ್ಯವಾದ 'ವಂದೇ ಮಾತರಂ' ಗೀತೆಯ 150ನೇ ವಾರ್ಷಿಕೋತ್ಸವವನ್ನು ರಾಷ್ಟ್ರವ್ಯಾಪಿ ಆಚರಿಸಲು ಕೇಂದ್ರ ಸಚಿವ ಸಂಪುಟ ತೆಗೆದುಕೊಂಡಿರುವ ನಿರ್ಧಾರವನ್ನು ಹಿಂದೂ ಜನಜಾಗೃತಿ ಸಮಿತಿಯು ಸ್ವಾಗತಿಸುತ್ತದೆ. ವಂದೇ ಮಾತರಂ ಕೇವಲ ಗೀತೆಯಲ್ಲ, ಅದು ಬಂಕಿಮಚಂದ್ರ ಚಟ್ಟೋಪಾಧ್ಯಾಯರು ಭಾರತಮಾತೆಯನ್ನು ದೇವತೆಯಾಗಿ ಆರಾಧಿಸಲು ಮತ್ತು ದಾಸ್ಯದಿಂದ ಮುಕ್ತಿ ಪಡೆಯಲು ಭಾರತೀಯರಲ್ಲಿ ದೇಶಭಕ್ತಿಯ ಜ್ವಾಲೆ ಹೊತ್ತಿಸಲು ಬರೆದ ಶಕ್ತಿಯುತ ಘೋಷವಾಗಿದೆ ಎಂದು ಹಿಂದೂ ಜನಜಾಗೃತಿ ಸಮಿತಿ ತಿಳಿಸಿದೆ.

ಸಮಿತಿಯ ವತಿಯಿಂದ ದೇಶದಾದ್ಯಂತ ಈ ಗೀತೆಯ ಮಹತ್ವವನ್ನು ತಿಳಿಸಿ, ಸಾಮೂಹಿಕವಾಗಿ 'ವಂದೇ ಮಾತರಮ್' ಗಾಯನವನ್ನು ನಡೆಸಲಾಯಿತು ಮತ್ತು ಶಾಲೆ-ಕಾಲೇಜುಗಳಲ್ಲಿ ಮಕ್ಕಳಿಂದಲೂ ಹಾಡಿಸಲಾಯಿತು, ಇದರಿಂದ ವಿದ್ಯಾರ್ಥಿಗಳಲ್ಲೂ ದೇಶಭಕ್ತಿಯ ಭಾವನೆ ಜಾಗೃತಗೊಳಿಸಲಾಯಿತು. ಈ ಅಭಿಯಾನದಲ್ಲಿ ಬೆಂಗಳೂರಿನ ಹಲವಾರು ಶಾಲೆಯ ಸಾವಿರಾರು ವಿದ್ಯಾರ್ಥಿಗಳು ಈ ದೇಶ ಭಕ್ತಿಗೀತೆ ಗಾಯನದಲ್ಲಿ ಪಾಲ್ಗೊಂಡಿದ್ದರು.




ಸ್ವಾತಂತ್ರ್ಯ ಸಂಗ್ರಾಮದ ಕಾರ್ಯವನ್ನು ಮಹರ್ಷಿ ಅರಬಿಂದೋ ಅವರು ಇದನ್ನು ಕೇವಲ ರಾಜಕೀಯ ಕಾರ್ಯವಲ್ಲ, ಬದಲಿಗೆ ಜನರ ಆತ್ಮಚೇತನವನ್ನು ಜಾಗೃತಗೊಳಿಸುವ ಆಧ್ಯಾತ್ಮಿಕ ಕ್ರಿಯೆ ಎಂದು ಪರಿಗಣಿಸಿದ್ದರು.


1905ರ ಬಂಗಾಳ ವಿಭಜನೆ ವಿರೋಧ ಚಳುವಳಿಯ ಮುಖ್ಯವಾಹಿನಿಯಾಗಿದ್ದ ಈ ವಂದೇ ಮಾತರಂ ಘೋಷವು, ಬ್ರಿಟಿಷ್ ದಬ್ಬಾಳಿಕೆಯನ್ನು ಎದುರಿಸಲು ಮತ್ತು ಏಕತೆಯನ್ನು ಸಾರಲು ಸಾಧನವಾಗಿತ್ತು. ಕರ್ನಾಟಕದ ಗುಲ್ಬರ್ಗಾ (ಕಲಬುರಗಿ)ಯಲ್ಲಿ ವಂದೇ ಮಾತರಮ್ ಚಳುವಳಿ ನಡೆದಿತ್ತು. ಈ ವಿದ್ಯಾರ್ಥಿ ನೇತೃತ್ವದ ಚಳುವಳಿಯ ಮೂಲಕ ಇದು ನಮ್ಮ ರಾಜ್ಯದ ಸ್ವಾತಂತ್ರ್ಯ ಸಂಗ್ರಾಮಕ್ಕೂ ಅಪಾರ ಕೊಡುಗೆ ನೀಡಿದೆ ಎಂದರು.

ಈ ಅಭಿಯಾನದ ವೈಶಿಷ್ಟ್ಯವೇನೆಂದರೆ ಸದ್ಯ ಅನೇಕ ಕಡೆಗಳಲ್ಲಿ ವಂದೇ ಮಾತರಮ್ ಗೀತೆಯ ಮೊದಲ 2 ಚರಣಗಳನ್ನು ಮಾತ್ರ ಹಾಡಲಾಗುತ್ತದೆ, ಆದರೆ ಬಂಕಿಮ ಚಂದ್ರ ಚಟರ್ಜಿಯವರು ಒಟ್ಟು 6 ಚರಣಗಳಲ್ಲಿ ಗೀತೆಯನ್ನು ಬರೆದು ಭಾರತ ಮಾತೆಯನ್ನು ವರ್ಣಿಸಿದ್ದಾರೆ.

ಸಂಪೂರ್ಣ ವಂದೇ ಮಾತರಮ್ ಗಾಯನದಿಂದ ಭಾರತ ಮಾತೆಗೆ ಪೂರ್ಣ ಗೌರವ ಸಲ್ಲುತ್ತದೆ, ಮತ್ತು ಗೀತೆಯನ್ನು ಕೇಳುವವರ ಮನದಲ್ಲೂ ದೇಶಭಕ್ತಿಯು ಹೆಚ್ಚುತ್ತದೆ. ಹಾಗಾಗಿ ಸಮಿತಿಯು ಈ ನಿಮಿತ್ತ ಸಂಪೂರ್ಣ ವಂದೇ ಮಾತರಮ್ ಗೀತೆಯನ್ನು ಹಾಡುವ ಸಂಕಲ್ಪ ಮಾಡಿತ್ತು.

ಕಳೆದ 23 ವರ್ಷಗಳಿಂದ ರಾಷ್ಟ್ರ ಮತ್ತು ಧರ್ಮ ರಕ್ಷಣೆಗೆ ಶ್ರಮಿಸುತ್ತಿರುವ ಸಮಿತಿಯು, ಕೇಂದ್ರ ಸರ್ಕಾರದ ಆದೇಶದ ಹಿನ್ನೆಲೆಯಲ್ಲಿ, ಈ ಕಾರ್ಯಕ್ರಮದ ಮೂಲಕ ದೇಶಾಭಿಮಾನವನ್ನು ಮೂಡಿಸಲು ಪ್ರಯತ್ನಿಸಿತು.

# ರಾಮಾಯಣ



## ರಾವಣನು ಸೀತಾದೇವಿಗೆ ಹೇಳಿದೆ ಸಮಾಧಾನ

• ಹಿಂದಿನ ಸಂಚಿಕೆಯಿಂದ — 120 ನೇಯ ಅಧ್ಯಾಯ

ಅನಂತರ ಮಹಾ ಪ್ರತಾಪಶಾಲಿಯಾದ ರಾವಣನು ಮುಂದಣ ಕಾರ್ಯವನ್ನು ವಿಚಾರಿಸುತ್ತ ಅಂತಃಪುರದಿಂದ ಹೊರಟು ಓಲಗದ ಚಾವಡಿಗೆ ಬಂದು ಮಹಾಪರಾಕ್ರಮಶಾಲಿಗಳಾಗಿ ಮಾಂಸಾಹಾರಿಗಳಾದ ಎಂಟು ಮಂದಿ ರಾಕ್ಷಸರನ್ನು ಕರೆಸಿದನು. ಪೂರ್ವದಲ್ಲಿ ಬ್ರಹ್ಮದೇವನು ತನಗೆ ಕೊಟ್ಟವ ಗರ್ವಿತನಾದ ರಾವಣನು ಆ ರಾಕ್ಷಸರಿಗೆ ಅನೇಕ ರತ್ನಾಭರಣ ದುಕೂಲ ವಾಹನಾದಿಗಳನ್ನು ಸುಮಾನಿಸಿ ಅವರನ್ನು ಕುರಿತು ಎಲೈ ರಾಕ್ಷಸರುಗಳಿರಾ ನೀವು ಮಹಾಪರಾಕ್ರಮಿಗಳು : ಆದೇಶ ಬಲಿಷ್ಠರು. ಅದಲ್ಲದೆ ನನಗೆ ಆಪ್ತರು. ಆದಕಾರಣ ನಿಮಗೊಂದು ಕಾರ್ಯವನ್ನು ಹೇಳುತ್ತೇನೆ. ನಾನು ಜನಸ್ಥಾನದಲ್ಲಿ ನನ್ನ ತಮ್ಮನಾದ ಖರನನ್ನೂ ಆತನಿಗೆ ಸಹಾಯಕರಾಗಿ ತ್ರಿಶಿರ ದೂಷಣರೇ ಮೊದಲಾದ ಹದಿನಾಲ್ಕು ಸಾವಿರ ಮಂದಿ ರಾಕ್ಷಸರನ್ನೂ ಇರಿಸಿದ್ದೆನಷ್ಟೆ. ರಾಮನೆಂಬ ಒಬ್ಬ ಮನುಷ್ಯನು ಖರನನ್ನೂ ಆ ಹದಿನಾಲ್ಕು ಸಾವಿರ ರಾಕ್ಷಸರನ್ನೂ ಕೊಂದನು. ಈಗ ಜನಸ್ಥಾನವು ಶೂನ್ಯವಾಗಿದೆ. ನನಗೂ ರಾಮನಿಗೂ ಮಹತ್ತರವಾದ ವೈರವು ಬೆಳೆಯಿತು.

ನೀವು ಜನಾನಕ್ಕೆ ಹೋಗಿ ವೃತ್ತಾಂತವನ್ನು ಚೆನ್ನಾಗಿ ವಿಚಾರಿಸಿ ನನಗೆ ಹೊತ್ತುಹೊತ್ತಿಗೂ ಹೇಳಿಕಳುಹಿಸಿರಿ. ಹೋಗುವಾಗ ಎಚ್ಚರವಾಗಿರಿ. ಯಾವಾಗಲೂ ಆತನನ್ನು ಕೊಲ್ಲುವುದಕ್ಕೆ ತಕ್ಕ ಸಮಯವನ್ನು ಹುಡುಕಿಕೊಂಡಿರಿ. ನೀವು ಮಹಾಬಲವಂತರು. ಮಹಾಸಾಮರ್ಥ್ಯವುಳ್ಳವರು. ರಣರಂಗದಲ್ಲಿ ಕುಶಲರು. ಆದ್ದರಿಂದ ನಿಮ್ಮನ್ನು ಜನಸ್ಥಾನಕ್ಕೆ ಕಳುಹಿಸುತ್ತೇನೆ ಎಂದು ಪ್ರೀತಿಯಿಂದ ನುಡಿದನು. ಆ ರಾಕ್ಷಸರು ಹರ್ಷಪಟ್ಟು ರಾವಣನಿಗೆ ವಂದಿಸಿ ಲಂಕಾಪಟ್ಟಣದಿಂದ ಹೊರಟು ಜನಸ್ಥಾನಕ್ಕೆ ಹೋದರು.

**ರಾವಣನು ಸೀತಾದೇವಿಗೆ ಹೇಳಿದೆ ಸಮಾಧಾನ**

ಈ ಪ್ರಕಾರ ರಾವಣನು ತನ್ನ ಗಡಿದುರ್ಗವಾದ ಜನಸ್ಥಾನಕ್ಕೆ ಎಂಟು ಮಂದಿ ರಾಕ್ಷಸರನ್ನು ಕಳುಹಿಸಿ ತನ್ನ ಬುದ್ಧಿ ಮಾಂದ್ಯದಿಂದ ಕೃತಾರ್ಥನಾದೆನೆಂದೆಣಿಸಿದನು. ಅವನು ಮದನಬಾಣಗಳಿಗೆ ಗುರಿಯಾಗಿ ಸೀತಾದೇವಿಯನ್ನೇ ಧ್ಯಾನಮಾಡುತ್ತ ಆ ದೇವಿಯನ್ನು ನೋಡಬೇಕೆಂದು ಅವಳಿದ್ದ ಅರಮನೆಗೆ ಹೋದನು. ರಾಕ್ಷಸಸ್ತ್ರೀಯರ ಮಧ್ಯದಲ್ಲಿ ಪತಿವಿಯೋಗದಿಂದುಂಟಾದ ದುಃಖಾತಿಶಯ ದಿಂದ ಮುಖಕಾಂತಿಗುಂದಿ ಕಣ್ಣೀರನ್ನು ಬಿಡುತ್ತ ದೈನ್ಯಸ್ವರದಿಂದ ರೋದನ ಮಾಡುತ್ತ ಸುಳಿಗಾಳಿಯಿಂದ ಸಮುದ್ರದಲ್ಲಿ ಮುಳುಗಿದ ನೌಕೆಯಂತೆಯೂ ಮೃಗಗಳ ಹಿಂಡಿನಿಂದ ಬೇರೆಯಾಗಿ ನಾಯಿಗಳಿಂದ ಸುತ್ತಲ್ಪಟ್ಟ ಒಂಟಿಯಾದ ಹುಲ್ಲೆಯ ಮರಿಯಂತೆಯೂ ತಲೆಯನ್ನು ಬಗ್ಗಿಸಿಕೊಂಡು ಚಿಂತಾಕ್ರಾಂತಳಾಗಿದ್ದ ಸೀತಾದೇವಿಯನ್ನು ಬಲಾತ್ಕಾರದಿಂದ ಕರೆದುಕೊಂಡು ಹೋಗಿ ತನ್ನ ವೈಭವವನ್ನು ತೋರಿಸಿದನು.

**ಮುಂದುವರಿಯುವುದು...**

# ಕರ್ನಾಟಕ ರತ್ನ ಡಾ.ಪುನೀತ್ ರಾಜ್ ಕುಮಾರ್ ಪ್ರಶಸ್ತಿ ಪ್ರಧಾನ

## ಜನರು ಸಹಕಾರ ನೀಡಬೇಕು ಆಗ ಬೆಂಗಳೂರು ನಗರ ಅಭಿವೃದ್ಧಿ ವೇಗವಾಗಿ ಅಭಿವೃದ್ಧಿಯಾಗುತ್ತದೆ : ಮಹೇಶ್ವರರಾವ್

• ಉದಯವಾಹಿನಿ, ಬೆಂಗಳೂರು

ಜಿಬಿಎ ಕೇಂದ್ರ ಕಛೇರಿ ಅವರಣದಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಪಾಲಿಕೆಗಳ ನೌಕರರ ಕನ್ನಡ ಸಂಘದ ವತಿಯಿಂದ 70ನೇ ಕನ್ನಡ ರಾಜ್ಯೋತ್ಸವ ಅಚರಣೆ ಮತ್ತು ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಸಾಧಕ/ಸಾಧಕಿಯರಿಗೆ ಡಾ||ಪುನೀತ್ ರಾಜ್ ಕುಮಾರ್ ಪ್ರಶಸ್ತಿ ಪ್ರಧಾನ ಹಾಗೂ ಪಾಲಿಕೆಗಳ ಅಧಿಕಾರಿ ಮತ್ತು ನೌಕರರಿಗೆ ಗೌರವ ಸನ್ಮಾನ ಕಾರ್ಯಕ್ರಮ.




**70ನೇ ಕನ್ನಡ ರಾಜ್ಯೋತ್ಸವ ಅಚರಣೆ**

ಮುಖ್ಯ ಆಯುಕ್ತರಾದ ಮಹೇಶ್ವರರಾವ್ ಅಪರ ಪೊಲೀಸ್ ಮಹಾ ನಿರ್ದೇಶಕರಾದ ಶ್ರೀಮತಿ ರೂಪಾ ಡಿ. ಮೌದ್ಗಿಲ್ ,ನಿವೃತ್ತ ಐಎಎಸ್ ಸಿ.ಸೋಮಶೇಖರ್ ರವರು, ಪಶ್ಚಿಮ ನಗರ ಪಾಲಿಕೆ ಆಯುಕ್ತರಾದ ಡಾ.ರಾಜೇಂದ್ರ ಕೆ.ವಿ, ಉಪ ಆಯುಕ್ತರಾದ ರವೀಂದ್ರ ಕರಲಿಂಗಣ್ಣವಾರ್ ,ಮಾಜಿ ಮಹಾಪೌರರಾದ ಜೆ.ಹುಚ್ಚಪ್ಪ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಜಿ.ಕೃಷ್ಣಪ್ಪ, ಜಿಬಿಎ ಪಾಲಿಕೆಗಳ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ಎ.ಅಮೃತ್ ರಾಜ್ ರವರು, ಜಿಬಿಎ ಪಾಲಿಕೆಗಳ ನೌಕರರ ಕನ್ನಡ ಸಂಘದ ಅಧ್ಯಕ್ಷರಾದ ಸಾಯಿಶಂಕರ್ ನಗರ ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷರಾದ ಪ್ರಕಾಶ್ ಮೂರ್ತಿರವರು ಪಾರಿವಾಳ ಹಾರಿ ಬಿಡುವ ಮೂಲಕ ಕಾರ್ಯಕ್ರಮ ಉದ್ಘಾಟನೆ ಮಾಡಿದರು. ಮುಖ್ಯ ಆಯುಕ್ತರು ಮಹೇಶ್ವರರಾವ್ ರವರು ಮಾತನಾಡಿ ಜಿಬಿಎ ಆಡಳಿತದಲ್ಲಿ ಉತ್ತಮ ಕೆಲಸವಾಗುತ್ತಿದೆ. ಕನ್ನಡ ಉಳಿಸಿ, ಬೆಳಸಬೇಕು. ಕನ್ನಡ ಭಾಷೆ ಉಳಿಸಿ, ಬೆಳಸಲು ನೌಕರರ ಕನ್ನಡ ಸಂಘ ಕನ್ನಡ ರಾಜ್ಯೋತ್ಸವವನ್ನು ಅಂತರಾಷ್ಟ್ರ ಮತ್ತು ರಾಷ್ಟ್ರಿಯ ಮಟ್ಟದಲ್ಲಿ ಅಚರಿಸುತ್ತಿದ್ದಾರೆ.

ಜನರು ಸಹಕಾರ ನೀಡಬೇಕು ಆಗ ಬೆಂಗಳೂರು ನಗರ ಅಭಿವೃದ್ಧಿ ವೇಗವಾಗಿ ಅಭಿವೃದ್ಧಿಯಾಗುತ್ತದೆ ಎಂದು ಹೇಳಿದರು. ಸಿ.ಸೋಮಶೇಖರ್ ರವರು ಮಾತನಾಡಿ ಸಂಸ್ಕೃತಿ, ಸಂಸ್ಕಾರ ಜೀವನಮೌಲ್ಯವಿರುವುದು ಕನ್ನಡ ಭಾಷೆಯಲ್ಲಿ. ಲಿಪಿಗಳ ರಾಣಿ ಎಂಬ ಕನ್ನಡ ಭಾಷೆಗೆ ಕೀರ್ತಿ ಇದೆ. ಕನ್ನಡಗರು ಧೀಮಂತ ಸಾಹಿತಿಗಳು. ಜಾನಪದ ಸಾಹಿತ್ಯದಲ್ಲಿ ವಿದ್ಯಾವಂತರಲ್ಲದಿದ್ದರು ಅಂತರಂಗದ ಭಾವದಿಂದ ಮಾತನಾಡುತ್ತಾರೆ. ಕನ್ನಡನಾಡಿಗೆ 2000ಸಾವಿರಕ್ಕೂ ಹೆಚ್ಚು ವರ್ಷಗಳ ಇತಿಹಾಸವಿದೆ. ಮಾನವಮೌಲ್ಯಗಳು ಇರುವವರು ಕನ್ನಡಿಗರು. ನನ್ನನು ಕೊಂದರು ಕನ್ನಡ ನಾಡಿನಲ್ಲಿ ಹುಟ್ಟುತ್ತೇನೆ ಎಂದು ಅದಿಕವಿ ಪಂಪ ಹೇಳಿದರು. 8 ಜ್ಞಾನಪೀಠ ಪ್ರಶಸ್ತಿ ಪಡೆದ ಕನ್ನಡ ಭಾಷೆ ಬಹಳಷ್ಟು ಶ್ರೀಮಂತವಾಗಿದೆ. ಆಡಳಿತದಲ್ಲಿ ಸಂಪೂರ್ಣ ಕನ್ನಡದಲ್ಲಿ ಆಗಬೇಕು. ಮನೆ, ಮನೆಯಾಂಗಳದ ಭಾಷೆಯಾದಗ ಮಾತ್ರ ಸಾರ್ವಭೌಮ ಭಾಷೆಯಾಗುತ್ತದೆ.

ತಾಯಿ, ನಾಡಿನ ಭಾಷೆಯ ಋಣ ತೀರಿಸಬೇಕು ಎಂದು ಹೇಳಿದರು. ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಸಾಧಕ/ಸಾಧಕಿಯರಿಗೆಡಾ? ಪುನೀತ್ ರಾಜ್ ಕುಮಾರ್ ಪ್ರಶಸ್ತಿ ಪ್ರದಾನವನ್ನು ಶ್ರೀಮತಿ ಎಸ್.ಪಿ ಶಶಿಕಲಾ, ಸಹಾಯಕ ಪೋಲಿಸ್ ಆಯುಕ್ತರು ಸಂಚಾರ ಕೇಂದ್ರ ಉಪವಿಭಾಗ ಡಾ|| ಕಾಂತರಾಜು ಪುರ ಸುರೇಶ್, ಲೇಖಕರು ಮತ್ತು ಕವಿಗಳು ರೂಪೇಶ್ ರಾಜಣ್ಣ, ಕನ್ನಡ ಹೋರಾಟಗಾರರು ಬಿ. ರಾಮಮೂರ್ತಿ, ಪ್ರಖ್ಯಾತ ಚಲನಚಿತ್ರ ನಿರ್ದೇಶಕರು ರಂಜನ್, ಚಲನಚಿತ್ರ, ನಾಯಕ ನಟ ರಾಣವಿ ಶೇಖರ್, ಶ್ರೀಮತಿ ಕಾಂಚನ ಎಸ್. ರೆಡ್ಡಿ, ನಾಗರಾಜ್,ಮೋಹನ್ ರೆಡ್ಡಿ,ವಿನೋದ್ ಕುಮಾರ್ ಎಸ್.ಜಿ., ರಾಜು, ಮಧು ಜಿ.,ಮಹಾಂತೇಶ್, ನಾಗೇಶ್ ರಾಮಕೃಷ್ಣ,ಶ್ರೀಕಾಂತ್ ಗುರುಮೂರ್ತಿ, ರಮೇಶ್,ವಸಂತ್‌ಕುಮಾರ್, ಶಂಕರ್ ರಾವ್, ಶ್ರೀನಿವಾಸ್‌ಗೌಡ, ಆರ್. ಕಿಶೋರ್ ಮತ್ತು ಅಧಿಕಾರಿ, ನೌಕರರಿಗೆ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು.

> **ಬೆಂಗಳೂರು ನಗರದಲ್ಲಿ ಎಲ್ಲಾ ಭಾಷೆಯ ಜನರು ಇದ್ದಾರೆ ಅನ್ಯ ಭಾಷಿಕರಿಗೆ ಕನ್ನಡ ಕಲಿಸುವ ಕೆಲಸವಾಗಬೇಕು. ಕನ್ನಡ ಭಾಷೆ ಉಳಿಯದೇ ಹೋದರೆ ನಮ್ಮ ಆಸ್ಮಿತೆ ಉಳಿಯುವುದಿಲ್ಲ. ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಬದಲು ವಿರಾಟ ಬೆಂಗಳೂರು ಎಂದು ಹೆಸರಿಡುವುದು ಉತ್ತಮ. ಮಾತೃ ಭಾಷೆಯಲ್ಲಿಯೆ ಯೋಚನೆ ಮಾಡುತ್ತೇವೆ ಮಾತೃ ಭಾಷೆಯಿಂದ ಬಹಳ ಉಪಯೋಗವಿದೆ. ನಮ್ಮ ಸೊಗಡಿನ ಭಾಷೆ ಉಳಿಯಬೇಕು. ನಮ್ಮ ಭಾಷೆ ಹೆಮ್ಮೆ ಎಂಬ ಅಭಿಮಾನದಿಂದ ಮಾತಾಡಿ ಎಂದು ಹೇಳಿದರು.**
>
> **– ಶ್ರೀಮತಿ ರೂಪ ಮೌದ್ಗಿಲ್**

## ಜಲಾಶಯದ ಮಟ್ಟ 1613 ಅಡಿ ತಲುಪಿದ ನಂತರ ಕ್ರಸ್ಟ್‌ಗೇಟ್‌ಗಳನ್ನು ಅಳವಡಿಸಲು ನಿರ್ಧಾರ

# ಹಿಂಗಾರಿಗಿಲ್ಲ, ನಿಂತ ಬೆಳೆಗಷ್ಟೇ ನೀರು: ಸಭೆಯಲ್ಲಿ ತೀರ್ಮಾನ

• ಉದಯವಾಹಿನಿ ಕೊಪ್ಪಳ

ತುಂಗಭದ್ರಾ ಜಲಾಶಯಕ್ಕೆ ಹೊಸ ಕ್ರಸ್ಟ್‌ಗೇಟ್‌ಗಳನ್ನು ಅಳವಡಿಸಬೇಕಿರುವ ಕಾರಣ ಜಲಾಶಯ ವ್ಯಾಪ್ತಿಯ ಕೊಪ್ಪಳ, ವಿಜಯನಗರ, ರಾಯಚೂರು ಹಾಗೂ ಬಳ್ಳಾರಿ ಜಿಲ್ಲೆಗಳ ರೈತರಿಗೆ ಹಿಂಗಾರು ಹಂಗಾಮಿಗೆ ನೀರು ಹರಿಸದಿರಲು ತುಂಗಭದ್ರಾ ಯೋಜನೆಯ ಮತ್ತು ವಿಜಯನಗರ ಕಾಲುವೆಗಳ 125ನೇ ನೀರಾವರಿ ಸಲಹಾ ಸಮಿತಿ ಸಭೆಯಲ್ಲಿ ತೀರ್ಮಾನಿಸಲಾಗಿದೆ.

ಜಲಸಂಪನ್ಮೂಲ ಸಚಿವರೂ ಆದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅಧ್ಯಕ್ಷತೆಯಲ್ಲಿ ಬೆಂಗಳೂರಿನಲ್ಲಿ ನಡೆದ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ. ಆದರೆ, ಮುಂಗಾರು ಹಂಗಾಮಿನಲ್ಲಿ ನಾಟಿ ಮಾಡಿ ಬೆಳೆದು ನಿಂತಿರುವ ಬೆಳೆಗಳಿಗೆ ಮಾತ್ರ ನೀರು ಒದಗಿಸಲಾಗುತ್ತದೆ.

**ಕೆರೆಕಟ್ಟೆ ತುಂಬಿಸಲು ಬಳಕೆ**

ಜಲಾಶಯದ ಮಟ್ಟ 1613 ಅಡಿ ತಲುಪಿದ ನಂತರ ಕ್ರಸ್ಟ್ ಗೇಟ್‌ಗಳನ್ನು ಅಳವಡಿಸಲು ನಿರ್ಧರಿಸಲಾಗಿದ್ದು, ಪ್ರಸ್ತುತ ಇರುವ 76 ಟಿಎಂಸಿ ಅಡಿ ನೀರಿನಲ್ಲಿಯೇ ಬೇಸಿಗೆ ಸಮಯದಲ್ಲಿ ಕುಡಿಯಲು, ಕೆರೆಕಟ್ಟೆ ತುಂಬಿಸಲು ಬಳಕೆ ಮಾಡಲಾಗುತ್ತದೆ.

**ಪ್ರಸ್ತುತ ಬೆಳೆಗೆ ನೀರು:** ತುಂಗಭದ್ರಾ ಎಡದಂಡೆ ಮುಖ್ಯ ಕಾಲುವೆ ವ್ಯಾಪ್ತಿಯಲ್ಲಿ ಬೆಳೆದು ನಿಂತ ಬೆಳೆಗಳಿಗೆ ಡಿ. 1ರಿಂದ 2026ರ ಜನವರಿ 10ರ ತನಕ 3000 ಕ್ಯುಸೆಕ್ಸ್, ಎಡದಂಡೆ ವಿಜಯನಗರ ಕಾಲುವೆಗೆ ಜ. 1ರಿಂದ ಮೇ 10ರ ತನಕ 150 ಕ್ಯುಸೆಕ್ಸ್‌ನಂತೆ 1ರಿಂದ 1ಎ ಕಾಲುವೆ ತನಕ, ಬಲದಂಡೆ ಮೇಲ್ಮಟ್ಟದ ಕಾಲುವೆಗೆ ಡಿ. 1ರಿಂದ ಜ. 10ರ ತನಕ 1300 ಕ್ಯುಸೆಕ್ಸ್‌ನಂತೆ, ಬಲದಂಡೆ ಕೆಳಮಟ್ಟದ ಕಾಲುವೆಗೆ ಡಿ. 1ರಿಂದ ಜ. 10ರ ತನಕ 750 ಕ್ಯುಸೆಕ್ಸ್‌ನಂತೆ, ರಾಯ ಬಸವಣ್ಣ ಕಾಲುವೆಗೆ ಜ.1ರಿಂದ ಮೇ 31ರ ತನಕ ಸರಾಸರಿ 250 ಕ್ಯುಸೆಕ್ಸ್ ಅಥವಾ ಕಾಲುವೆಯಡಿ ನೀರು ಲಭ್ಯತೆ ಇರುವ ತನಕ ಇದರಲ್ಲಿ ಯಾವುದು ಮೊದಲು ಅನ್ವಯವಾಗುತ್ತದೆಯೊ ಅದರಂತೆ ನೀರು ಹರಿಸಲಾಗುತ್ತದೆ. ಎಡದಂಡೆ ಮೇಲ್ಮಟ್ಟದ ಕಾಲುವೆಗೆ ಡಿ. 1ರಿಂದ 25 ಕ್ಯುಸೆಕ್ಸ್‌ನಂತೆ ಅಥವಾ ಜಲಾಶಯದ ನೀರಿನ ಮಟ್ಟ 1585 ಅಡಿಗಳತನಕ ಇದರಲ್ಲಿ ಯಾವುದು ಮೊದಲೇ ಅದಕ್ಕೆ ಅನುಗುಣವಾಗಿ ನೀರು ಮತ್ತು 150 ಕ್ಯುಸೆಕ್ಸ್‌ನಂತೆ ನದಿ ಪೂರಕ ಕಾರ್ಖಾನೆಗಳಿಗೆ ನೀರು ಹರಿಸಲು ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಗಿದೆ.

ಸಚಿವ ಎನ್.ಎಸ್. ಭೋಸರಾಜು, ಮುನಿರಾಬಾದ್ ಕಾಡಾ ಅಧ್ಯಕ್ಷ ಹಸನಸಾಬ್ ದೋಟಿಹಾಳ, ಶಾಸಕರಾದ ರಾಘವೇಂದ್ರ ಹಿಟ್ನಾಳ, ದೊಡ್ಡನಗೌಡ ಪಾಟೀಲ, ಹಂಪನಗೌಡ ಬಾದರ್ಲಿ, ನಾಗೇಂದ್ರ, ಗಣೇಶ್, ಬಸನಗೌಡ ದದ್ದಲ್, ಜನಾರ್ದನ ರೆಡ್ಡಿ, ಸಂಸದ ರಾಜಶೇಖರ ಹಿಟ್ನಾಳ, ವಿಧಾನಪರಿಷತ್ ಸದಸ್ಯರಾದ ಹೇಮಲತಾ ನಾಯಕ, ವಸಂತಕುಮಾರ್, ಬಸವನಗೌಡ ಬಾದರ್ಲಿ, ಅಚ್ಚುಕಟ್ಟು ಪ್ರದೇಶದ ನಾಲ್ಕೂ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಕೃಷಿ ಇಲಾಖೆ ಅಧಿಕಾರಿಗಳು ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.


ಉದಯವಾಹಿನಿ ಚಿತ್ರ

**ಬಿಜೆಪಿ ಸಭೆ**

ಎರಡನೇ ಬೆಳೆಗೆ ನೀರು ಹರಿಸಲೇಬೇಕು ಎಂದು ಸರ್ಕಾರವನ್ನು ಒತ್ತಾಯಿಸಿ ಹೋರಾಟ ರೂಪಿಸಲು ಸಜ್ಜಾಗಿರುವ ಬಿಜೆಪಿ ಬೆಂಗಳೂರಿನಲ್ಲಿ ಶನಿವಾರ ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ನೇತೃತ್ವದಲ್ಲಿ ಪಕ್ಷದ ಕಚೇರಿಯಲ್ಲಿ ಸಭೆ ನಡೆಸಲು ತೀರ್ಮಾನಿಸಿದೆ. ನಾಲ್ಕೂ ಜಿಲ್ಲೆಗಳ ಪ್ರಮುಖರು ಮುನಿರಾಬಾದ್‌ನಲ್ಲಿ ಗುರುವಾರ ಸಭೆ ನಡೆಸಿ ಹೋರಾಟದ ಬಗ್ಗೆ ಚರ್ಚಿಸಿದ್ದರು. 'ಐಸಿಸಿ ಸಭೆಯಲ್ಲಿ ಎರಡನೇ ಬೆಳೆಗೆ ನೀರು ಹರಿಸಲು ತೀರ್ಮಾನಿಸದಿದ್ದರೆ ಹೋರಾಟ ಕೈಗೊಳ್ಳಲಾಗುವುದು' ಎಂದು ಮಾಜಿ ಸಚಿವ ಬಿ. ಶ್ರೀರಾಮುಲು ಹೇಳಿದ್ದರು. ಈಗ ನೀರು ಹರಿಸಲು ಸಭೆಯಲ್ಲಿ ಒಪ್ಪಿಗೆ ಲಭಿಸದ ಕಾರಣ ನಿಗದಿಯಂತೆ ಸಭೆ ನಡೆಯಲಿದೆ ಎಂದು ವಿಧಾನಪರಿಷತ್ ಸದಸ್ಯೆ ಬಿಜೆಪಿಯ ಹೇಮಲತಾ ನಾಯಕ ತಿಳಿಸಿದರು.

### ಡಿ.2ನೇ ವಾರದಿಂದ ಕ್ರಸ್ಟ್ ಗೇಟ್ ಅಳವಡಿಕೆ: ತಂಗಡಗಿ

ಜಲಾಶಯಕ್ಕೆ ಡಿಸೆಂಬರ್ ಎರಡನೇ ವಾರದಿಂದ ಹೊಸ ಕ್ರಸ್ಟ್‌ಗೇಟ್‌ಗಳನ್ನು ಅಳವಡಿಸುವ ಕಾರ್ಯ ಆರಂಭವಾಗಲಿದ್ದು ಜೂನ್ ವೇಳೆಗೆ ಎಲ್ಲಾ ಗೇಟ್‌ಗಳ ಬದಲಾವಣೆ ಪೂರ್ಣಗೊಳ್ಳಲಿದೆ ಎಂದು ಐಸಿಸಿ ಸಲಹಾ ಸಮಿತಿ ಅಧ್ಯಕ್ಷ ಶಿವರಾಜ ತಂಗಡಗಿ ತಿಳಿಸಿದರು. ಬಿಜೆಪಿ ಸಭೆ ಬಗ್ಗೆ ಪ್ರತಿಕ್ರಿಯಿಸಿದ ಅವರು 'ಬಿಜೆಪಿಗೆ ಮಾನ ಮರ್ಯಾದೆ ಇದೆಯೇ? ಮೊದಲು ಗೇಟ್ ಅಳವಡಿಕೆ ಮಾಡುತ್ತೇವೆ ಎಂದು ಸದನದಲ್ಲಿ ಜಲಸಂಪನ್ಮೂಲ ಸಚಿವರು ಹೇಳಿದಾಗ ಬಿಜೆಪಿ ಶಾಸಕರು ಡಿ.ಕೆ. ಶಿವಕುಮಾರ್ ಅವರನ್ನು ಅಭಿನಂದಿಸಿದ್ದಾರೆ. ಬಿಜೆಪಿ ಈಗ ಜನರ ದಿಕ್ಕು ತಪ್ಪಿಸುವ ಕೆಲಸ ಮಾಡುತ್ತಿದೆ. ಅವರಿಗೆ ಯಾವುದೇ ಬದ್ಧತೆಯಿಲ್ಲ' ಎಂದರು. ಕ್ರಸ್ಟ್‌ಗೇಟ್ ಅಳವಡಿಸುವ ವಿಚಾರದಲ್ಲಿ 52 ಕೋಟಿ ಅವ್ಯವಹಾರವಾದ ಬಗ್ಗೆ ಬಿ. ಶ್ರೀರಾಮುಲು ಮಾಡಿದ ಆರೋಪಕ್ಕೆ ಪ್ರತಿಕ್ರಿಯಿಸಿ 'ಕ್ರಸ್ಟ್‌ಗೇಟ್‌ಗಳಿಗೆ ಟೆಂಡರ್ ಮಾಡಿದ್ದು ಕೇಂದ್ರದ ಅಧೀನದಲ್ಲಿರುವ ತುಂಗಭದ್ರಾ ಮಂಡಳಿ. ರಾಜ್ಯ ಸರ್ಕಾರಕ್ಕೆ ಟೆಂಡರ್ ಕರೆಯುವ ಅಧಿಕಾರವಿಲ್ಲ. ಗೇಟ್ ತಯಾರಿಯ ಗುತ್ತಿಗೆಯನ್ನು ಗುಜರಾತ್‌ನ ಅಹಮದಾಬಾದ್ ಕಂಪನಿಗೆ ನೀಡಲಾಗಿದೆ. ರಾಜ್ಯ ಬಿಜೆಪಿ ನಾಯಕರು ಕೇಂದ್ರ ಸರ್ಕಾರವನ್ನು ಕೇಳಲಿ' ಎಂದು ಹೇಳಿದರು.

## ಮಿನಿ ನ್ಯೂಸ್

### ನಿಷ್ಕ್ರಿಯ ಖಾತೆಗಳಲ್ಲಿವೆ ರೂ.78 ಕೋಟಿ


ಉದಯವಾಹಿನಿ ಚಿತ್ರ

• ಉದಯವಾಹಿನಿ ಉಡುಪಿ

ಭಾರತ ಹಣಕಾಸು ಸಚಿವಾಲಯದ ಮಾರ್ಗಸೂಚಿ ಅನ್ವಯ ದೀರ್ಘ ಕಾಲದವರೆಗೆ ಹಕ್ಕು ಪಡೆಯದೇ ಉಳಿದಿರುವ ಬ್ಯಾಂಕ್ ಠೇವಣಿಗಳು, ವಿಮಾ ಕಂತುಗಳು ಹಾಗೂ ಷೇರುಗಳನ್ನು ಅವರ ವಾರಸುದಾರರಿಗೆ ಕಾನೂನುಬದ್ಧವಾಗಿ ಹಸ್ತಾಂತರಿಸುವ ಉದ್ದೇಶದಿಂದ ಉಡುಪಿ ಜಿಲ್ಲಾ ಪಂಚಾಯಿತಿ, ಆರ್.ಬಿ.ಐ, ಲೀಡ್ ಬ್ಯಾಂಕ್ ಹಾಗೂ ಜಿಲ್ಲೆಯ ವಿವಿಧ ಬ್ಯಾಂಕುಗಳ ಆಶ್ರಯದಲ್ಲಿ ವಿಶೇಷ ಶಿಬಿರವು ನಗರದ ಜಿಲ್ಲಾ ಪಂಚಾಯಿತಿಯ ಡಾ. ವಿ. ಎಸ್ ಆಚಾರ್ಯ ಸಭಾಂಗಣದಲ್ಲಿ ನಡೆಯಿತು.

ಶಿಬಿರವನ್ನು ಜಿ.ಪಂ. ಮುಖ್ಯ ಲೆಕ್ಕಾಧಿಕಾರಿ ನಿಶ್ಚಿತ್ ಹೆಗ್ಡೆ ಉದ್ಘಾಟಿಸಿ ಮಾತನಾಡಿ, ಜಿಲ್ಲೆಯಲ್ಲಿ ಸುಮಾರು ರೂ.78 ಕೋಟಿ ಮೌಲ್ಯದ ನಿಷ್ಕ್ರಿಯಗೊಂಡ ಖಾತೆಗಳಿವೆ. ಆ ಖಾತೆಯಲ್ಲಿರುವ ಹಣವನ್ನು ವಾರಸುದಾರರಿಗೆ ತಲುಪಿಸುವ ಉದ್ದೇಶದಿಂದ ವಿಶೇಷ ಶಿಬಿರವನ್ನು ಆಯೋಜಿಸಲಾಗಿದೆ ಎಂದರು. ಇದೇ ಸಂಧರ್ಭದಲ್ಲಿ ಕೆನರಾ ಬ್ಯಾಂಕ್ ವತಿಯಿಂದ ಠೇವಣಿ ಪಡೆಯುವ ಕುರಿತಾದ ಮಾಹಿತಿಯುಳ್ಳ ಭಿತ್ತಿಪತ್ರವನ್ನು ಬಿಡುಗಡೆಗೊಳಿಸಲಾಯಿತು.

### ವಿವಿಧ ಕಚೇರಿಗಳಿಗೆ ಲೋಕಾಯುಕ್ತ ತಂಡ ಭೇಟಿ, ಪರಿಶೀಲನೆ

• ಉದಯವಾಹಿನಿ ಗಂಗಾವತಿ

ನಗರದ ತಹಶೀಲ್ದಾರ್ ಕಚೇರಿಯ ಭೂ ದಾಖಲೆಗಳ ಸಹಾಯಕ ನಿರ್ದೇಶಕರ ಕಚೇರಿ, ಹಿರಿಯ ಉಪನೋಂಣಾಧಿಕಾರಿಗಳ ಮತ್ತು ಮದುವೆ ಅಧಿಕಾರಿಗಳ ಕಾರ್ಯಾಲಯ ಹಾಗೂ ಉಪವಿಭಾಗ ಆಸ್ಪತ್ರೆಗೆ ಲೋಕಾಯುಕ್ತ ಡಿವೈಎಸ್ಪಿ ಲೋಕೇಶ್ ನೇತೃತ್ವದ ಅಧಿಕಾರಿಗಳ ತಂಡ ದಿಢೀರ್ ಭೇಟಿ ನೀಡಿ, ದಾಖಲೆ, ಕಾರ್ಯವೈಖರಿ ಪರಿಶೀಲನೆ ನಡೆಸಿದರು.

ಭೂ ದಾಖಲೆಗಳ ಸಹಾಯಕ ನಿರ್ದೇಶಕರ ಕಚೇರಿಗೆ ಭೇಟಿ ನೀಡಿ, ಕೊಠಡಿಯಲ್ಲಿ ಅಧಿಕಾರಿಗಳ ಕಾರ್ಯವೈಖರಿ, ಸರ್ವೆಯರ್ ಸಂಖ್ಯೆ, ಪೋಡಿ ಪ್ರಕರಣ, ಹಳೆಯ ದಾಖಲೆ ಮತ್ತು ರಿಜಿಸ್ಟರ್ ನಿರ್ವಹಣೆ, ಬಾಕಿ ಪ್ರಕರಣದ ದಾಖಲೆಗಳನ್ನು ಪರಿಶೀಲಿಸಿದರು. ನಂತರ ಸಬ್ ರಿಜಿಸ್ಟರ್ ಕಚೇರಿಗೆ ಭೇಟಿ ನೀಡಿ, ಸಿಬ್ಬಂದಿ ಕೊರತೆ, 45 ರಜಿಸ್ಟರ್ ನಿರ್ವಹಣೆ ಲೋಪ, ಪುಸ್ತಕ ನಿರ್ವಹಣೆ ಲೋಪ, ಹಾಜರಾತಿ ಪುಸ್ತಕ ಪರಿಶೀಲಿಸಿ, ನಿರ್ವಹಣೆ ಇಲ್ಲದಿರುವುದು ಕಂಡು ಅಧಿಕಾರಿಗಳನ್ನ ತರಾಟೆಗೆ ತೆಗೆದುಕೊಂಡರು. ನಂತರ ಪ್ರಭಾರಿ ಸಬ್ ರಿಜಿಸ್ಟರ್ ರವಿ ಅವರಿಗೆ ಅಗತ್ಯ ದಾಖಲೆಗಳ ನಿರ್ವಹಣೆಗೆ ಸೂಚಿಸಿದರು.

## ಧರ್ಮಸ್ಥಳ ಸಂಸ್ಥೆಯು ಮಹಿಳೆಯರಿಗೆ 2ನೇ ತವರು ಮನೆ ಇದ್ದಂತೆ


ಉದಯವಾಹಿನಿ ಚಿತ್ರ

• ಉದಯವಾಹಿನಿ ಬಸವನಬಾಗೇವಾಡಿ

ಮಹಿಳೆಯು ಜೀವನ ನಿರ್ವಹಣೆ ಹಾಗೂ ಸಮಾಜ ನಿರ್ಮಾಣದಲ್ಲಿ ಬಹು ಮುಖ್ಯ ಪಾತ್ರ ವಹಿಸಿದ್ದಾಳೆ. ಈ ನಿಟ್ಟಿನಲ್ಲಿ ಮಹಿಳೆಯರು ರಚನಾತ್ಮಕವಾಗಿ ಬೆಳೆದರೆ ಖಂಡಿತ ಸಮಾಜ ಅಭಿವೃದ್ಧಿಯಾಗಲಿದೆ ಎಂದು ಸಿಪಿಐ ಗುರುಶಾಂತ ದಾಶ್ಯಾಳ ಅಭಿಪ್ರಾಯಪಟ್ಟರು. ಪಟ್ಟಣದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ಹಮ್ಮಿಕೊಂಡಿದ್ದ ತಾಲ್ಲೂಕು ಮಟ್ಟದ ಮಹಿಳಾ ವಿಚಾರಗೋಷ್ಠಿ ಉದ್ಘಾಟಿಸಿ ಅವರು ಮಾತನಾಡಿದರು. ಧರ್ಮಸ್ಥಳ ಸಂಸ್ಥೆಯು ಸ್ವಸಹಾಯ ಸಂಘಗಳ ಮೂಲಕ ಮಹಿಳೆಯರನ್ನು ಆರ್ಥಿಕವಾಗಿ ಸಬಲರನ್ನಾಗಿ ಮಾಡುತ್ತಿದೆ ಎಂದರು. ಜಿಲ್ಲಾ ಜನ ಜಾಗೃತಿ ವೇದಿಕೆ ಅಧ್ಯಕ್ಷ ಸೋಮನಗೌಡ ಪಾಟೀಲ ಮಾತನಾಡಿ, ಪೂಜ್ಯ ವೀರೇಂದ್ರ ಹೆಗ್ಗಡೆಯವರ ಕಾರ್ಯಕ್ರಮಗಳು ಶ್ಲಾಘನೀಯ ಹಾಗೂ ಜನ ಉಪಯೋಗಿ ಕಾರ್ಯಕ್ರಮಗಳನ್ನು ರಾಜ್ಯಕ್ಕೆ ನೀಡುತ್ತಾ ಬರುತ್ತಿರುವುದು ಉತ್ತಮ ಸೇವೆ ಎಂದರು.

ಶಿಕ್ಷಕಿ ಗಿರಿಜಾಪಾಟೀಲ ಮಾತನಾಡಿ, ಇಂದು ಮಹಿಳೆಯರು ಎಲ್ಲಾ ಕ್ಷೇತ್ರದಲ್ಲಿ ಸಾಧನೆ ಮಾಡುವ ಮೂಲಕ ಜಗತ್ತಿಗೆ ಕೊಡುಗೆ ನೀಡಿದ್ದು, ಸಮಾಜ ನಿರ್ಮಾಣಕ್ಕೆ ಸಾಕ್ಷಿಯಾಗಿದ್ದಾಳೆ. ದೇಶದ ಪ್ರಗತಿಯ ಮೇಲು ಇವರ ಪ್ರಭಾವ ಕಾಣುತ್ತದೆ ಎಂದರು.

> ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ತಾಲ್ಲೂಕು ಯೋಜನಾಧಿಕಾರಿ ಪ್ರಸನ್ನ ಮಾತನಾಡಿ, ಸದಸ್ಯರಿಗೆ ಬ್ಯಾಂಕ್ ಆಫ್ ಬರೋಡದಿಂದ ಆರ್ಥಿಕ ಸಹಾಯ ನೀಡಲಾಗುತ್ತಿದೆ. ನಮ್ಮದು ಮೈಕ್ರೋ ಫೈನಾನ್ಸ್ ಕಂಪನಿ ಅಲ್ಲ ಇದೊಂದು ಟ್ರಸ್ಟ್.ನಮ್ಮ ಸಂಸ್ಥೆಯು ಮಹಿಳೆಯರಿಗೆ ಎರಡನೇ ತವರು ಮನೆ ಇದ್ದಂತೆ. ನಮ್ಮ ಸಂಸ್ಥೆಯಿಂದ ಕೆರೆಯ ಅಭಿವೃದ್ಧಿ, ದೇವಸ್ಥಾನ,ಮಾತೃವಾತ್ಸಲ್ಯ, ಪಾಲುದಾರ ಸದಸ್ಯ ಮಕ್ಕಳಿಗೆ ಶಿಷ್ಯವೇತನ ಸೇರಿದಂತೆ ಅನೇಕ ಜನಪಯೋಗಿ ಕಾರ್ಯಗಳನ್ನು ಮಾಡಲಾಗುತ್ತಿದೆ.
>
> -ಸಿಪಿಐ ಗುರುಶಾಂತ ದಾಶ್ಯಾಳ

ವಕೀಲೆ ಭಾರತಿ ಪತ್ತಾರ ಮಹಿಳಾ ಕಾನೂನುಗಳ ಬಗ್ಗೆ ಮಾಹಿತಿಯನ್ನು ನೀಡಿದರು. ಕಾರ್ಯಕ್ರಮದಲ್ಲಿ ಕೃಷಿ ಮೇಲ್ವಿಚಾರಕ ರಾಜು ಬೆಟಗೇರಿ, ಮೇಲ್ವಿಚಾರಕ ಯಲ್ಲಪ್ಪ ಕೊಚ್ಚರಗಿ, ಪ್ರೇಮ ರೋಜಾ,ಸಂಗೀತ, ಶೋಭಾ ಸ್ವರೂಪ,ಸುಮ, ಮಂಜುನಾಥ್, ನಾಗರಾಜ್, ಪ್ರದೀಪ್, ಕಿರಣ್ ಮೌನೇಶ್ ತಾಲ್ಲೂಕಿನ ಸೇವಾ ಪ್ರತಿನಿಧಿಗಳು,ಪಾಲುದಾರು ಸದಸ್ಯರು ಭಾಗವಹಿಸಿದ್ದರು.

## ಸಹಕಾರ ಸಂಸ್ಥೆಯಲ್ಲಿ ಪಾರದರ್ಶಕತೆ ಅಗತ್ಯ ಡಾ.ಪ್ರಭಾ ಮಲ್ಲಿಕಾರ್ಜುನ್ ಅಭಿಮತ

• ಉದಯವಾಹಿನಿ ದಾವಣಗೆರೆ

ಸಹಕಾರ ಸಂಸ್ಥೆಗಳಲ್ಲಿ ನಡೆಯುವ ಆರ್ಥಿಕ ವಹಿವಾಟು ಇನ್ನಷ್ಟು ಪಾರದರ್ಶಕವಾಗಬೇಕು. ಯುವಸಮೂಹ, ರೈತರು ಹಾಗೂ ಮಹಿಳೆಯರ ಆರ್ಥಿಕ ಅಗತ್ಯಗಳಿಗೆ ಸ್ಪಂದಿಸಬೇಕು ಎಂದು ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಸಲಹೆ ನೀಡಿದರು.

ಇಲ್ಲಿನ ಸದ್ಯೋಜಾತ ಮಠದಲ್ಲಿ ಸಹಕಾರ ಇಲಾಖೆ, ರಾಜ್ಯ ಸಹಕಾರ ಮಹಾಮಂಡಳ ಹಾಗೂ ಜಿಲ್ಲಾ ಸಹಕಾರ ಒಕ್ಕೂಟದ ವತಿಯಿಂದ ಶುಕ್ರವಾರ ಏರ್ಪಡಿಸಿದ್ದ 72ನೇ ಸಹಕಾರ ಸಪ್ತಾಹಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ದೇಶದ ಬಹುತೇಕ ಹಳ್ಳಿಗಳಲ್ಲಿ ಸಹಕಾರ ಸಂಸ್ಥೆಗಳಿವೆ. ಈ ವ್ಯವಸ್ಥೆ ರೈತರಿಗೆ ಸೀಮಿತವಾಗದೇ ಮಹಿಳೆಯರು ಮತ್ತು ಯುವ ಸಮೂಹವನ್ನು ಒಳಗೊಳ್ಳಬೇಕು. ತಿಂಗಳಿಗೊಮ್ಮೆ ಸಭೆ ನಡೆಸಿ ತೀರ್ಮಾನಗಳನ್ನು ಕೈಗೊಳ್ಳಬೇಕು. ಸ್ಟಾರ್ಟ್‌ಅಪ್ ಸಹಾಯಹಸ್ತ ಚಾಚಬೇಕು ಎಂದರು. ರಾಜ್ಯದ ಗದಗದಲ್ಲಿ ಸಹಕಾರಿ ವ್ಯವಸ್ಥೆಯ ಬೀಜ ಮೊಳೆಯಿತು. ಈಗ ಇದು ದೇಶದ ಎಲ್ಲೆಡೆ ಹೆಮ್ಮರವಾಗಿ ಬೆಳೆದಿದೆ. ಸಂಸದರ ಪ್ರದೇಶಾಭಿವೃದ್ಧಿ ನಿಧಿಯಡಿ ಸಹಕಾರ ಕ್ಷೇತ್ರಕ್ಕೆ ರೂ. 60 ಲಕ್ಷ ಅನುದಾನ ಹಂಚಿಕೆ ಮಾಡಲಾಗಿದೆ. ಸಹಕಾರ ಭವನದ ಕಟ್ಟಡಕ್ಕೆ ಕೂಡ ಅನುದಾನ ಒದಗಿಸಲಾಗುವುದು ಎಂದು ಆಶ್ವಾಸನೆ ನೀಡಿದರು.


ಉದಯವಾಹಿನಿ ಚಿತ್ರ

ದೇಶದ ಮೊದಲ ಪ್ರಧಾನಿ ಜವಾಹರಲಾಲ್ ನೆಹರೂ ಪಂಚವಾರ್ಷಿಕ ಯೋಜನೆಗಳಲ್ಲಿ ಸಹಕಾರ ಕ್ಷೇತ್ರವನ್ನು ಪ್ರೋತ್ಸಾಹಿಸಿದರು. ಭಾರತದ ಆರ್ಥಿಕ ವ್ಯವಸ್ಥೆಯನ್ನು ಸಹಕಾರ ಕ್ಷೇತ್ರ ಭದ್ರಗೊಳಿಸಿತು. ಸಹಕಾರ ಕ್ಷೇತ್ರ ಎಲ್ಲಾ ರೀತಿಯಲ್ಲಿ ಬೆಳೆದಿದೆ. ಸಂಘದ ಎಲ್ಲಾ ದಾಖಲೆಗಳು ಡಿಜಿಟಲೀಕರಣಗೊಳ್ಳುತ್ತಿವೆ' ಎಂದು ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳದ ನಿರ್ದೇಶಕ ಜೆ.ಆರ್. ಷಣ್ಮುಖಪ್ಪ ಹೇಳಿದರು.

## ಸಂಪೂರ್ಣ ವಿಷ ಜಂತುಗಳ, ಕ್ರಿಮಿ ಕೀಟಗಳ ತಾಣವಾದ ಡಾ.ಬಿಆರ್ ಅಂಬೇಡ್ಕರ್ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯ

• ಉದಯವಾಹಿನಿ ಕಾರಟಗಿ

ಪಟ್ಟಣದ 12ನೇ ವಾರ್ಡಿನಲ್ಲಿರುವ ಬಿ ಆರ್ ಅಂಬೇಡ್ಕರ್ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯದ ವಿದ್ಯಾರ್ಥಿಗಳು ಹಾಸ್ಟೆಲ್ ಆವರಣದಲ್ಲಿ ನಿಂತ ನೀರಿನಿಂದ ಬೇಸತ್ತು ಹೋಗಿದ್ದಾರೆ.

ವಿದ್ಯಾರ್ಥಿಗಳಿಗೆ ಆಟ ಆಡಲು ಮೈದಾನದಲ್ಲಿ ನೀರು ನಿಂತಿರುವುದರಿಂದ ವಿದ್ಯಾರ್ಥಿಗಳಿಗೆ ಆಟ ಆಡಲು ಆಗುತ್ತಿಲ್ಲ.ಹಾಸ್ಟೆಲ್‌ನ ಆವರಣದಲ್ಲಿ ಸುಮಾರು ಮೂರರಿಂದ ನಾಲ್ಕು ಅಡಿ ನೀರು ನಿಂತು ನೀರಿನ ಮೇಲೆ ಪಾಚಿ ಕಟ್ಟಿ ಸೊಳ್ಳೆಗಳು ಉತ್ಪತ್ತಿಯಾಗುತ್ತಿವೆ. ಇದರಿಂದಾಗಿ ಸಂಜೆ ಆದರೆ ಸಾಕು ಹಾಸ್ಟಲ್ ಆವರಣ ಸಂಪೂರ್ಣ ಸೊಳ್ಳೆ ಮಯವಾಗುತ್ತಿದೆ, ಸ್ವಚ್ಛತಾ ಕಾರ್ಯಕ್ಕಾಗಿ ವಿದ್ಯಾರ್ಥಿಗಳು ಬಹಳ ನಿರೀಕ್ಷೆಯಲ್ಲಿದ್ದಾರೆ.

**ಮಕ್ಕಳ ಆರೋಗ್ಯ ಕಡೆ ಗಮನಹರಿಸದ ಅಧಿಕಾರಿಗಳು**

ಅಷ್ಟೇ ಅಲ್ಲದೆ ಹಾಸ್ಟೆಲ್ ಹಿಂಭಾಗದಲ್ಲಿ ಹಾಸ್ಟೆಲ್‌ನ ಸುತ್ತಮುತ್ತಲು ಮುಳ್ಳು ಪೊದೆಗಳಿಂದ ತುಂಬಿದ್ದು. ಸಂಜೆ ಆದರೆ ವಿದ್ಯಾರ್ಥಿಗಳು ಭಯದ ವಾತಾವರಣದಲ್ಲಿದ್ದಾರೆ. ಪುರಸಭೆ ಅಧಿಕಾರಿಗಳು ಸ್ವಚ್ಛತಾ ಕಾರ್ಯ ಮತ್ತು ನೈರ್ಮಲ್ಯದ ಬಗ್ಗೆ ಸಂಪೂರ್ಣ ವಿಫಲರಾಗಿದ್ದಾರೆ, ಎಂದು ನಮ್ಮ ನಾಡು ರಕ್ಷಣಾ ವೇದಿಕೆಯ ರಾಜ್ಯ ಯುವಘಟಕ ರಾಜ್ಯಾಧ್ಯಕ್ಷರಾದ ಶರಣಪ್ಪ ಸಂಗಟಿ ಆಗ್ರಹ ವ್ಯಕ್ತಪಡಿಸಿದ್ದಾರೆ. ಈ ಕುರಿತು ಮಾತನಾಡಿದ ಅವರು ಬಿ ಆರ್ ಅಂಬೇಡ್ಕರ್ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯದ ಆವರಣದಲ್ಲಿ ಮಳೆ ನೀರು ನಿಂತಿದ್ದು ನೀರಿನಿಂದ ವಿದ್ಯಾರ್ಥಿಗಳಿಗೆ ಅಸೌಕರ್ಯ ಉಂಟಾಗಿದೆ, ಮತ್ತು ಸೊಳ್ಳೆಗಳ ಭಯವು ಕಾಡುತ್ತಿದೆ. ಈ ಬಗ್ಗೆ ನಾನು ಹಲವು ಬಾರಿ ಪುರಸಭೆಯ ಅಧಿಕಾರಿಗಳಿಗೆ ಮೌಖಿಕವಾಗಿ ತಿಳಿಸಿರುತ್ತೇನೆ. ಆದರೂ ಅಧಿಕಾರಿಗಳು ಸ್ವಚ್ಛತಾ ಕಾರ್ಯ ಮಾಡುವಲ್ಲಿ ನಿರ್ಲಕ್ಷ್ಯ ತೋರುತ್ತಿರುವುದು ಖಂಡನೀಯ.




ಉದಯವಾಹಿನಿ ಚಿತ್ರ

**ಸೊಳ್ಳೆಗಳಿಂದ ಮಾರಕ ರೋಗಕ್ಕೆ ತುತ್ತಾಗುವ ಭಯದಲ್ಲಿರುವ ಹಾಸ್ಟೆಲ್ ವಿದ್ಯಾರ್ಥಿಗಳು**

ಹಾಸ್ಟೆಲ್ ಹಿಂಭಾಗದಲ್ಲಿಯೂ ಕೊಳಚೆ ನೀರು ಸಂಗ್ರಹವಾಗಿದ್ದು. ಇದರಿಂದಾಗಿ ದುರ್ವಾಸನೆ ಮತ್ತು ಕ್ರಿಮಿ ಕೀಟಗಳು ವಿಷ ಜಂತುಗಳ ತಾಣವಾಗಿದೆ, ಸುಮಾರು ತಿಂಗಳುಗಳಿಂದ ನಿಂತ ನೀರು ಪಾಚುಗಟ್ಟಿ ಸೊಳ್ಳೆಗಳ ಉತ್ಪತ್ತಿಗೆ ಕಾರಣವಾಗಿ ಡೆಂಗ್ಯೂ, ಮಲೇರಿಯಾದಂತಹ ಮಾರಕ ರೋಗಗಳಿಗೆ ತುತ್ತಾಗುವ ಭಯದಲ್ಲಿದ್ದಾರೆ .

**ಕಾರ್ಯ ವೈಖರಿ ಸರಿ ಇಲ್ಲ**

ಈ ಬಗ್ಗೆ ಪುರಸಭೆ ಮುಖ್ಯ ಅಧಿಕಾರಿಗಳಿಗೆ ಹಲವು ಬಾರಿ ದೂರವಾಣಿ ಕರೆ ಮಾಡಿದರೆ ಕರೆಯನ್ನು ಸ್ವೀಕರಿಸುವುದೇ ಇಲ್ಲ.ಇವರ ಕಾರ್ಯ ವೈಖರಿ ಸರಿ ಇಲ್ಲ .ಕೂಡಲೇ ಪುರಸಭೆ ಅಧಿಕಾರಿಗಳು ಇಲ್ಲಿ ಸ್ವಚ್ಛತಾ ಕಾರ್ಯಕ್ಕೆಮುಂದಾಗಬೇಕು.ಒಂದುವೇಳೆ ಸ್ವಚ್ಛತಾ ಕಾರ್ಯಕ್ಕೆ ಮುಂದಾಗದಿದ್ದರೆ ನಮ್ಮ ಸಂಘಟನೆಯಿಂದ ಹೋರಾಟ ಮಾಡುತ್ತೇವೆ ಎಂದು ಎಚ್ಚರಿಕೆ ನೀಡಿದ್ದಾರೆ,

## ಮಕ್ಕಳ ದಿನಾಚರಣೆ, ಪಾಲಕರ ಶಿಕ್ಷಕರ ಮಹಾಸಭೆ ಕಾರ್ಯಕ್ರಮ

• ಉದಯವಾಹಿನಿ,ಚಿಂಚೋಳಿ

ತಂತ್ರಜ್ಞಾನ ಯುಗದಲ್ಲಿ ವಿದ್ಯಾರ್ಥಿಗಳು ಅತಿಯಾದ ಮೊಬೈಲ್ ಬಳಕೆ ಮಾಡುತ್ತಿರುವುದರಿಂದ ಶಿಕ್ಷಣ ಕಲಿಕೆಯ ಗುಣಮಟ್ಟ ಕುಸಿಯುತ್ತಿದ್ದು ಪೋಷಕರು ಮಕ್ಕಳ ಶಿಕ್ಷಣದ ಕಡೆ ಹೆಚ್ಚಿನ ಗಮನಹರಿಸಬೇಕು ಎಂದು ತಾಪಂ.ಇಓ ಸಂತೋಷ ಚವ್ಹಾಣ ಹೇಳಿದರು.

ನಗರದ ಚಂದಾಪೂರದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಕ್ಕಳ ದಿನಾಚರಣೆ ಅಂಗವಾಗಿ ಹಮ್ಮಿಕೊಂಡ ಪಾಲಕರ ಶಿಕ್ಷಕರ ಮಹಾಸಭೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು,ಸರ್ಕಾರದ ಆದೇಶದಂತೆ ಸರ್ಕಾರಿ ಶಾಲೆಯ ಶಿಕ್ಷಣದ ಗುಣಮಟ್ಟವನ್ನು ಹೆಚ್ಚಿಸಲು ಪಾಲಕರ ಶಿಕ್ಷಕರ ಮಹಾಸಭೆಯನ್ನು ಹಮ್ಮಿಕೊಂಡಿದ್ದು ಇದರ ಪ್ರಯೋಜನವನ್ನು ಪೋಷಕರು ಹಾಗೂ ಮಕ್ಕಳು ಸದುಪಯೋಗ ಪಡಿಸಿಕೊಂಡು ಶಿಕ್ಷಣದಲ್ಲಿ ಆಗುತ್ತಿರುವಂತಹ ಸಮಸ್ಯೆಗಳನ್ನು ನಿವಾರಿಸಿಕೊಳ್ಳಬೇಕು.

ಸಮಾಜ ಸೇವಕ ಗೌತಮ ಬೊಮ್ಮನಳ್ಳಿ ಮಾತನಾಡಿ ಕನ್ನಡ ಶಾಲೆಗಳ ಶಿಕ್ಷಣದ ಗುಣಮಟ್ಟವನ್ನು ಹೆಚ್ಚಿಸಲು ಸರ್ಕಾರ ಈ ಮಹತ್ವವಾದ ಯೋಜನೆ ಜಾರಿ ಮಾಡಿದ್ದು ಮಕ್ಕಳ ಶಿಕ್ಷಣದ ಗುಣಮಟ್ಟ ಬೆಳೆಯಬೇಕಾದರೆ ಶಿಕ್ಷಕರು ನಿಷ್ಠೆಯಿಂದ ಉತ್ತಮ ಶಿಕ್ಷಣ ನೀಡಡೇಕು,ಮತ್ತು ಪಾಲಕ ಪೋಷಕರು ಮಕ್ಕಳ ಕಲಿಕೆಯನ್ನು ದಿನಾಲು ಮನೆಯಲ್ಲಿ ಒಮ್ಮೆ ನೋಡಬೇಕು,ಶಾಲೆಯ ಮೂಲಭೂತ ಸೌಕರ್ಯಗಳು,ಸೇರಿದಂತೆ ಇನ್ನಿತರ ಸೌಲಭ್ಯ ಸಹಾಯ ಬೇಕಾದರೆ ಪೋಷಕರು ಹಾಗೂ ಸಮಾಜದ ಸುಧಾರಕರು,ರಾಜಕೀಯ ಮುಖಂಡರ ಗಮನಕ್ಕೆ ತಂದರೆ ಆದಷ್ಟು ಶೀಘ್ರ ಸಮಸ್ಯೆಗಳು ಪರಿಹರಿಸಬಹುದು ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ವಿ.ಲಕ್ಷ್ಮಯ್ಯ,ಬಿಸಿಯೂಟ ಸಹಾಯಕ ನಿರ್ದೇಶಕ ಜಯಪ್ಪ ಚಾಪಲ್,ಶಾಲೆಯ ಸಿಆರ್.ಪಿ ಮೀನಾಕ್ಷಿ ಮಾತನಾಡಿದರು. ಈ ಸಂದರ್ಭದಲ್ಲಿ ಟಿಹೆಚ್‌ಓ ಡಾ.ಮಹ್ಮುದ್ ಗಫಾರ್, ಅಗ್ನಿಶಾಮಕ ಠಾಣಾಧಿಕಾರಿ ಎಸ್.ಕೆ.ಹಸನ್, ಸರ್ಕಾರಿ ಪ್ರಾಥಮಿಕ ಶಿಕ್ಷಕರ ಸಂಘದ ಅಧ್ಯಕ್ಷ ಸುರೇಶ ಕೊರವಿ,ಶಾಲೆಯ ಮುಖ್ಯಗುರು ಗೋಪಾಲ ಯಂಪಳ್ಳಿ, ಕೆಎಂಬಾರಿ,ಹಣಮಂತ ಪೂಜಾರಿ,ಚೇತನ್ ನಿರಾಳಕರ,ವಿಠ್ಠಲ ಕುಸಾಳೆ, ಭಾಗ್ಯವಂತ ಶಾರದ್, ಉಲ್ಲಾಸಕುಮಾರ ಕೆರೊಳ್ಳಿ, ವಿಜಯಕುಮಾರ ಶಾಬಾದಿ, ಪ್ರಶಾಂತರೆಡ್ಡಿ ಇದ್ದರು.




ಉದಯವಾಹಿನಿ ಚಿತ್ರ

**ಶಾಲೆಯಲ್ಲಿ ವಿವಿಧ ಸ್ಪರ್ಧೆಗಳ ಆಯೋಜನೆ**

ಮಕ್ಕಳ ದಿನಾಚರಣೆ ಅಂಗವಾಗಿ ಶಾಲೆಯಲ್ಲಿ ವಿವಿಧ ಸ್ಪರ್ಧೆಗಳನ್ನು ಏರ್ಪಡಿಸಲಾಗಿತ್ತು,ಶಿಕ್ಷಣ ಪ್ರೇಮಿ ಸಮಾಜ ಸೇವಕ ಅನೀಲಕುಮಾರ ಬಿರಾದಾರ ಅಣವಾರ ಅವರ ಹುಟ್ಟು ಹಬ್ಬದ ಪ್ರಯುಕ್ತ ಸ್ಪರ್ಧೆಗಳಲ್ಲಿ ವಿಜೇತರಾದ ಶಾಲಾಮಕ್ಕಳಿಗೆ ವೈಯಕ್ತಿಕವಾಗಿ ಎಕ್ಸಾಂ ಪ್ಯಾಡ್, ನೋಟ್ ಬುಕ್, ಪೇನ್ ಹಾಗೂ ಪುರಸಭೆ ಪೌರಕಾರ್ಮಿಕರಿಗೆ ಸೀರೆ, ಟೀಶರ್ಟ್ ಅಡುಗೆ ಸಿಬ್ಬಂದಿ ವರ್ಗದವರಿಗೆ ಸೀರೆಗಳನ್ನು ವಿತರಿಸಿದರು.

# ಮಕ್ಕಳು ಬುದ್ಧಿವಂತಿಕೆ ಮೈಗೂಡಿಸಿಕೊಳ್ಳಲಿ: ಜಿಲ್ಲಾಧಿಕಾರಿ

## ಸರ್ಕಾರಿ ಶಾಲೆಗಳಲ್ಲಿ ಓದಿದವರು ವೈವಿಧ್ಯ ಯೋಚನಾಶಕ್ತಿ ಹೊಂದಿದವರಾಗಿರುತ್ತಾರೆ

• ಉದಯವಾಹಿನಿ ಗದಗ

ಸರ್ಕಾರಿ ಶಾಲೆಗಳಲ್ಲಿ ಓದಿದವರು ವೈವಿಧ್ಯ ಯೋಚನಾಶಕ್ತಿ ಹೊಂದಿದವರಾಗಿರುತ್ತಾರೆ. ಆ ಪ್ರವೃತ್ತಿ ಜೀವನದಲ್ಲಿ ಅವರನ್ನು ಬಲಿಷ್ಠವಾಗಿ ನಿಲ್ಲುವ ಹಾಗೂ ದೃಢನಿರ್ಧಾರ ತೆಗೆದುಗೊಳ್ಳುವ ಶಕ್ತಿ ಮೈಗೂಡಿಸುತ್ತದೆ. ವಿದ್ಯೆ ಮಕ್ಕಳಿಗೆ ಪುಸ್ತಕದ ಜ್ಞಾನ ನೀಡಿದರೆ ಬುದ್ಧಿವಂತಿಕೆ ಜೀವನದಲ್ಲಿ ಎಡವದಂತೆ ಮುನ್ನಡೆಸುತ್ತದೆ. ಹಾಗಾಗಿ, ಮಕ್ಕಳು ವಿದ್ಯಾವಂತರಾಗುವುದರ ಜತೆಗೆ ಬುದ್ಧಿವಂತರೂ ಆಗಬೇಕು' ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹೇಳಿದರು.

**ಮಕ್ಕಳ ದಿನಾಚರಣೆ ಹಾಗೂ ಪೋಷಕ-ಶಿಕ್ಷಕರ ಮಹಾಸಭೆ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಶಾಲಾ ಶಿಕ್ಷಣ ಇಲಾಖೆ, ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಕ್ಷೇತ್ರ ಸಮನ್ವಯಾಧಿಕಾರಿಗಳ ಕಾರ್ಯಾಲಯ ಶಹರ ವಲಯದ ಸಹಯೋಗದಲ್ಲಿ ಸಿದ್ಧಲಿಂಗ ನಗರದ ಸರ್ಕಾರಿ ಪ್ರೌಢಶಾಲೆಯಲ್ಲಿ ನಡೆದ ಮಕ್ಕಳ ದಿನಾಚರಣೆ ಹಾಗೂ ಪೋಷಕ- ಶಿಕ್ಷಕರ ಮಹಾಸಭೆ ಉದ್ಘಾಟಿಸಿ ಮಾತನಾಡಿದರು. ಶಿಕ್ಷಕ ಮಕ್ಕಳನ್ನು ತಿದ್ದುವ ಮಾಂತ್ರಿಕನಿದ್ದಂತೆ. ಶಾಲೆಗಳಲ್ಲಿ ನಾಳೆಯನ್ನು ಕಾಣುವವರು ನಾವುಗಳಾದರೆ; ಮಕ್ಕಳ ಭವಿಷ್ಯ ರೂಪಿಸುವ ಗುರುತರ ಜವಾಬ್ದಾರಿ ಶಿಕ್ಷಕರ ಮೇಲಿದೆ' ಎಂದರು. ಕ್ರೀಡಾ ಕ್ಷೇತ್ರದಲ್ಲಿ ಸಾಧನೆ ಹಾಗೂ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ತಾರೆ ಜಮೀನ್ ಪರ್ ಸಂಸ್ಥೆಯಿಂದ ವಿದ್ಯಾರ್ಥಿಗಳಿಗೆ ವಿಜ್ಞಾನ ಕಿಟ್ ವಿತರಿಸಲಾಯಿತು. ಶಾಲಾ ಶಿಕ್ಷಕರು, ವಿದ್ಯಾರ್ಥಿಗಳು, ಪೋಷಕರು ಹಾಜರಿದ್ದರು.

> ಮಕ್ಕಳ ಹಕ್ಕುಗಳು ವಿವಿಧ ಕಾಯ್ದೆಗಳ ಬಗ್ಗೆ ಪೋಷಕರಿಗೆ ಅರಿವು ಮೂಡಿಸುವುದು ಆರ್‌ಟಿಐ ಪೊಸ್ಕೋ ಮಕ್ಕಳ ರಕ್ಷಣಾ ನೀತಿ ಬಾಲ್ಯ ವಿವಾಹ ನಿಷೇಧ ಬಾಲ ಕಾರ್ಮಿಕ ಪದ್ಧತಿ ಕುರಿತು ತಿಳಿಸಿಕೊಡುವ ಸಂಗಮವೇ ಈ ಮಹಾಸಭೆ.
>
> -ಆರ್.ಎಸ್.ಬುರುಡಿ ಡಿಡಿಪಿಐ


ಉದಯವಾಹಿನಿ ಚಿತ್ರ

**ಮಕ್ಕಳ ಕನಸುಗಳಿಗೆ ಗೌರವ ನೀಡುವ ದಿನ**

ಮಕ್ಕಳ ಹಕ್ಕುಗಳಿಗೆ ಹಾಗೂ ಅವರ ಕನಸುಗಳಿಗೆ ಗೌರವ ನೀಡುವ ದಿನ ಇದಾಗಿದೆ. ಈ ವಿಶೇಷ ದಿನವನ್ನು ಭಾರತದ ಪ್ರಥಮ ಪ್ರಧಾನಿ ನೆಹರೂ ಅವರ ಜನ್ಮದಿನಾಚರಣೆ ಅಂಗವಾಗಿ ಆಚರಿಸುತ್ತೇವೆ' ಎಂದು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಆರ್.ಎಸ್.ಬುರುಡಿ ಹೇಳಿದರು. ನೆಹರೂ ಮಕ್ಕಳನ್ನು ಮನಸಾರೆ ಪ್ರೀತಿಸುತ್ತಿದ್ದರು. ಮಕ್ಕಳ ಖುಷಿಯಲ್ಲಿ ರಾಷ್ಟ್ರದ ಭವಿಷ್ಯ ಅಡಗಿದೆ ಎಂದು ಪದೇಪದೇ ಹೇಳುತ್ತಿದ್ದರು' ಎಂದರು. ಮಕ್ಕಳ ದಿನಾಚರಣೆ ಅಂಗವಾಗಿ ಪಾಲಕ ಶಿಕ್ಷಕರ ಮಹಾಸಭೆಯನ್ನು ಈ ವರ್ಷ ಎಲ್ಲಾ ಶಾಲೆಗಳಲ್ಲಿ ನಡೆಸಲಾಗುತ್ತಿದೆ. ವಿದ್ಯಾರ್ಥಿಗಳ ವಿದ್ಯಾಭ್ಯಾಸದ ಪ್ರಗತಿಯನ್ನು ಪೋಷಕರಿಗೆ ತಿಳಿಸುವುದು ಇದರ ಮುಖ್ಯ ಉದ್ದೇಶ. ಶೈಕ್ಷಣಿಕವಾಗಿ ಉತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಅಭಿನಂದಿಸಲಾಗುವುದು' ಎಂದರು.

## ರಾಜ್ಯಮಟ್ಟದ ಶ್ರೇಷ್ಠ ನಾಗರಿಕ ಸೇವಾ ಪ್ರಶಸ್ತಿ ಕಾರ್ಯಕ್ರಮ

• ಉದಯವಾಹಿನಿ, ಚಿಂಚೋಳಿ

ಬೆಂಗಳೂರಿನ ಕಲಾಗ್ರಾಮ ಎನ್.ಜಿ.ಇ.ಎಫ್. ಲೇಔಟ್ ಜ್ಞಾನಭಾರತಿ,ಫಂಕ್ಷನ್ ಹಾಲ್‌ನಲ್ಲಿ ಕರ್ನಾಟಕ ಸಂಸ್ಕೃತಿಕ ಅಕಾಡೆಮಿ ವತಿಯಿಂದ ರಾಜ್ಯಮಟ್ಟದ ಶ್ರೇಷ್ಠ ನಾಗರಿಕ ಸೇವಾ ಪ್ರಶಸ್ತಿ ಕಾರ್ಯಕ್ರಮದಲ್ಲಿ ಚಿಂಚೋಳಿ ತಾಲ್ಲೂಕಿನ ಚಿಮ್ಮಇದಲಾಯಿ ಗ್ರಾಮದ ಶಿವಯೋಗಿ ರುಸ್ತಂಪೂರ,ಅವರಿಗೆ ಸಮಾಜ ಸೇವಕ ಎಂದು ಗುರುತಿಸಿ ಬೆಂಗಳೂರು ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಕಾರ್ಯದರ್ಶಿಗಳಾದ ಶ್ರೀ ಶ್ರೀ ಸೋಮನಾಥ್ ಸ್ವಾಮೀಜಿಗಳು,ಅವರು ಕರ್ನಾಟಕ ರಾಜ ಮಟ್ಟದ ಕರುನಾಡ ರತ್ನ ಪ್ರಶಸ್ತಿ ನೀಡಿದರು ಕಾರ್ಯಕ್ರಮದಲ್ಲಿ ಕರ್ನಾಟಕದ ಮಾಜಿ ಮುಖ್ಯಮಂತ್ರಿಗಳಾದ ಡಿವಿ ಸದಾನಂದ ಗೌಡ, ಕರ್ನಾಟಕ ಸಂಸ್ಕೃತಿ ಅಕಾಡೆಮಿಯ ಅಧ್ಯಕ್ಷರಾದ ರಮೇಶ್ ಎಸ್.ಜಿ.ಕನ್ನಡ ಸಾಹಿತ್ಯ ಪರಿಷತ್ ನಿಕಟ ಪೂರ್ವ ರಾಜ್ಯಾಧ್ಯಕ್ಷರಾದ ನಾಡೋಜ ಡಾ.ಮನು ಬಳಿಗಾರ, ಬೆಂಗಳೂರಿನ ಮಹಾಲಕ್ಷ್ಮಿ ಲೇಔಟ್ ಮಾಜಿ ಶಾಸಕರಾದ ನರೇಂದ್ರಬಾಬು, ಇದ್ದರು.


ಉದಯವಾಹಿನಿ ಚಿತ್ರ

## ಸರ್ಕಾರಿ ಶಾಲೆಯಲ್ಲಿ ಕೇಕ್ ಕತ್ತರಿಸಿ ಮಕ್ಕಳ ದಿನಾಚರಣೆ


• ಉದಯವಾಹಿನಿ,ಚಿಂಚೋಳಿ

ತಾಲ್ಲೂಕಿನ ಕೊರಡಂಪಳ್ಳಿಯ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಕ್ಕಳ ದಿನಾಚರಣೆ ಅಂಗವಾಗಿ ಕೇಕ್ ಕತ್ತರಿಸುವ ಮೂಲಕ ಅದ್ದೂರಿಯಾಗಿ ಆಚರಿಸಲಾಯಿತು. ಶಾಲೆಯ ಎಲ್ಲಾ ಮಕ್ಕಳಿಗೆ ನೋವೇಲ್ ಹೋಪ್ ಪೌಂಡೇಶನ್ ವತಿಯಿಂದ ಸುನಂದಾ ವಿಜಯಕುಮಾರ ಅವರು 176 ಸ್ಕೂಲ್ ಬ್ಯಾಗ್ ವಿತರಿಸಲಾಯಿತು.

ಈ ಸಂದರ್ಭದಲ್ಲಿ ನಿಡಗುಂದಾದ ಸಿ.ಆರ್.ಪಿ ನೀಸಾರ್ ಅಹೇಮದ್,ಎಸ್ಡಿಎಂಸಿ ಅಧ್ಯಕ್ಷ ಶ್ರೀಮಂತ ಮೇತ್ರಿ,,ಮಾಜಿ ಅಧ್ಯಕ್ಷ ಬಾಬುರಾವ,ತಿಪ್ಪಾಮೋಹನ ರಾಜ,ಸದಸ್ಯ ಮಾಣಿಕಪ್ಪ,ವಿಠಲ್ ತಳವಾರ,ಶರಣಪ್ಪ ಕುಂಬಾರ,ದೈಹಿಕ ಶಿಕ್ಷಕ ರವಿ ಪೂಜಾರಿ,ಉಮೇಶ ಕುಂಬಾರ,ಮಹಾನಂದಾ,ಸಭೆಯ ಅಧ್ಯಕ್ಷರಾಗಿ ಶ್ರೀಶೈಲ ಎಂ.ನಾಗಾವಿ ಸಿಬ್ಬಂದಿ ವರ್ಗದವರು ಮುದ್ದು ಮಕ್ಕಳು ಇದ್ದರು.


ಉದಯವಾಹಿನಿ ಚಿತ್ರ

## ರಾಜಮೌಳಿ-ಮಹೇಶ್ ಬಾಬು
# ಸಿನಿಮಾ ಬಿಡುಗಡೆಗೆ ದಿನಾಂಕ ನಿಗದಿ



**ಎಷ್ಟು ವರ್ಷ ಕಾಯಬೇಕು**

ಎಸ್‌ಎಸ್ ರಾಜಮೌಳಿ ಸಾಮಾನ್ಯವಾಗಿ ಸಿನಿಮಾ ನಿರ್ಮಿಸಿ ಬಿಡುಗಡೆ ಮಾಡಲು ಬಹಳ ಸಮಯ ತೆಗೆದುಕೊಳ್ಳುತ್ತಾರೆ. ಪ್ರತಿ ಸಿನಿಮಾಕ್ಕೆ ಕನಿಷ್ಟ ಎರಡು ವರ್ಷವಾದರೂ ಸಮಯ ತೆಗೆದುಕೊಳ್ಳುತ್ತಾರೆ. ಇದೀಗ ಮಹೇಶ್ ಬಾಬು ಜೊತೆಗೆ ಮಾಡುತ್ತಿರುವ ಸಿನಿಮಾಕ್ಕೆ ಅದಕ್ಕೂ ಹೆಚ್ಚಿನ ಸಮಯವನ್ನು ರಾಜಮೌಳಿ ತೆಗೆದುಕೊಳ್ಳಲಿದ್ದಾರೆ. ರಾಜಮೌಳಿ-ಮಹೇಶ್ ಬಾಬು ಅವರ ಸಿನಿಮಾದ ಬಿಡುಗಡೆ ದಿನಾಂಕ ಇದೀಗ ನಿಗದಿ ಆಗಿದೆ. ರಾಜಮೌಳಿ ನಿರ್ದೇಶಿಸುತ್ತಿರುವ ಹೊಸ ಸಿನಿಮಾಕ್ಕೆ ತಾತ್ಕಾಲಿಕವಾಗಿ 'ಗ್ಲೋಬ್ ಟ್ರೋಟರ್' ಎಂದು ಹೆಸರಿಡಲಾಗಿದೆ.

ಈ ಸಿನಿಮಾದ ಹೆಸರು ಸಂಜೆ ನಡೆಯಲಿರುವ ಕಾರ್ಯಕ್ರಮದಲ್ಲಿ ಬಹಿರಂಗಗೊಳ್ಳಲಿದೆ. ಮಾತ್ರವಲ್ಲದೆ, ಸಿನಿಮಾದ ಮೊದಲ ಟೀಸರ್ ಸಹ ಇಂದೇ ಬಿಡುಗಡೆ ಆಗಲಿದೆ. ಇವುಗಳ ಜೊತೆಗೆ ಸಿನಿಮಾ ಬಿಡುಗಡೆ ದಿನಾಂಕವನ್ನೂ ಸಹ ರಾಜಮೌಳಿ ಘೋಷಣೆ ಮಾಡಲಿದ್ದಾರೆ. ಆದರೆ ಅವರು ಘೋಷಣೆ ಮಾಡುವ ಮುನ್ನವೇ ಕೆಲ ಮೂಲಗಳಿಂದ ಸಿನಿಮಾದ ಬಿಡುಗಡೆ ದಿನಾಂಕ ಲೀಕ್ ಆಗಿದೆ. ಸಿನಿಮಾ ಪ್ರೇಮಿಗಳಿಗೆ ತಿಳಿದಿರುವಂತೆ ರಾಜಮೌಳಿ ಸಿನಿಮಾ ನಿರ್ಮಿಸಲು ಹೆಚ್ಚು ಸಮಯ ತೆಗೆದುಕೊಳ್ಳುತ್ತಾರೆ. ಬಿಡುಗಡೆಗೂ ಸಹ. 'ಆರ್‌ಆರ್‌ಆರ್' ಸಿನಿಮಾವನ್ನು 2017ರಲ್ಲಿ ಘೋಷಣೆ ಮಾಡಿದರು. ಆದರೆ ಆ ಸಿನಿಮಾ ಬಿಡುಗಡೆ ಆಗಿದ್ದು 2022ರಲ್ಲಿ. 'ಬಾಹುಬಲಿ' ಸಿನಿಮಾಗಳಿಗೂ ಸಹ ಪ್ರತಿ ಸಿನಿಮಾಕ್ಕೂ ಎರಡು ವರ್ಷಕ್ಕೂ ಹೆಚ್ಚು ಸಮಯ ತೆಗೆದುಕೊಂಡರು. ಈಗ 'ಗ್ಲೋಬ್ ಟ್ರೋಟರ್' ಸಿನಿಮಾವನ್ನು ತಮ್ಮ ಈ ಹಿಂದಿನ ಸಿನಿಮಾಗಳಿಂತಲೂ ಹೆಚ್ಚು ಅದ್ಧೂರಿಯಾಗಿಯೂ, ಹೆಚ್ಚು ಜತನದಿಂದಲೂ ಕಟ್ಟುತ್ತಿದ್ದಾರೆ. ಹಾಗಾಗಿ ತಮ್ಮ ಈ ಹಿಂದಿನ ಸಿನಿಮಾಗಳಿಗಿಂತಲೂ ಹೆಚ್ಚಿನ ಸಮಯವನ್ನು ಈ ಸಿನಿಮಾ ತೆಗೆದುಕೊಳ್ಳಲಿದೆ. 'ಗ್ಲೋಬ್ ಟ್ರೋಟರ್' ಸಿನಿಮಾದ ಶೂಟಿಂಗ್ ಪ್ರಾರಂಭವಾಗಿ ಈಗಾಗಲೇ ಒಂದು ವರ್ಷ ಆಗುತ್ತಾ ಬಂದಿದೆ. ಇದೇ ವರ್ಷದ ಜನವರಿ ತಿಂಗಳಲ್ಲಿ ಸಿನಿಮಾದ ಮುಹೂರ್ತ ನಡೆದಿತ್ತು.

ಮುಹೂರ್ತಕ್ಕೆ ಮುಂಚೆಯೇ ಹಲವಾರು ತಿಂಗಳುಗಳ ಕಾಲ ಸಿನಿಮಾದ ಪೋಸ್ಟ್ ಪ್ರೊಡಕ್ಷನ್ ಕಾರ್ಯ ನಡೆದಿತ್ತು. ಇಂದು ಸಿನಿಮಾದ ಮೊದಲ ಟೀಸರ್ ಬಿಡುಗಡೆ ಆಗಲಿದೆ.

ಅಂದಹಾಗೆ ಈ ಸಿನಿಮಾ ಬಿಡುಗಡೆ ಆಗಲು ಇನ್ನೂ ಒಂದು ವರ್ಷಕ್ಕೂ ಹೆಚ್ಚು ಸಮಯ ಹಿಡಿಯಲಿದೆ. 2027ರ ಮಾರ್ಚ್ 25ರಂದು 'ಗ್ಲೋಬ್ ಟ್ರೋಟರ್' ಸಿನಿಮಾ ತೆರೆಗೆ ಬರಲಿದೆ. ಸಿನಿಮಾದ ಅರ್ಧಕ್ಕೂ ಹೆಚ್ಚು ಭಾಗಗಳ ಚಿತ್ರೀಕರಣ ಈಗಾಗಲೇ ಪೂರ್ಣವಾಗಿದೆಯಂತೆ. ಹೈದರಾಬಾದ್, ರಾಜಸ್ಥಾನ, ಕೀನ್ಯಾ, ನೈರೋಬಿ ಇನ್ನೂ ಕೆಲವೆಡೆ ಸಿನಿಮಾದ ಚಿತ್ರೀಕರಣವನ್ನು ಮಾಡಲಾಗಿದೆ.

# ಮಗಳ ಫೀಸು ಕಟ್ಟಿಲ್ಲ ಕರಿಶ್ಮಾ ಇದೆಂಥಾ ಸ್ಥಿತಿ ಬಂತು



**ಹೈಕೋರ್ಟ್‌ನಲ್ಲಿ ಪ್ರಕರಣದ ವಿಚಾರಣೆ**

ಕಪೂರ್ ಕುಟುಂಬ ಭಾರತದ ಅತಿದೊಡ್ಡ ಸಿನಿಮಾ ಕುಟುಂಬ. ಈ ಕುಟುಂಬದ ಐದನೇ ತಲೆಮಾರಿನವರು ಚಿತ್ರರಂಗ ಪ್ರವೇಶಿಸಲು ಸಜ್ಜಾಗಿದ್ದಾರೆ. ನಾಲ್ಕನೇ ತಲೆಮಾರಿನ ರಣ್‌ಬೀರ್ ಕಪೂರ್, ಕರೀನಾ ಕಪೂರ್ ಇನ್ನೂ ಕೆಲವರು ಸ್ಟಾರ್ ನಟ-ನಟಿಯರಾಗಿ ಬಾಲಿವುಡ್‌ನಲ್ಲಿ ಮಿಂಚುತ್ತಿದ್ದಾರೆ. ಈ ಕುಟುಂಬ ಭಾರತೀಯ ಚಿತ್ರರಂಗಕ್ಕೆ ಹಲವಾರು ಸ್ಟಾರ್ ನಟ, ನಟಿಯರನ್ನು ನೀಡಿದೆ. ಅದರಲ್ಲಿ ಕರಿಶ್ಮಾ ಕಪೂರ್ ಸಹ ಒಬ್ಬರು. 90-2000 ದಶಕದಲ್ಲಿ ಬಾಲಿವುಡ್ ಅನ್ನೇ ಆಳಿದ ನಟಿ ಅವರು. ಆದರೆ ಈಗ ಅವರಿಗೆ ಮಗಳ ಶಾಲೆಯ ಶುಲ್ಕ ಕಟ್ಟಲು ಸಹ ಹಣವಿಲ್ಲವಂತೆ.

ಕಪೂರ್ ಕುಟುಂಬ ಭಾರತೀಯ ಚಿತ್ರರಂಗದ ಶ್ರೀಮಂತ ಕುಟುಂಬಗಳಲ್ಲಿ ಒಂದು. ಆದರೆ ಅದೇ ಕುಟುಂಬದ ಕರಿಶ್ಮಾ ಕಪೂರ್ ಅವರು 'ನಾನು ಮಗಳ ಶಾಲೆಯ ಶುಲ್ಕವನ್ನು ಎರಡು ತಿಂಗಳಿಂದಲೂ ಕಟ್ಟಲು ಆಗಿಲ್ಲ ನನ್ನ ಬಳಿ ಹಣವಿಲ್ಲ' ಎಂದಿದ್ದಾರೆ. ಕರಿಶ್ಮಾ ಅವರ ಈ ಹೇಳಿಕೆ ಕಪೂರ್ ಕುಟುಂಬದ ಅಭಿಮಾನಿಗಳಿಗೆ ಆಶ್ಚರ್ಯ ತಂದಿದೆ.

ಕರಿಶ್ಮಾ ಕಪೂರ್, ಉದ್ಯಮಿ ಸಂಜಯ್ ಕಪೂರ್ ಅವರನ್ನು ಮದುವೆ ಆಗಿದ್ದು ದಂಪತಿಗೆ ಒಬ್ಬ ಮಗ ಹಾಗೂ ಮಗಳು ಇದ್ದಾರೆ. ಈ ಜೋಡಿ 2016 ರಲ್ಲಿ ವಿಚ್ಛೇದನ ಪಡೆದು ದೂರಾದರು. ಸಂಜಯ್ ಕಪೂರ್ ಕೆಟ್ಟ ಮನುಷ್ಯ, ಸಾಕಷ್ಟು ವಿಕೃತಿಗಳನ್ನು ನನ್ನ ಮೇಲೆ ತೋರಿದ್ದಾರೆ ಎಂದೆಲ್ಲ ಕರಿಶ್ಮಾ ಕಪೂರ್ ಆರೋಪಿಸಿದ್ದರು. ಸಂಜಯ್ ಕಪೂರ್ 2025ರಲ್ಲಿ ಆಕಸ್ಮಿಕವಾಗಿ ನಿಧನ ಹೊಂದಿದರು. ಆದರೆ ಈಗ ಸಂಜಯ್ ಅವರ ಮೂರನೇ ಪತ್ನಿ ಪ್ರಿಯಾ ಸಚ್‌ದೇವ್ ಮತ್ತು ಕರಿಶ್ಮಾ ಕಪೂರ್ ನಡುವೆ ಆಸ್ತಿಗಾಗಿ ವಿವಾದ ಚಾಲ್ತಿಯಲ್ಲಿದ್ದು, ಅಲ್ಲದೆ, ವಿಚ್ಛೇದನದ ಬಳಿಕ ನೀಡಲಾಗುವ ಜೀವನಾಂಶದ ಬಗ್ಗೆಯೂ ಪ್ರಕರಣ ನ್ಯಾಯಾಲಯದಲ್ಲಿದೆ. ದೆಹಲಿ ಹೈಕೋರ್ಟ್‌ನಲ್ಲಿ ಪ್ರಕರಣದ ವಿಚಾರಣೆ ನಡೆಯುತ್ತಿದೆ.

# ಕುಕ್ಕೆ ಸುಬ್ರಹ್ಮಣ್ಯಕ್ಕೆ ನಯನತಾರಾ ಭೇಟಿ



ದಕ್ಷಿಣದ ಬೇಡಿಕೆಯ ನಟಿಯರಲ್ಲಿ ಒಬ್ಬರಾದ ನಯನತಾರಾ ತಮ್ಮ ಪತಿಯೊಂದಿಗೆ ಕರ್ನಾಟಕದ ಪ್ರಸಿದ್ಧ ಕ್ಷೇತ್ರವಾದ ಕುಕ್ಕೆ ಸುಬ್ರಹ್ಮಣ್ಯ ಸ್ವಾಮಿ ದೇವಸ್ಥಾನ ಕ್ಕೆ ಭೇಟಿ ನೀಡಿ ವಿಶೇಷ ಪೂಜೆ ನೆರವೇರಿಸಿದ್ದಾರೆ. ಈ ಹಿಂದೆ ವಿಘ್ನಗಳು ಎದುರಾದಾಗ ಅನೇಕ ನಟ-ನಟಿಯರು ಕುಕ್ಕೆ ಸುಬ್ರಹ್ಮಣ್ಯ ದೇವಸ್ಥಾನದಲ್ಲಿ ಸರ್ಪ ಸಂಸ್ಕಾರ, ಸರ್ಪ ಶಾಂತಿ, ರಾಹು-ಕೇತು ಪೂಜೆ ನೆರವೇರಿಸಿದ್ದಾರೆ, ಈಗಲೂ ಅದು ಮುಂದವರಿಯುತ್ತಿದೆ. ಬಾಲಿವುಡ್ ನಟಿ ಕತ್ರಿನಾ ಕೈಫ್, ಶಿಲ್ಪಾ ಶೆಟ್ಟಿ ಇನ್ನೂ ಹಲವಾರು ಸೆಲೆಬ್ರಿಟಿಗಳು ಕುಕ್ಕೆ ಸುಬ್ರಹ್ಮಣ್ಯ ದೇವಾಲಯಕ್ಕೆ ಭೇಟಿ ನೀಡಿ ಪೂಜೆ ಮಾಡಿಸಿದ್ದಾರೆ. ಇನ್ನೂ ಕೆಲವರು ಸಂತಾನ ಫಲ ದೊರೆಯದ ಕಾರಣ ಈ ಕ್ಷೇತ್ರದಲ್ಲಿ ವಿಶೇಷ ಪೂಜೆ ಮಾಡಿಸುವ ಮೂಲಕ ಸಂತಾನ ಪ್ರಾಪ್ತಿ ದಕ್ಕಿಸಿಕೊಂಡಿದ್ದಾರೆ.ಈ ನಿಟ್ಟಿನಲ್ಲಿ ಪವರ್ ಜೋಡಿ ಎಂದೇ ಖ್ಯಾತಿಯಾಗಿರುವ ನಯನತಾರಾ ಮತ್ತು ವಿಘ್ನೇಶ್ ಶಿವನ್ ದಂಪತಿ ಜೋಡಿ, ಇತ್ತೀಚೆಗೆ ಕರ್ನಾಟಕದ ಪ್ರಸಿದ್ಧ ಕುಕ್ಕೆ ಸುಬ್ರಹ್ಮಣ್ಯ ದೇವಸ್ಥಾನಕ್ಕೆ ಭೇಟಿ ನೀಡಿತ್ತು. ದೇವಸ್ಥಾನದ ಮುಂಭಾಗ ಪತಿ ವಿಘ್ನೇಶ್ ಜೊತೆಗೆ ತೆಗೆಸಿದ ಫೋಟೋವೊಂದನ್ನ ನಯನತಾರಾ ತಮ್ಮ ಸೋಷಿಯಲ್ ಮೀಡಿಯಾ ಖಾತೆಗಳಲ್ಲಿ ಹಂಚಿಕೊಂಡಿದ್ದಾರೆ. ಇದಕ್ಕೆ ನೆಟ್ಟಿಗರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ನಯನತಾರಾ ನಿರ್ಮಾಣದ ಹಾಗೂ ವಿಘ್ನೇಶ್ ನಿರ್ದೇಶದ ಲವ್ ಇನ್ಸ್ಯೂರೆನ್ಸ್ ಕೊಂಪನಿ ಚಿತ್ರವು ಮುಂದಿನ ಡಿಸೆಂಬರ್ 18ರಂದು ತೆರೆಗೆ ಬರಲಿದೆ.

# ಆ ಫೋಟೋ ನನ್ನ ಮಗ ನೋಡಿದ್ರೆ...




ಹಿಂದಿ ಹಾಗೂ ಮರಾಠಿ ನಟಿ ಗಿರಿಜಾ ಓಕ್ ಇತ್ತೀಚೆಗೆ ಸಾಮಾಜಿಕ ಜಾಲತಾಣದಲ್ಲಿ ಸಖತ್ ವೈರಲ್ ಆಗಿದ್ದರು. ನೀಲಿ ಸೀರೆಯಲ್ಲಿನ ಫೋಟೋಗಳು ಸಾಮಾಜಿಕ ಜಾಲತಾಣದಲ್ಲಿ ಹಲ್‌ಚಲ್ ಎಬ್ಬಿಸಿದ್ದವು. ಕೆಲವು ತಮಾಷೆ ತಮಾಷೆಯಾದ ಮೀಮ್ಸ್‌ಗಳು ಕೂಡಾ ವೈರಲ್ ಆಗಿದ್ದವು. ಇದೆಲ್ಲದಕ್ಕೂ ಖುಷಿಯನ್ನ ವ್ಯಕ್ತಪಡಿಸಿದ್ದ ನಟಿಗೆ ಎಐ ಹಾಗೂ ಮಾರ್ಫಿಂಗ್ ಮಾಡಿರುವ ಅಶ್ಲೀಲ ಫೋಟೋಗಳು ಆತಂಕ್ಕೀಡುಮಾಡಿವೆ.

ಅಂದಹಾಗೆ ನಟಿ ಗಿರಿಜಾ ಅವರಿಗೆ 12 ವರ್ಷದ ಮಗನಿದ್ದು, ಮುಂದಿನ ದಿನಗಳಲ್ಲಿ ಆ ಫೋಟೋಗಳು ಆತನಿಗೆ ಲಭ್ಯವಾದ ಸಂದರ್ಭ ನೆನೆದರೆ ಭಯವಾಗುತ್ತೆ ಎನ್ನುವ ಅಭಿಪ್ರಾಯವನ್ನ ಹಂಚಿಕೊಂಡಿದ್ದಾರೆ. ಅಶ್ಲೀಲ ಫೋಟೋಗಳು ನನ್ನ ಗಮನಕ್ಕೆ ಬಂದಿದೆ. ಈಗ ನನ್ನ ಮಗ ಸೋಶಿಯಲ್ ಮೀಡಿಯಾ ಬಳಸುತ್ತಿಲ್ಲ. ದಯವಿಟ್ಟು ಈ ರೀತಿಯಾಗಿ ಅಶ್ಲೀಲವಾಗಿ ಫೋಟೋಗಳನ್ನ ಹರಡುವುದನ್ನ ನಿಲ್ಲಿಸಿ ಎಂದು ಮನವಿ ಮಾಡಿದ್ದಾರೆ. ಇತ್ತೀಚಿನ ದಿನಗಳಲ್ಲಿ ತಂತ್ರಜ್ಞಾನ ಎಷ್ಟು ಪೂರಕವೋ ಅಷ್ಟೇ ಮಾರಕವಾಗಿ ಪರಿಣಮಿಸುತ್ತಿವೆ. ಮರಾಠಿ ಹಾಗೂ ಹಿಂದಿ ಚಿತ್ರರಂಗದಲ್ಲಿ ಗುರ್ತಿಸಿಕೊಂಡಿರುವ ನಟಿ ಗಿರಿಜಾ ಅವರ ಫೋಟೋಗಳನ್ನ ವಿರೂಪಗೊಳಿಸಿದ ಕೇಡಿಗಳ ಬಗ್ಗೆ ಇನ್ನು ದೂರು ದಾಖಲು ಮಾಡಿಲ್ಲ ಸೋಶಿಯಲ್ ಮೀಡಿಯಾದಲ್ಲಿ ವಿಡಿಯೋ ಮೂಲಕ ಮನವಿಯನ್ನ ಮಾಡಿದ್ದಾರೆ ನಟಿ.

# ತುಳುನಾಡಿನಾದ್ಯಂತ ಜೈ ಸಿನಿಮಾ ಬಿಡುಗಡೆ

**ರೂಪೇಶ್ ಶೆಟ್ಟಿ ನಿರ್ದೇಶನ**



ಆರ್‌ಎಸ್ ಸಿನಿಮಾಸ್, ಶೂಲಿನ್ ಫಿಲಂಸ್, ಮುಗ್ರೋಡಿ ಪ್ರೊಡಕ್ಷನ್ ಲಾಂಛನದಲ್ಲಿ ತಯಾರಾದ ರೂಪೇಶ್ ಶೆಟ್ಟಿ ನಿರ್ದೇಶನದ ಜೈ ಸಿನಿಮಾ ಭಾರತ್ ಸಿನಿಮಾಸ್‌ನಲ್ಲಿ ಶುಕ್ರವಾರ ಬಿಡುಗಡೆಗೊಂಡಿತು. ಅತಿಥಿಗಳು ದೀಪ ಬೆಳಗಿಸುವ ಮೂಲಕ ಸಿನಿಮಾ ಪ್ರದರ್ಶನಕ್ಕೆ ಚಾಲನೆ ನೀಡಿದರು. ಬಳಿಕ ಮಾತಾಡಿದ ಹಿರಿಯ ರಂಗಕರ್ಮಿ ಡಾ.ದೇವದಾಸ್ ಕಾಪಿಕಾಡ್, ರೂಪೇಶ್ ಶೆಟ್ಟಿ ನಿರ್ದೇಶನದಲ್ಲಿ ಜೈ ಸಿನಿಮಾ ಬಹಳ ಚೆನ್ನಾಗಿ ಮೂಡಿಬಂದಿದೆ. ಪ್ರತಿಯೊಂದು ತುಳು ಸಿನಿಮಾಕ್ಕೂ ಬೆಂಬಲ ನೀಡಬೇಕಾದ್ದು ನಮ್ಮೆಲ್ಲರ ಕರ್ತವ್ಯ. ತುಳುವರು ಸಿನಿಮಾ ನೋಡುವ ಮೂಲಕ ಚಿತ್ರತಂಡವನ್ನು ಪ್ರೋತ್ಸಾಹಿಸಬೇಕು ಎಂದರು. ಚಿತ್ರ ನಿರ್ಮಾಪಕ ಪ್ರಕಾಶ್ ಪಾಂಡೇಶ್ವರ್ ಮಾತಾಡಿ, ತುಳು ಸಿನಿಮಾಗಳಿಗೆ ಇಂದು ನಿರ್ದಿಷ್ಟ ಥಿಯೇಟರ್ ಗಳಿವೆ. ಹೀಗಾಗಿ ಸಿನಿಮಾಕ್ಕೆ ಬಂಡವಾಳ ಹಾಕಿದ ನಿರ್ಮಾಪಕರು ಗೆಲ್ಲಬೇಕಾದರೆ ತುಳುವರು ಥಿಯೇಟರ್‌ಗಳಿಗೆ ಹೋಗಿ ಸಿನಿಮಾ ನೋಡಬೇಕು. ಜೈ ಸಿನಿಮಾ ಜನರ ನಿರೀಕ್ಷೆ ಹೆಚ್ಚಿಸಿದ್ದು ಸಿನಿಮಾ ಗೆಲ್ಲಲಿ ಎಂದು ಶುಭ ಹಾರೈಸಿದರು. ವೇದಿಕೆಯಲ್ಲಿ ನಟ ನಿರ್ದೇಶಕ ರೂಪೇಶ್ ಶೆಟ್ಟಿ, ಬಿಗ್ ಸಿನೆಮಾಸ್‌ನ ಬಾಲಕೃಷ್ಣ ಶೆಟ್ಟಿ, ಭೋಜರಾಜ್ ವಾಮಂಜೂರ್, ಬಾಳ ಜಗನ್ನಾಥ ಶೆಟ್ಟಿ, ನಾಯಕಿ ಅದ್ವಿತಿ ಶೆಟ್ಟಿ, ರಾಜ್ ದೀಪಕ್ ಶೆಟ್ಟಿ, ತಮ್ಮ ಲಕ್ಷ್ಮಣ, ಸಂದೀಪ್ ಶೆಟ್ಟಿ ಮಾಣಿಬೆಟ್ಟು, ಪ್ರಸನ್ನ ಶೆಟ್ಟಿ ಬೈಲೂರು, ಉಮೇಶ್ ಮಿಜಾರ್, ಸಚಿನ್ ಉಪ್ಪಿನಂಗಡಿ, ನವೀನ್ ಶೆಟ್ಟಿ, ಪ್ರೇಮ್ ಶೆಟ್ಟಿ, ಶೋಭಾ ಶೆಟ್ಟಿ, ಸುಜಾತ ಶಕ್ತಿನಗರ, ಜಯಶೀಲ ಮತ್ತಿತರರು ಉಪಸ್ಥಿತರಿದ್ದರು. ನಿತೇಶ್ ಶೆಟ್ಟಿ ಎಕ್ಕಾರ್ ಕಾರ್ಯಕ್ರಮ ನಿರೂಪಿಸಿದರು. ರೂಪೇಶ್ ಶೆಟ್ಟಿ ಸಿನಿಮಾದ ನಿರ್ದೇಶಕರಾಗಿದ್ದು, ಕತೆ ಹಾಗೂ ಸಂಭಾಷಣೆಯನ್ನು ಪ್ರಸನ್ನ ಶೆಟ್ಟಿ ಬೈಲೂರು ಬರೆದಿದ್ದಾರೆ. ಚಿತ್ರಕತೆ ರೂಪೇಶ್ ಶೆಟ್ಟಿ ಮತ್ತು ವೇಣು ಹಸ್ರಳ್ಳಿ. ಕ್ಯಾಮರಾ ವಿನುತ್ ಕೆ, ಸಂಗೀತ ಲೊಯ್ ವೆಲೆಂಟಿನ್ ಸಲ್ದಾನ, ಸಂಕಲನ ರಾಹುಲ್ ವಸಿಷ್ಠ, ನೃತ್ಯ ಹಾಗೂ ಎಕ್ಸಿಕ್ಯೂಟಿವ್ ಪ್ರೊಡ್ಯುಸರ್ ನವೀನ್ ಶೆಟ್ಟಿ ಆರ್ಯನ್ಸ್. ಜೈ ಸಿನಿಮಾದಲ್ಲಿ ಸುನೀಲ್ ಶೆಟ್ಟಿ, ಡಾ ದೇವದಾಸ್ ಕಾಪಿಕಾಡ್, ರಾಜ್ ದೀಪಕ್ ಶೆಟ್ಟಿ, ನವೀನ್ ಡಿ ಪಡೀಲ್, ಅರವಿಂದ ಬೋಳಾರ್, ಭೋಜರಾಜ ವಾಮಂಜೂರು, ಪ್ರಸನ್ನ ಶೆಟ್ಟಿ ಬೈಲೂರು, ಸಂದೀಪ್ ಶೆಟ್ಟಿ ಮಾಣಿಬೆಟ್ಟು, ಉಮೇಶ್ ಮಿಜಾರ್, ಮನೋಜ್ ಚೇತನ್ ಡಿ ಸೋಜ ಇನ್ನಿತರರು ಅಭಿನಯಿಸಿದ್ದಾರೆ.

# ಕೆಕೆಆರ್ ತಂಡದಿಂದ ರಸೆಲ್ ರಿಲೀಸ್!



ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್-19 ಕ್ಕಾಗಿ ಮುಂದಿನ ತಿಂಗಳು ಮಿನಿ ಹರಾಜು ನಡೆಯಲಿದೆ. ಈ ಹರಾಜಿಗೂ ಮುನ್ನ 10 ಫ್ರಾಂಚೈಸಿಗಳು ತಾವು ಉಳಿಸಿಕೊಂಡಿರುವ ಆಟಗಾರರ ಪಟ್ಟಿಯನ್ನು ಸಲ್ಲಿಸಬೇಕಾಗುತ್ತದೆ. ಹೀಗೆ ರಿಟೈನ್ ಪಟ್ಟಿ ಸಲ್ಲಿಸಲು ಕೊನೆಯ ದಿನಾಂಕ ನವೆಂಬರ್ 15. ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್-19 ಕ್ಕಾಗಿ ಕೊಲ್ಕತ್ತಾ ನೈಟ್ ರೈಡರ್ಸ್ ಫ್ರಾಂಚೈಸಿಯು ಆಂಡ್ರೆ ರಸೆಲ್ ಅವರನ್ನು ತಂಡದಲ್ಲಿ ಉಳಿಸಿಕೊಂಡಿಲ್ಲ. ಅಂದರೆ ಮಿನಿ ಹರಾಜಿಗಾಗಿ ತನ್ನ ಸ್ಟಾರ್ ಆಟಗಾರನನ್ನು ಬಿಡುಗಡೆ ಮಾಡಿದ್ದಾರೆ. ಕಳೆದೊಂದು ದಶಕದಿಂದ ಕೊಲ್ಕತ್ತಾ ನೈಟ್ ರೈಡರ್ಸ್ ತಂಡದ ಅವಿಭಾಜ್ಯ ಅಂಗವಾಗಿರುವ ಆಯಂಡ್ರೆ ರಸೆಲ್ ಅವರನ್ನು ಇದೇ ಮೊದಲ ಬಾರಿಗೆ ಬಿಡುಗಡೆ ಮಾಡಿದ್ದಾರೆ. ಅಂದರೆ ಕೆಕೆಆರ್ ಫ್ರಾಂಚೈಸಿಯು 2014 ರಲ್ಲಿ ಆಯಂಡ್ರೆ ರಸೆಲ್ ಅವರನ್ನು ಖರೀದಿಸಿತ್ತು. ಇದಾದ ಬಳಿಕ ಒಮ್ಮೆಯೂ ತಂಡದಿಂದ ಕೈ ಬಿಟ್ಟಿರಲಿಲ್ಲ. ಇದೀಗ 11 ವರ್ಷಗಳ ಬಳಿಕ ಆಯಂಡ್ರೆ ರಸೆಲ್ ಅವರನ್ನು ಕೆಕೆಆರ್ ಬಿಡುಗಡೆ ಮಾಡಿದ್ದು, ಅದರಂತೆ ಡಿಸೆಂಬರ್ 16 ರಂದು ನಡೆಯಲಿರುವ ಮಿನಿ ಹರಾಜಿನಲ್ಲಿ ಆಯಂಡ್ರೆ ರಸೆಲ್ ಅವರ ಹೆಸರು ಕೂಡ ಕಾಣಿಸಿಕೊಳ್ಳಲಿದೆ. ಈ ವೇಳೆ ಮತ್ತೆ ಕೆಕೆಆರ್ ಅವರಿಗಾಗಿ ಬಿಡ್ ಮಾಡಲಿದೆಯಾ ಕಾದು ನೋಡಬೇಕಿದೆ. ಏಕೆಂದರೆ ಆಯಂಡ್ರೆ ರಸೆಲ್ ಅವರನ್ನು ಕೆಕೆಆರ್ ಕಳೆದ ಸೀಸನ್‌ನಲ್ಲಿ 12 ಕೋಟಿ ರೂ.ಗೆ ಉಳಿಸಿಕೊಂಡಿತ್ತು. ಇದೀಗ ಅವರನ್ನು ಹರಾಜಿನಲ್ಲಿಟ್ಟು ಮತ್ತೆ ಕಡಿಮೆ ಮೊತ್ತಕ್ಕೆ ಖರೀದಿಸುವ ಸಾಧ್ಯತೆಯಿದೆ. ಆದರೆ ಈ ಖರೀದಿಯ ಪೈಪೋಟಿ ನಡುವೆ ರಸೆಲ್ ಬೇರೊಂದು ತಂಡದ ಪಾಲಾಗಲಿದ್ದಾರಾ ಕಾದು ನೋಡಬೇಕಿದೆ. ಆಯಂಡ್ರೆ ರಸೆಲ್ ಅಲ್ಲದೆ, ಕೊಲ್ಕತ್ತಾ ನೈಟ್ ರೈಡರ್ಸ್ ಫ್ರಾಂಚೈಸಿಯು ವೆಂಕಟೇಶ್ ಅಯ್ಯರ್ (23.75 ಕೋಟಿ ರೂ), ಅನ್ರಿಕ್ ನೋಕಿಯ (6.50 ಕೋಟಿ ರೂ) ಕ್ವಿಂಟನ್ ಡಿಕಾಕ್ (3.6 ಕೋಟಿ ರೂ), ಸೆನ್ಸರ್ ಜಾನ್ಸನ್ (2.8 ಕೋಟಿ ರೂ), ಮೊಯೀನ್ ಅಲಿ (2 ಕೋಟಿ ರೂ) ಹಾಗೂ ರಹಮಾನುಲ್ಲಾ ಗುರ್ಬಾಝ್ (2 ಕೋಟಿ ರೂ) ಅವರನ್ನು ಸಹ ಬಿಡುಗಡೆ ಮಾಡಿದೆ.

# ಐಪಿಎಲ್ ಹರಾಜಿಗೂ ಮುನ್ನ ಟ್ರೇಡ್ ಆದ ಆಟಗಾರರು



**ರಾಜಸ್ಥಾನ್ ರಾಯಲ್ಸ್ ಪರ ಜಡೇಜಾ**

ಇಂಡಿಯನ್ ಪ್ರೀಮಿಯರ್ ಲೀಗ್‌ನ ರಿಟೆನ್ಷನ್‌ಗೂ ಮುನ್ನ 10 ಫ್ರಾಂಚೈಸಿಗಳಿಗೆ ಆಟಗಾರರ ಟ್ರೇಡಿಂಗ್‌ಗೆ ಅವಕಾಶ ನೀಡಲಾಗಿದೆ. ಈ ಆಯ್ಕೆಯ ಮೂಲಕ ಇದೀಗ ಕೆಲ ಫ್ರಾಂಚೈಸಿಗಳು ಬೇರೆ ತಂಡಗಳಲ್ಲಿದ್ದ ಆಟಗಾರರನ್ನು ಖರೀದಿಸಿದೆ. ಹೀಗೆ ಟ್ರೇಡಿಂಗ್ ಪ್ರಕ್ರಿಯೆಯ ಮೂಲಕ ಹೊಸ ತಂಡಗಳಿಗೆ ಆಯ್ಕೆಯಾಗಿರುವ ಆಟಗಾರರ ಪಟ್ಟಿ ಈ ಕೆಳಗಿನಂತಿದೆ...

ಇಂಡಿಯನ್ ಪ್ರೀಮಿಯರ್ ಲೀಗ್ ಮಿನಿ ಹರಾಜು ಮುನ್ನ 10 ಆಟಗಾರರು ಬೇರೆ ಬೇರೆ ತಂಡಗಳಿಗೆ ಎಂಟ್ರಿ ಕೊಟ್ಟಿದ್ದಾರೆ. ಅದು ಸಹ ಟ್ರೇಡಿಂಗ್ ಆಯ್ಕೆ ಮೂಲಕ. ಇಲ್ಲಿ ಕೆಲವರು ಸ್ವಾಪ್ ಡೀಲ್ ಮೂಲಕ ಟ್ರೇಡ್ ಆದರೆ, ಇನ್ನು ಕೆಲ ಆಟಗಾರು ಕ್ಯಾಶ್ ಡೀಲ್ ಮೂಲಕ ಬೇರೆ ತಂಡಗಳಿಗೆ ಸೇರ್ಪಡೆಯಾಗಿದ್ದಾರೆ. ಅದರಂತೆ ಹರಾಜಿಗೂ ಮುನ್ನ ಟ್ರೇಡ್ ಆಗಿರುವ ಆಟಗಾರರ ಸಂಪೂರ್ಣ ಪಟ್ಟಿ ಈ ಕೆಳಗಿನಂತಿದೆ...

**ಸಂಜು ಸ್ಯಾಮ್ಸನ್:** ರಾಜಸ್ಥಾನ್ ರಾಯಲ್ಸ್ ತಂಡದ ನಾಯಕ ಸಂಜು ಸ್ಯಾಮ್ಸನ್ ಮುಂದಿನ ಸೀಸನ್‌ನಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ತಂಡದ ಪರ ಕಣಕ್ಕಿಳಿಯಲಿದ್ದಾರೆ. ಸಿಎಸ್‌ಕೆ ಫ್ರಾಂಚೈಸಿಯು ರವೀಂದ್ರ ಜಡೇಜಾ ಹಾಗೂ ಸ್ಯಾಮ್ ಕರನ್ ಅವರನ್ನು ನೀಡಿ ಸಂಜು ಸ್ಯಾಮ್ಸನ್ ಅವರನ್ನು ಸ್ವಾಪ್ ಡೀಲ್ ಮಾಡಿಕೊಂಡಿದೆ. ಕೋಲ್ಕತ್ತಾ ನೈಟ್ ರೈಡರ್ಸ್ ತಂಡದಲ್ಲಿದ್ದ ಯುವ ಸ್ಪಿನ್ನರ್ ಮಯಾಂಕ್ ಮಾರ್ಕಂಡೆಯನ್ನು ಮುಂಬೈ ಇಂಡಿಯನ್ಸ್ ಫ್ರಾಂಚೈಸಿಯು 30 ಲಕ್ಷ ರೂ. ಕ್ಯಾಶ್ ಡೀಲ್‌ನೊಂದಿಗೆ ತನ್ನದಾಗಿಸಿಕೊಂಡಿದೆ. ಅದರಂತೆ ಮುಂದಿನ ಸೀಸನ್‌ನಲ್ಲಿ ಮಯಾಂಕ್ ಮುಂಬೈ ಇಂಡಿಯನ್ಸ್ ಪರ ಕಣಕ್ಕಿಳಿಯಲಿದ್ದಾರೆ.

**ಶಾರ್ದೂಲ್ ಠಾಕೂರ್:** ಲಕ್ನೋ ಸೂಪರ್ ಜೈಂಟ್ಸ್ ತಂಡದಲ್ಲಿದ್ದ ಆಲ್‌ರೌಂಡರ್ ಶಾರ್ದೂಲ್ ಠಾಕೂರ್ ಅವರನ್ನು ಮುಂಬೈ ಇಂಡಿಯನ್ಸ್ ಫ್ರಾಂಚೈಸಿ ಖರೀದಿಸಿದೆ. ಎಲ್‌ಎಸ್‌ಜಿ ಫ್ರಾಂಚೈಸಿಗೆ 2 ಕೋಟಿ ರೂ. ನೀಡುವ ಮೂಲಕ ಮುಂಬೈ ಇಂಡಿಯನ್ಸ್ ಶಾರ್ದೂಲ್ ಠಾಕೂರ್ ಅವರನ್ನು ತನ್ನ ತೆಕ್ಕೆಗೆ ತೆಗೆದುಕೊಂಡಿದ್ದಾರೆ.

**ರವೀಂದ್ರ ಜಡೇಜಾ:** ಚೆನ್ನೈ ಸೂಪರ್ ಕಿಂಗ್ಸ್ ತಂಡದ ಸ್ಟಾರ್ ಆಲ್‌ರೌಂಡರ್ ರವೀಂದ್ರ ಜಡೇಜಾ ಮುಂದಿನ ಸೀಸನ್‌ನಲ್ಲಿ ರಾಜಸ್ಥಾನ್ ರಾಯಲ್ಸ್ ಪರ ಕಣಕ್ಕಿಳಿಯಲಿದ್ದಾರೆ.

# ಆರ್‌ಸಿಬಿ ರಿಲೀಸ್ ಮಾಡಿದ ಆಟಗಾರರ ಪಟ್ಟಿ

ಐಪಿಎಲ್ 2025ರಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದಲ್ಲಿ ಒಟ್ಟು 22 ಆಟಗಾರರು ಕಾಣಿಸಿಕೊಂಡಿದ್ದರು. ಈ 22 ಆಟಗಾರರಲ್ಲಿ ಬಹುತೇಕ ಪ್ಲೇಯರ್ಸ್ ಅನ್ನು ಮುಂದಿನ ಸೀಸನ್‌ಗಾಗಿ ತಂಡದಲ್ಲೇ ಉಳಿಸಿಕೊಳ್ಳಲಾಗಿದೆ. ಇದಾಗ್ಯೂ ಕೆಲ ಆಟಗಾರರನ್ನು ರಿಲೀಸ್ ಮಾಡಿದ್ದಾರೆ. ಹೀಗೆ ಆರ್‌ಸಿಬಿ ತಂಡದಿಂದ ಹೊರಬಿದ್ದ ಆಟಗಾರರ ಪಟ್ಟಿ ಈ ಕೆಳಗಿನಂತಿದೆ...

ಇಂಡಿಯನ್ ಪ್ರೀಮಿಯರ್ ಲೀಗ್ ಮಿನಿ ಹರಾಜಿಗೂ ಮುನ್ನ ಹಾಲಿ ಚಾಂಪಿಯನ್ ರಾಯಲ್ ಚಾಲೆಂಜರ್ಸ್ ಬೆಂಗಳೂರು ಫ್ರಾಂಚೈಸಿ 8 ಆಟಗಾರರನ್ನು ಬಿಡುಗಡೆ ಮಾಡಿದ್ದಾರೆ. ಕಳೆದ ಸೀಸನ್‌ನಲ್ಲಿ ಕಳಪೆ ಪ್ರದರ್ಶನ ನೀಡಿದ್ದ ಕೆಲ ಆಟಗಾರರಿಗೆ ಆರ್‌ಸಿಬಿ ಗೇಟ್ ಪಾಸ್ ನೀಡಿದೆ. ಕಳೆದ ಸೀಸನ್‌ನಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದಲ್ಲಿ ಒಟ್ಟು 22 ಆಟಗಾರರು ಕಾಣಿಸಿಕೊಂಡಿದ್ದರು. ಅಲ್ಲದೆ ಮೂವರು ಬದಲಿ ಆಟಗಾರರಾಗಿ ಎಂಟ್ರಿ ಕೊಟ್ಟಿದ್ದರು. ಇದೀಗ ಈ 25 ಆಟಗಾರರಲ್ಲಿ ಆರ್‌ಸಿಬಿ ಫ್ರಾಂಚೈಸಿ 17 ಆಟಗಾರರನ್ನು ಮಾತ್ರ ತಂಡದಲ್ಲೇ ಉಳಿಸಿಕೊಂಡಿದೆ. ಅದರಂತೆ ಆರ್‌ಸಿಬಿ ತಂಡದಿಂದ ಬಿಡುಗಡೆಯಾಗಿರುವ ಆಟಗಾರರ ಪಟ್ಟಿ ಈ ಕೆಳಗಿನಂತಿದೆ... ಐಪಿಎಲ್ 2025 ರಲ್ಲಿ ಆರ್‌ಸಿಬಿ ಪರ ಆಲ್‌ರೌಂಡರ್ ಆಗಿ ಕಾಣಿಸಿಕೊಂಡ ಲಿಯಾಮ್ ಲಿವಿಂಗ್‌ಸ್ಟೋನ್ ಅತ್ಯಂತ ಕಳಪೆ ಪ್ರದರ್ಶನ ನೀಡಿದ್ದರು. ಒಟ್ಟು 10 ಪಂದ್ಯಗಳಲ್ಲಿ ಬ್ಯಾಟ್ ಬೀಸಿದ್ದ ಲಿವಿಂಗ್‌ಸ್ಟೋನ್ ಕೇವಲ 112 ರನ್ ಮಾತ್ರ ಕಲೆಹಾಕಿದ್ದರು. ಅಲ್ಲದೆ 5 ಇನಿಂಗ್ಸ್‌ಗಳಲ್ಲಿ ಬೌಲಿಂಗ್ ಮಾಡಿರುವ ಅವರು ಕಬಳಿಸಿದ್ದು 2 ವಿಕೆಟ್ ಮಾತ್ರ. ಹೀಗಾಗಿಯೇ ಆರ್‌ಸಿಬಿ ಲಿಯಾಮ್ ಲಿವಿಂಗ್‌ಸ್ಟೋನ್ ಅವರನ್ನು ತಂಡದಿಂದ ಬಿಡುಗಡೆ ಮಾಡಿದ್ದಾರೆ.

# ಮೂವರು ವಿದೇಶಿ ಆಟಗಾರರು ಔಟ್



ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್-19ರ ಮಿನಿ ಹರಾಜಿಗೂ ಮುನ್ನ ಚೆನ್ನೈ ಸೂಪರ್ ಕಿಂಗ್ಸ್ ಫ್ರಾಂಚೈಸಿಯು ನಾಲ್ವರು ವಿದೇಶಿ ಆಟಗಾರರನ್ನು ಬಿಡುಗಡೆ ಮಾಡಿದ್ದಾರೆ. ಇಲ್ಲಿ ಸ್ಯಾಮ್ ಕರನ್ ಅವರನ್ನು ರಾಜಸ್ಥಾನ್ ರಾಯಲ್ಸ್ ಫ್ರಾಂಚೈಸಿ ಜೊತೆ ಸ್ವಾಪ್ ಡೀಲ್ ಮಾಡಿಕೊಂಡರೆ, ಇನ್ನುಳಿದ ಮೂವರನ್ನು ತಂಡದಿಂದ ರಿಲೀಸ್ ಮಾಡಲು ನಿರ್ಧರಿಸಿದ್ದಾರೆ.

**ಐಪಿಎಲ್ 2026:** ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್-19ರ ಮಿನಿ ಹರಾಜಿಗೂ ಮುನ್ನವೇ ಚೆನ್ನೈ ಸೂಪರ್ ಕಿಂಗ್ಸ್ ಫ್ರಾಂಚೈಸಿ ಹೊಸ ಲೆಕ್ಕಾಚಾರವನ್ನು ಹಾಕಿಕೊಂಡಿದೆ. ಅದರ ಮೊದಲ ಹೆಜ್ಜೆಯಾಗಿ ಸಿಎಸ್‌ಕೆ ರವೀಂದ್ರ ಜಡೇಜಾ ಹಾಗೂ ಸ್ಯಾಮ್ ಕರನ್ ಅವರನ್ನು ನೀಡಿ ರಾಜಸ್ಥಾನ್ ರಾಯಲ್ಸ್ ತಂಡದಿಂದ ಸಂಜು ಸ್ಯಾಮ್ಸನ್ ಅವರನ್ನು ಖರೀದಿಸಿದೆ.

ಇದರ ಜೊತೆಗೆ ಇದೀಗ ಸಿಎಸ್‌ಕೆ ತಂಡದ ಪ್ರಮುಖ ವೇಗಿ ಮತೀಶ ಪತಿರಾಣ ಅವರನ್ನು ಬಿಡುಗಡೆ ಮಾಡಲು ಮುಂದಾಗಿದೆ. ಚೆನ್ನೈ ಸೂಪರ್ ಕಿಂಗ್ಸ್ ಫ್ರಾಂಚೈಸಿಯ ಮೂಲಗಳ ಮಾಹಿತಿ ಪ್ರಕಾರ, ಪತಿರಾಣ ಅವರನ್ನು ತಂಡದಿಂದ ರಿಲೀಸ್ ಮಾಡಲು ಸಿಎಸ್‌ಕೆ ನಿರ್ಧರಿಸಿದ್ದು, ಅವರ ಬದಲಿಗೆ ಬೇರೊಬ್ಬ ವೇಗಿಯನ್ನು ಖರೀದಿಸಲು ಪ್ಲ್ಯಾನ್ ರೂಪಿಸಲಾಗಿದೆ.

ಇದರೊಂದಿಗೆ ಸಿಎಸ್‌ಕೆ ಫ್ರಾಂಚೈಸಿಯು ಮತೀಶ ಪತಿರಾಣ ಅವರನ್ನು ತಂಡದಲ್ಲಿ ಉಳಿಸಿಕೊಳ್ಳುವುದಿಲ್ಲ ಎಂಬುದು ಖಚಿತವಾಗಿದೆ. ಇದಕ್ಕೆ ಮುಖ್ಯ ಕಾರಣ ಕಳೆದ ಸೀಸನ್‌ನಲ್ಲಿನ ಪತಿರಾಣ ಅವರ ಪ್ರದರ್ಶನ. ಐಪಿಎಲ್ 2025 ರಲ್ಲಿ 12 ಪಂದ್ಯಗಳನ್ನಾಡಿದ್ದ ಲಂಕಾ ವೇಗಿ ಪಡೆದಿದ್ದು ಕೇವಲ 13 ವಿಕೆಟ್‌ಗಳನ್ನು ಮಾತ್ರ. ಇದೀಗ ಫಿಟ್‌ನೆಸ್ ಸಮಸ್ಯೆಯಿಂದ ಬಳಲುತ್ತಿರುವ ಮತೀಶ ಪತಿರಾಣ ಅವರನ್ನು ಉಳಿಸಿಕೊಳ್ಳದಿರಲು ಸಿಎಸ್‌ಕೆ ನಿರ್ಧರಿಸಿದೆ. ಇತ್ತ ಪತಿರಾಣ ಅವರನ್ನು ಬಿಡುಗಡೆ ಮಾಡುವುದರಿಂದ ಸಿಎಸ್‌ಕೆ ಫ್ರಾಂಚೈಸಿಯ ಹರಾಜು ಮೊತ್ತಕ್ಕೆ 13 ಕೋಟಿ ರೂ. ಸೇರ್ಪಡೆಯಾಗಲಿದೆ. ಮತೀಶ ಪತಿರಾಣ ಅಲ್ಲದೆ, ಚೆನ್ನೈ ಸೂಪರ್ ಕಿಂಗ್ಸ್ ಫ್ರಾಂಚೈಸಿಯು ನ್ಯೂಝಿಲೆಂಡ್ ಆಟಗಾರರಾದ ಡೆವೊನ್ ಕಾನ್ವೆ ಹಾಗೂ ರಚಿನ್ ರವೀಂದ್ರ ಅವರನ್ನು ಸಹ ರಿಲೀಸ್ ಮಾಡಲಿದ್ದಾರೆ.

# 7 ವಿಕೆಟ್ ಕಳೆದುಕೊಂಡ ಸೌತ್ ಆಫ್ರಿಕಾ

ಭಾರತ ಮತ್ತು ಸೌತ್ ಆಫ್ರಿಕಾ ನಡುವಣ ಮೊದಲ ಟೆಸ್ಟ್ ಪಂದ್ಯದ ಮೊದಲ ಇನಿಂಗ್ಸ್ ಮುಗಿದಿದೆ. ಈ ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟ್ ಮಾಡಿದ ಸೌತ್ ಆಫ್ರಿಕಾ 159 ರನ್‌ಗಳಿಸಿದರೆ, ಟೀಮ್ ಇಂಡಿಯಾ 189 ರನ್ ಗಳಿಸಿ ಆಲೌಟ್ ಆಗಿದೆ. ಈ ಮೂಲಕ ಭಾರತ ತಂಡ ಪ್ರಥಮ ಇನಿಂಗ್ಸ್‌ನಲ್ಲಿ ಕೇವಲ 30 ರನ್‌ಗಳ ಮುನ್ನಡೆ ಪಡೆದುಕೊಂಡಿದೆ. ಕೊಲ್ಕತ್ತಾದ ಈಡನ್ ಗಾರ್ಡನ್ಸ್ ಮೈದಾನದಲ್ಲಿ ನಡೆಯುತ್ತಿರುವ ಭಾರತ ಮತ್ತು ಸೌತ್ ಆಫ್ರಿಕಾ ನಡುವಣ ಮೊದಲ ಟೆಸ್ಟ್ ಪಂದ್ಯವು ಮೂರನೇ ದಿನದಲ್ಲೇ ಅಂತ್ಯಗೊಳ್ಳುವ ಸಾಧ್ಯತೆಯಿದೆ.

ಏಕೆಂದರೆ ಈ ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟ್ ಮಾಡಿದ ಸೌತ್ ಆಫ್ರಿಕಾ ತಂಡವು ಮೊದಲ ಇನಿಂಗ್ಸ್‌ನಲ್ಲಿ ಕೇವಲ 159 ರನ್‌ಗಳಿಸಿ ಆಲೌಟ್ ಆಗಿತ್ತು. ಇದಕ್ಕುತ್ತರವಾಗಿ ಮೊದಲ ಇನಿಂಗ್ಸ್ ಆಡಿದ ಮಾಡಿದ ಟೀಮ್ ಇಂಡಿಯಾ ಕೂಡ ಉತ್ತಮ ಆರಂಭ ಪಡೆದಿರಲಿಲ್ಲ. ಆರಂಭಿಕ ದಾಂಡಿಗ ಯಶಸ್ವಿ ಜೈಸ್ವಾಲ್ 12 ರನ್‌ಗಳಿಸಿ ಔಟಾದರೆ, ಕೆಎಲ್ ರಾಹುಲ್ 39 ರನ್‌ಗಳಿಸಿ ವಿಕೆಟ್ ಒಪ್ಪಿಸಿದರು. ಇನ್ನು ಮೂರನೇ ಕ್ರಮಾಂಕದಲ್ಲಿ ಕಣಕ್ಕಿಳಿದ ವಾಷಿಂಗ್ಟನ್ ಸುಂದರ್ ಕಲೆಹಾಕಿದ್ದು 29 ರನ್‌ಗಳು ಮಾತ್ರ. ನಾಲ್ಕನೇ ಕ್ರಮಾಂಕದಲ್ಲಿ ಬ್ಯಾಟ್ ಬೀಸಿದ ಶುಭ್‌ಮನ್ ಗಿಲ್ ಕೇವಲ 4 ರನ್‌ಗಳಿಸಿ ಗಾಯಗೊಂಡು ಹೊರ ನಡೆದರು. ಆ ಬಳಿಕ ಬಂದ ರಿಷಭ್ ಪಂತ್ 27 ರನ್‌ಗಳಿಸಿದರೆ, ರವೀಂದ್ರ ಜಡೇಜಾ 27 ರನ್ ಬಾರಿಸಿದರು. ಇನ್ನು ಧ್ರುವ್ ಜುರೆಲ್ ಕಲೆಹಾಕಿದ್ದು ಕೇವಲ 14 ರನ್ ಮಾತ್ರ.

ಇದರ ಬೆನ್ನಲ್ಲೇ ಅಕ್ಷರ್ ಪಟೇಲ್ (16) ಕೂಡ ವಿಕೆಟ್ ಒಪ್ಪಿಸಿದರು. ಇನ್ನುಳಿದಂತೆ ಕುಲ್ದೀಪ್ ಯಾದವ್, ಜಸ್‌ಪ್ರೀತ್ ಬುಮ್ರಾ ಹಾಗೂ ಮೊಹಮ್ಮದ್ ಸಿರಾಜ್ ತಲಾ ಒಂದೊಂದು ರನ್ ಕಲೆಹಾಕಲಷ್ಟೇ ಶಕ್ತರಾದರು. ಈ ಮೂಲಕ ಟೀಮ್ ಇಂಡಿಯಾ 62.2 ಓವರ್‌ಗಳಲ್ಲಿ 189 ರನ್‌ಗಳಿಸಿ ಪ್ರಥಮ ಇನಿಂಗ್ಸ್ ಅಂತ್ಯಗೊಳಿಸಿತ್ತು.



**159 ರನ್ ಗಳಿಸಿ ಆಲೌಟ್**

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966